ಬೀದರ ▪ ಕಲಬುರಗಿ ▪ ಯಾದಗಿರಿ ▪ ರಾಯಚೂರ ▪ ಕೊಪ್ಪಳ ▪ ಬಳ್ಳಾರಿ ▪ ಬಾಗಲಕೋಟೆ ▪ ವಿಜಯಪೂರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ

Postal Registration No :BDR/ 054/2024-2026 ▪ Email:mallammanudi@gmail.com

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

MALLAMMA NUDI REGIONAL NEWSPAPER

ಸಂಪಾದಕರು:ರಮೇಶರೆಡ್ಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಮೊ.9448604450

VOLUME-ಸಂಪುಟ:12 | ISSUE- ಸಂಚಿಕೆ: 326 | PAGE- ಪುಟ 8 | ಗುರುವಾರ – 26–12–2024, ಬೀದರ | RNI NO:KARKAN/2011/48371 | RS.ಬೆಲೆ 2/–

## ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನ ಪತ್ರಿಕೆ ಈಗ ಡಿಜಿಟಲೀಕರಣಗೊಂಡಿದೆ..

ಪ್ರೀಯ ಓದುಗರೇ.......

ಜಾಹಿರಾತುದಾರರೇ...

ತಮ್ಮೆಲ್ಲರ ಒತ್ತಾಸೆಯಂತೆ ನಿಮ್ಮ "ಮಲ್ಲಮ್ಮ ನುಡಿ" ಪ್ರಾದೇಶಿಕ ಕನ್ನಡ ದಿನ ಪತ್ರಿಕೆ ಈಗ ಡಿಜಿಟಲೀಕರಣಗೊಂಡಿದೆ ಎಂಬ ವಿಷಯ ತಿಳಿಸಲು ಹರ್ಷಿಸುತ್ತೇನೆ. ಹನ್ನೆರಡು ವಸಂತಗಳನ್ನು ಯಶಸ್ವಿಯಾಗಿ ಪೂರೈಸಿ, ಹದಿಮೂರನೇ ವಸಂತಕ್ಕೆ ಕಾಲಿಡುತ್ತಿರುವ ಈ ಸುಸಂದರ್ಬದಲ್ಲಿ, ರಾಜ್ಯವೇ ಅಲ್ಲದೇ ದೇಶದ ವಿವಿಧಡೆಗಳಿಂದ ಸಹಕಾರ ದೊರೆತ ಹಿನ್ನಲೆಯಲ್ಲಿ ಪತ್ರಿಕೆಯನ್ನು ಡಿಜಿಟಲೀಕರಣಗೊಳಿಸಿ ನೂತನ ವೆಬ್‌ಸೈಟ್ ಲಾಂಚ್ ಮಾಡುವ ಮೂಲಕ onlineನಲ್ಲಿ ಪತ್ರಿಕೆ ವೀಕ್ಷಿಸಲು ಅವಕಾಶವನ್ನು ಕಲ್ಪಿಸಲಾಗಿದೆ. ಈಗ ಪತ್ರಿಕೆಯನ್ನು ನೈಜ ಸುದ್ದಿಯೊಂದಿಗೆ ಹೊಸ ರೂಪದಲ್ಲಿ ನಿಮ್ಮ ಮುಂದಿಡುವ ಪ್ರಯತ್ನ ಮಾಡಲಾಗಿದೆ. ನಮ್ಮ ಈ ಪ್ರಯತ್ನಕ್ಕೆ. ಓದುಗರು, ಚಂದಾದಾರರು, ಹಾಗೂ ಜಾಹೀರಾತುದಾರರಾದ ತಾವುಗಳು ನಿಮ್ಮ ಮನೆಯ ಮಗನಂತೆ ತಮ್ಮ ಪ್ರೋತ್ಸಾಹ ವನ್ನು ಎಂದಿನಂತೆ ನೀಡುವಿರೆಂದು ನಿರೀಕ್ಷಿಸುತ್ತೇವೆ.



ಇಂತಿ
ರಮೇಶರಡ್ಡಿ
ಸಂಪಾದಕ

**www.mallammanudi.in**

# ರಾಜ್ಯದೆಲ್ಲೆಡೆ ಮಹಾತ್ಮಾ ಗಾಂಧಿ ವಿಚಾರಧಾರೆ ಪ್ರಚಾರ ಕಾರ್ಯಕ್ಕೆ ಒತ್ತು ಸಿಎಂ

ಮಲ್ಲಮ್ಮ ನುಡಿ ವಾರ್ತೆ

ಬೆಳಗಾವಿ : ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಅಂಗವಾಗಿ ಮಹಾತ್ಮ ಗಾಂಧೀಜಿ ವಿಚಾರಧಾರೆಯನ್ನು ಪ್ರಚುರಪಡಿಸಲು ವರ್ಷಪೂರ್ತಿ ರಾಜ್ಯದೆಲ್ಲೆಡೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ. ಬುಧವಾರ ಬೆಳಗಾವಿಯ ವಿಮಾನ ನಿಲ್ದಾಣದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, 1924ರಲ್ಲಿ ಮಹಾತ್ಮಾ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನಕ್ಕೆ ನೂರು ವರ್ಷ ಪೂರೈಸಿದ್ದು, ಆ ಪ್ರಯುಕ್ತ ಶತಮಾನೋತ್ಸವದ ಆಚರಣೆಗೆ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದೆ. ಇಂದು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆ, ಸುವರ್ಣ ವಿಧಾನಸೌಧದ ಪಕ್ಕದಲ್ಲಿ ಗಾಂಧೀಜಿಯವರ ಪ್ರತಿಮೆ ಅನಾವರಣ ಕಾರ್ಯಕ್ರಮವಿದ್ದು, ಡಿ.27ರಂದು ಸಾರ್ವಜನಿಕ ಸಭೆ ಏರ್ಪಡಿಸಲಾಗಿದೆ ಎಂದರು.

ಬದಲಾವಣೆ ನಿರಂತರ ಪ್ರಕ್ರಿಯೆ: ಕಾಂಗ್ರೆಸ್ ಅಧಿವೇಶನದಿಂದ ಪಕ್ಷದಲ್ಲಿ ಬದಲಾವಣೆ ಪರ್ವ ಆರಂಭವಾಗುವುದೇ ಎಂಬ ಪರ್ತಕರ್ತರ ಪ್ರಶ್ನೆಗೆ ಉತ್ತರಿಸಿದ ಸಿದ್ದರಾಮಯ್ಯ, 'ಬದಲಾವಣೆ ನಿರಂತರವಾದ ಪ್ರಕ್ರಿಯೆ. ನೂರು ವರ್ಷಗಳ ಹಿಂದಿದ್ದ ಸ್ಥಿತಿ ಈಗಿಲ್ಲ. ರಾಜಕೀಯ ಬದಲಾವಣೆ ಹಾಗೂ ಬೆಳವಣಿಗೆಗಳು ಆಗುತ್ತಿರುತ್ತವೆ' ಎಂದರು.



ತಪ್ಪು ಮರೆಮಾಚಲು ರಾಜ್ಯಪಾಲರಿಗೆ ದೂರು: ಸರಕಾರದ ವಿರುದ್ದ ರಾಜ್ಯಪಾಲರಿಗೆ ಪರಿಷತ್ ಸದಸ್ಯ ಸಿ.ಟಿ. ರವಿ ದೂರು ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, 'ಸಿ.ಟಿ.ರವಿ ತಮ್ಮ ತಪ್ಪನ್ನು ಮರೆಮಾಚಲು ಈ ರೀತಿ ಮಾಡುತ್ತಿದ್ದು, ಅವರ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಲಾಗಿದೆ. ತನಿಖಾ ವರದಿ ಬಂದ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಬಸವರಾಜ ಹೊರಟ್ಟಿ ಬಿಜೆಪಿ ಸಭೆಗೆ ಅವಕಾಶ ನೀಡಿದ್ದು ತಪ್ಪು: ಸಿ.ಟಿ.ರವಿ ಪ್ರಕರಣ ಸಂಬಂಧ ಒಬ್ಬ ಪೊಲೀಸ್ ಅಧಿಕಾರಿಯನ್ನು ಅಮಾನತ್ತು ಮಾಡಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, 'ಪೊಲೀಸ್ ಠಾಣೆಯಲ್ಲಿ ಬಿಜೆಪಿ ಸಭೆ ನಡೆಸಲು ಅವಕಾಶ ಕೊಟ್ಟ ಕಾರಣಕ್ಕಾಗಿ ಅಧಿಕಾರಿಯನ್ನು ಅಮಾನತ್ತುಗೊಳಿಸಲಾಗಿದೆ. ಪೊಲೀಸ್ ಠಾಣೆಯೊಂದರಲ್ಲಿ ರಾಜಕೀಯ ಪಕ್ಷದ ಸಭೆ ನಡೆಸಲು ಅವಕಾಶ ನೀಡಿದ್ದು ತಪ್ಪು. ಸಿ.ಟಿ.ರವಿಗೆ ರಕ್ಷಣೆ ನೀಡುವ ಉದ್ದೇಶದಿಂದ ಅವರನ್ನು ಬೇರೆಡೆಗಳಿಗೆ ಕರೊದೊಯ್ಯಲಾಗಿತ್ತು ಎಂದು ಈಗಾಗಲೇ ಬೆಳಗಾವಿ ಆಯುಕ್ತರು ಸ್ಪಷ್ಟಣೆ ನೀಡಿದ್ದಾರೆ.

## ಬಾಬಾಸಾಹೇಬರ ರಾಜೀನಾಮೆ ಪತ್ರವನ್ನು ಬಹಿರಂಗಪಡಿಸದೇ ಕಾಂಗ್ರೆಸ್ಸಿನಿಂದ ಕುಟುಂಬ ರಾಜಕಾರಣ: ತೇಲ್ಕೂರ್

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ:ಡಿ.25: ಯಾವ ಕಾಂಗ್ರೆಸ್ ಪಕ್ಷ ಡಾ. ಬಿ.ಆರ್. ಅಂಬೇಡ್ಕರ್ ಅವರನ್ನು ನಿರಂತರವಾಗಿ ಅಗೌರವ, ಅವಮಾನ ಮಾಡಿದೆಯೋ ಅದೇ ಕಾಂಗ್ರೆಸ್ ಪಕ್ಷ ಈಗ ಅವರ ಹೆಸರಿನ ಮೇಲೆ ರಾಜಕೀಯ ಮಾಡುತ್ತಿದೆ. ಕಾಂಗ್ರೆಸ್ ಪಕ್ಷ ಯಾವಾಗಲೂ ಅಂಬೇಡ್ಕರ್ ವಿರೋಧಿಯಾಗಿತ್ತು ಎಂದು ಮಾಜಿ ಶಾಸಕ ರಾಜಕುಮಾರ್ ಪಾಟೀಲ್ ತೇಲ್ಕೂರ್ ಅವರು ಕಾಂಗ್ರೆಸ್ ಪಕ್ಷದ ವಿರುದ್ಧ ಕಿಡಿಕಾರಿದ್ದಾರೆ.

ಸಾಮಾನ್ಯವಾಗಿ ಒಬ್ಬ ವ್ಯಕ್ತಿ ಮಂತ್ರಿಮಂಡಲಕ್ಕೆ ರಾಜೀನಾಮೆ ನೀಡಿದಾಗ ಅವರಿಗೆ ಸದನದಲ್ಲಿ ಮಾತನಾಡುವ ಅವಕಾಶ ನೀಡಲಾಗುತ್ತದೆ. ಆದರೆ, ಡಾ. ಬಿ.ಆರ್. ಅಂಬೇಡ್ಕರ್ ಅವರು ರಾಜೀನಾಮೆ ನೀಡಿದಾಗ ಅವರಿಗೆ ಸದನವನ್ನುದ್ದೇಶಿಸಿ ಮಾತನಾಡಲು ಅವಕಾಶ ನೀಡಲಿಲ್ಲ. ತಮ್ಮ ರಾಜೀನಾಮೆ ಪತ್ರದಲ್ಲಿ ಬಾಬಾಸಾಹೇಬ್ ಅಂಬೇಡ್ಕರ್ ಅವರು ಪ್ರಧಾನಿ ಜವಾಹರಲಾಲ್ ನೆಹರು ಅವರ ನಡೆಯನ್ನು ಕಟುವಾಗಿ ಟೀಕಿಸಿದ್ದಾರೆ ಎಂದು ಅವರು ಹೇಳಿಕೆಯಲ್ಲಿ ವಿವರಿಸಿದ್ದಾರೆ.

ಭಾರತದಲ್ಲಿನ ಪರಿಶಿಷ್ಟ ಜಾತಿಯ ಜನರ ಹೀನ ಪರಿಸ್ಥಿತಿಗೆ ಸಮಾನಾಂತರವಾದ ಹೀನ ಪರಿಸ್ಥಿತಿ ಈ ದೇಶದಲ್ಲಿ ಬೇರೆ ಯಾವ ಜನರದ್ದು ಬೇರೆ ಯಾವ ಜನರದ್ದು ಇರಲು ಸಾಧ್ಯವಿಲ್ಲ. ಇಷ್ಟಾದರೂ ಕೂಡ ಪರಿಶಿಷ್ಟ ಜಾತಿಯವರಿಗೆ ಏಕೆ ಪರಿಹಾರ ನೀಡಲಾಗುತ್ತಿಲ್ಲ?. ಈ ಸರ್ಕಾರ ಮುಸ್ಲಿಮರನ್ನು ರಕ್ಷಿಸುವುದರಲ್ಲಿ ತೋರುತ್ತಿರುವ ಕಾಳಜಿಯನ್ನು ಒಮ್ಮೆ ನೋಡಿ. ಮುಸ್ಲಿಮರನ್ನು ರಕ್ಷಿಸುವುದರಲ್ಲಿ ಪ್ರಧಾನಿಯವರು ವಿಪರೀತ ಕಾಳಜಿ ತೋರುತ್ತಿದ್ದಾರೆ. ಹೌದು, ಈ ದೇಶದ ಮುಸ್ಲಿಮರಿಗೆ ಸರಿಯಾದ ರಕ್ಷಣೆ ನೀಡಲೇಬೇಕು. ಆದರೆ, ಭಾರತದಲ್ಲಿ ಮುಸ್ಲಿಂಮರು ಮಾತ್ರ ರಕ್ಷಣೆಗೆ ಅರ್ಹರಾಗಿರುವವರೇ?" ಎಂದು ತಮ್ಮ ರಾಜೀನಾಮೆ ಪತ್ರದಲ್ಲಿ ಬಾಬಾಸಾಹೇಬರು ಬರೆಯುತ್ತಾರೆ. ಇದೇ ಕಾರಣದಿಂದ ಕಾಂಗ್ರೆಸ್ ಬಾಬಾಸಾಹೇಬ್ ಅಂಬೇಡ್ಕರ್ ಅವರ ಪತ್ರವನ್ನು ಸಾರ್ವಜನಿಕರಿಂದ ಮರೆಮಾಚಿಸಿದೆ. ಯಾಕೆ ಆ ಪತ್ರವನ್ನು ಬಹಿರಂಗಗೊಳಿಸಲಿಲ್ಲ ಎನ್ನುವ ಪ್ರಶ್ನೆಗೆ ಕಾಂಗ್ರೆಸ್ ದೇಶದ ಜನತೆಗೆ ಉತ್ತರಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಇದಕ್ಕಾಗಿಯೇ ಕಾಂಗ್ರೆಸ್ ಎಂದಿಗೂ ಬಾಬಾಸಾಹೇಬರ ರಾಜೀನಾಮೆ ಪತ್ರವನ್ನು ಬಹಿರಂಗಗೊಳಿಸಲಿಲ್ಲ. ಒಂದು ವೇಳೆ ಪತ್ರ ಬಹಿರಂಗವಾಗಿದಿದ್ದರೆ ಪಂಡಿತ್ ಜವಾಹರ್ ಲಾಲ್ ನೆಹರು ಅವರ ವರ್ಚಸ್ಸಿಗೆ ಅತಿದೊಡ್ಡ ಕಳಂಕ ಮೆತ್ತುತ್ತಿತ್ತು ಎಂಬ ಭಯ ಕಾಂಗ್ರೆ ಸ್‌ಗೆ ಕಾಡಿದೆ ಎಂದು ಅವರು ಟೀಕಿಸಿದ್ದಾರೆ.

ಕಾಂಗ್ರೆಸ್ ಪಕ್ಷವು ಎಂದಿಗೂ ಬಾಬಾಸಾಹೇಬರಿಗೆ ಭಾರತ ರತ್ನ, ಪದ್ಮಭೂಷಣ ಅಥವಾ ಪದ್ಮಶ್ರೀ ಪ್ರಶಸ್ತಿಗಳನ್ನು ನೀಡಲಿಲ್ಲ. ಆದರೆ, ಬಾಬಾ ಸಾಹೇಬರನ್ನು ಚುನಾವಣೆಯಲ್ಲಿ ಸೋಲಿಸಿದ ನಾರಾಯಣ್ ಸಾಧುಬಾ ಕಚೋಳಕರ್ ಅವರಿಗೆ 1970ರಲ್ಲಿ ಪದ್ಮಭೂಷಣ ನೀಡಿ ಗೌರವಿಸಿತ್ತು. ಕಜ್ರೋಳಕರ್ ಅವರ ಚುನಾವಣೆಯಲ್ಲಿ ಪಂಡಿತ್ ನೆಹರೂ ಅವರು ಬಹಳ ಮುತುವರ್ಜಿಯಿಂದ ಪ್ರಚಾರ ಮಾಡಿದರು. ಇದು ಕಾಂಗ್ರೆಸ್ ಪಕ್ಷದ ಹಾಗೂ ನೆಹರೂ ಅವರಿಗೆ ಬಾಬಾ ಸಾಹೇಬರ ಬಗ್ಗೆ ಇದ್ದ ಅಸಹನೆಯನ್ನು ಎತ್ತಿ ತೋರಿಸುತ್ತದೆ.

ಬಾಬಾಸಾಹೇಬ್ ಅಂಬೇಡ್ಕರ್ ಅವರು ಸಚಿವ ಸಂಪುಟದಲ್ಲಿ ಇನ್ನು ಮುಂದೆ ಇರುವುದಿಲ್ಲ ಎಂದು ತಮ್ಮ ಖುಷಿಯನ್ನು ವ್ಯಕ್ತಪಡಿಸುತ್ತಾ ಪಂಡಿತ್ ಜವಾಹರಲಾಲ್ ನೆಹರು ಅವರು ಎಡ್ವಿನಾ ಮೌಂಟ್ ಬ್ಯಾಟನ್ಗೆ ಪತ್ರ ಬರೆದಿದ್ದಾರೆ. ಇಂತ ಹೀನ ಮನಸ್ಥಿತಿಯನ್ನು ಹೊಂದಿರುವ ಕಾಂಗ್ರೆಸ್ ಪಕ್ಷ ಇಂದು ಅಂಬೇಡ್ಕರ್ ಅವರಿಗೆ ಗೌರವ (2ನೇ ಪುಟ ನೋಡಿ...)

## ಒಳಚರಂಡಿ ದುರಸ್ತಿ ವೇಳೆ ಉಸಿರುಗಟ್ಟಿ ಕಾರ್ಮಿಕ ಸಾವು

ಮಲ್ಲಮ್ಮ ನುಡಿ ವಾರ್ತೆ



ಚಿತ್ರದುರ್ಗ: ಒಳಚರಂಡಿ ದುರಸ್ತಿ ಕಾರ್ಮಿಕ ಉಸಿರುಗಟ್ಟಿ ಸಾವನ್ನಪ್ಪಿರುವ ಭೀಕರ ಘಟನೆ ಚಿತ್ರದುರ್ಗದಲ್ಲಿ ನಡೆದಿದೆ.

ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ ಈ ಘಟನೆ ನಡೆದಿದ್ದು, ಇಲ್ಲಿನ ರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಡಿಸೆಂಬರ್ 18ರಂದು ನಡೆದಿದ್ದ ದುರ್ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಮೃತ ಕಾರ್ಮಿಕನನ್ನು ಚಳ್ಳಕೆರೆಯ ಗಾಂಧಿನಗರ ಬಡಾವಣೆಯ ರಂಗಸ್ವಾಮಿ (48) ಎಂದು ಗುರುತಿಸಲಾಗಿದೆ.

ಮೂಲಗಳ ಪ್ರಕಾರ ಒಳಚರಂಡಿ ಕಟ್ಟಿಕೊಂಡಿದ್ದರಿಂದ ರಾಘವೇಂದ್ರ ಕಲ್ಯಾಣ ಮಂಟಪದ ಮಾಲೀಕ ಅದರ ದುರಸ್ತಿಗಾಗಿ ರಂಗಸ್ವಾಮಿಯನ್ನು ಕರೆಸಿದ್ದರು. ಆದರೆ ದುರಸ್ತಿಗಾಗಿ ಒಳಚರಂಡಿಗೆ ಇಳಿದ ಆತ ಉಸಿರುಗಟ್ಟಿ ಸಾವನ್ನಪ್ಪಿದ್ದಾನೆ.

ಆರಂಭದಲ್ಲಿ ಆತ ನೀರಿನ ತೊಟ್ಟಿಯಲ್ಲಿ ಮುಳುಗಿ ಸಾವನ್ನಪ್ಪಿದ್ದ ಎಂದು ಹೇಳಲಾಗಿತ್ತು. ಆದರೆ ಬಳಿಕ ಸಫಾಯಿ ಕರ್ಮಚಾರಿಗಳ ಸೇವಾ ಸಮಿತಿ ಈ ಬಗ್ಗೆ ಡಿಸಿ ಕಚೇರಿಗೆ ದೂರು ಸಲ್ಲಿಸಿದಾಗ ಪ್ರಕರಣ ಬೆಳಕಿಗೆ ಬಂದಿದೆ.

ದೂರು ಆಧರಿಸಿ ನಗರಸಭೆ ಕಂದಾಯ ನಿರೀಕ್ಷಕ ಗುರುಪ್ರಸಾದ್ ಸ್ಥಳ ಪರಿಶೀಲನೆ ನಡೆಸಿದಾಗ ರಂಗಸ್ವಾಮಿ ಉಸಿರುಗಟ್ಟಿ ಸಾವನ್ನಪ್ಪಿರುವುದು ಸ್ಪಷ್ಟವಾಗಿದೆ. ಇದೀಗ ಕಲ್ಯಾಣ ಮಂಟಪದ ಮಾಲೀಕ ಗುರುವೀರ ನಾಯಕ್ ವಿರುದ್ಧ ಚಳ್ಳಕೆರೆ ಪೊಲೀಸ್ ಠಾಣೆಗೆ ನಗರಸಭೆ ಅಧಿಕಾರಿ ದೂರು ಸಲ್ಲಿಸಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ನಡೆಸಿದ್ದಾರೆ.

## ಗೊಬ್ಬುರ (ಬಿ) ಬಳಿ ಸರಣಿ ಅಪಘಾತ: ಸ್ಥಳದಲ್ಲೇ ಮೂವರ ಸಾವು



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಡಿ.25:ಸರಣಿ ಅಪಘಾತ ಸಂಭವಿಸಿ ಸ್ಥಳದಲ್ಲಿಯೇ ಮೂವರು ಮೃತಪಟ್ಟು, ಐದಕ್ಕೂ ಹೆಚ್ಚು ಜನರು ಗಾಯಗೊಂಡ ಘಟನೆ ಅಫಜಲಪುರ ತಾಲ್ಲೂಕಿನ ಗೊಬ್ಬುರ(ಬಿ) ಗ್ರಾಮದ ಬಳಿ ಬುಧವಾರ ಸಂಭವಿಸಿದೆ. ಕಬ್ಬಿನ ಲಾರಿ, ಟೆಂಪೋ ಮತ್ತು ದ್ವಿಚಕ್ರವಾಹನದ ನಡುವೆ ಸರಣಿಯ ಅಪಘಾತ ಸಂಭವಿಸಿದ ಪರಿಣಾಮ ಅನಾಹುತ ಸಂಭವಿಸಿದೆ.

ಮೃತರನ್ನು ಕಲಬುರ್ಗಿ ನಗರದ ಸ್ಟೇಶನ್ ಬಜಾರ್ ನಿವಾಸಿಗಳಾದ ವಿನೀತಾ ರವಿರಾವ್ (54), ಅನುಪ್ ಮಾಧವ್ ಬೆಂಗೇರಿ(29) ಮತ್ತು ಗೊಬ್ಬುರ್ (ಬಿ) ಗ್ರಾಮದ ನಿವಾಸಿ ಮತ್ತು ದ್ವಿಚಕ್ರವಾಹನ ಸವಾರ ಬಸವರಾಜ್ ಚಿಸ್ತಿ ಎಂದು ಗುರುತಿಸಲಾಗಿದೆ. ಘಟನೆಯಲ್ಲಿ 5ಕ್ಕೂ ಹೆಚ್ಚು ಮಂದಿ ಗಂಭೀರ ಗಾಯಗೊಂಡಿರುವುದು ವರದಿಯಾಗಿದೆ.

(2ನೇ ಪುಟ ನೋಡಿ...)

## ದೆಹಲಿ ಸಿಎಂ ಅತಿ ಶೀಘ್ರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ,ಡಿ.25:ದೆಹಲಿ ಚುನಾವಣೆಗೂ ಮುನ್ನವೇ ಮುಖ್ಯಮಂತ್ರಿ ಅತಿಶಿ ಅವರನ್ನು ನಕಲಿ ಪ್ರಕರಣದಲ್ಲಿ ಶೀಘ್ರ ಬಂಧಿಸಲಾಗುವುದೆಂದು ಅರವಿಂದ ಕೇಜ್ರಿವಾಲ್ ಹೇಳಿದ್ದಾರೆ.

ಎಎಪಿ ಕಲ್ಯಾಣ ಯೋಜನೆಗಳು, ಮಹಿಳಾ ಸಮ್ಮಾನ್ ಯೋಜನೆ ಮತ್ತು ಸಂಜೀವಿನಿ ಯೋಜನೆಗಳಿಗೆ ಅಡ್ಡಿಪಡಿಸಲು ದೆಹಲಿ ಸಿಎಂ ಅತಿಶಿ ಅವರನ್ನು ಬಂಧಿಸಲು ಪಿತೂರಿ ನಡೆಸಲಾಗುತ್ತಿದೆ ಎಂದು ದೆಹಲಿ ಮಾಜಿ ಸಿಎಂ ಕೇಜ್ರಿವಾಲ್ ಹೇಳಿದ್ದಾರೆ.

ಮುಂದಿನ ದಿನಗಳಲ್ಲಿ ನಕಲಿ ಪ್ರಕರಣದಲ್ಲಿ ಅತಿಶಿ ಅವರನ್ನು ಬಂಧಿಸಲು ಈಗಾಗಲೇ ಯೋಜನೆಗಳನ್ನು ರೂಪಿಸಲಾಗಿದೆ. ಇದಕ್ಕೂ ಮುನ್ನ ಆಪ್ ನಾಯಕರ ಮೇಲೆ ದಾಳಿ ನಡೆಸಲು ಯೋಜಿಸಲಾಗಿದೆ. ಪಕ್ಷದ ಆಡಳಿತ ರಚನೆಯನ್ನು ಅಸ್ಥಿರಗೊಳಿಸುವ ಉದ್ದೇಶದಿಂದ ಹಿರಿಯ ಎಎಪಿ ನಾಯಕರು ಊಹಿತ ದಾಳಿಗಳನ್ನು ಎದುರಿಸಬಹುದು

(2ನೇ ಪುಟ ನೋಡಿ...)

## ಜಮ್ಮು ಕಾಶ್ಮೀರದಲ್ಲಿ ಸೇನಾ ವಾಹನ ಅಪಘಾತ; ಕರ್ನಾಟಕದ ಮೂವರು ಯೋಧರು ಮೃತ್ಯು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಜಮ್ಮು ಮತ್ತು ಕಾಶ್ಮೀರದ ಪೂಂಛ್ ಜಿಲ್ಲೆಯ ಗಡಿ ನಿಯಂತ್ರಣ ರೇಖೆ ಬಳಿ ಮಂಗಳವಾರ ಸಂಜೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಕರ್ನಾಟಕದ ಮೂವರ ಸಹಿತ ಐವರು ಯೋಧರು ಹುತಾತ್ಮರಾಗಿದ್ದಾರೆ.

ಘಟನೆಯಲ್ಲಿ ಐವರು ಯೋಧರು ಗಾಯಗೊಂಡಿದ್ದು ಅವರನ್ನು ಸೇನಾ ಆಸ್ಪತ್ರೆಗೆ ದಾಖಲಿಸಲಾಗಿದೆ.

ಬೆಳಗಾವಿಯ ದಯಾನಂದ ತಿರಕಣ್ಣವರ (45), ಕುಂದಾಪುರ ಬಳಿಯ ಕೋಟೇಶ್ವರ ಬೀಜಾಡಿಯ ಅನೂಪ್ (31) ಬಾಗಲಕೋಟೆಯ ಮಹೇಶ್ ಮಾರಿಗೊಂಡ (25



) ಮೃತ ಯೋಧರು. ಇನ್ನಿಬ್ಬರು ಮಹಾರಾಷ್ಟ್ರದವರು.

ಯೋಧರು ಸೇನಾ ವಾಹನದಲ್ಲಿ ಮೆಂಡರ್ ಎಂಬ ಪ್ರದೇಶಕ್ಕೆ ಕರ್ತವ್ಯಕ್ಕೆ ತೆರಳುತ್ತಿದ್ದ ವೇಳೆ ಕಿರಿದಾದ ರಸ್ತೆಯಲ್ಲಿ 150 ಅಡಿ ಆಳದ ಪ್ರಪಾತಕ್ಕೆ ವಾಹನ ಉರುಳಿ ಬಿದ್ದು ಅಪಘಾತ ಸಂಭವಿಸಿದೆ ಎಂದು ಮೂಲಗಳು ಸ್ಪಷ್ಟಪಡಿಸಿವೆ.

ಉಡುಪಿ ಜಿಲ್ಲೆ ಕುಂದಾಪುರದ ಬೀಜಾಡಿಯ ಅನೂಪ್ ಪೂಜಾರಿ ಸೇನೆಗೆ ಸೇರಿ 13 ವರ್ಷವಾಗಿತ್ತು. ಅವರು ಮರಾಠ ಬೆಟಾಲಿಯನ್ ನಲ್ಲಿ ಸೇವೆ ಸಲ್ಲಿಸುತ್ತಿದ್ದರು. ಹುತಾತ್ಮರಾಧ ಯೋಧ ಅನೂಪ್ ಅವರಿಗೆ ವಿವಾಹವಾಗಿದ್ದು 2 ವರ್ಷದ ಹೆಣ್ಣು ಮಗುವಿದೆ.

ಬಾಗಲಕೋಟೆ ಜಿಲ್ಲೆರಬಕವಿಬನಹಟ್ಟಿ ತಾಲ್ಲೂಕಿನ ಮಹಾಲಿಂಗಪುರ ನಿವಾಸಿ ಮಹೇಶ್ ನಾಗಪ್ಪ ಮಾರಿಗೊಂಡ ಅವರು 11 ನೆ ಮರಾಠ ರೆಜಿಮೆಂಟ್ ನಲ್ಲಿ ಸೇವೆ ಸಲ್ಲಿಸುತ್ತಿದ್ದರು.

ಬೆಳಗಾವಿಯ ಸಾಂಬ್ರಾ ಗ್ರಾಮದ ಯೋಧ ಸುಬೇದಾರ್ ದಯಾನಂದ ಅವರು, ಕೆಲವು ವರ್ಷಗಳಿಂದ ಸೇನೆಯಲ್ಲಿ ದೇಶದ ವಿವಿಧ ಭಾಗಗಳಲ್ಲಿ ಸೇವೆ ಸಲ್ಲಿಸಿದ್ದರು.

ಯೋಧರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

## ಶಾಂತಿ ಹಾಗೂ ನೆಮ್ಮದಿ ಪ್ರಾಪ್ತಿಗಾಗಿ ಮಂದಿರಗಳು ಅಗತ್ಯ: ಹಾರಕೂಡ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಭಾರತ ಒಂದು ಅಧ್ಯಾತ್ಮದ ತವರು. ಇಲ್ಲಿ ಮಠ, ಮಂದಿರಗಳಿಗೆ ಅಪಾರ ಗೌರವವಿದೆ. ಒತ್ತಡದ ಈ ಬದುಕಿನಲ್ಲಿ ಶಾಂತಿ ಹಾಗೂ ನೆಮ್ಮದಿ ಅಗತ್ಯವಿದ್ದು, ಮಂದಿರಗಳು ಹಾಗೂ ಮಠ, ಮಾನ್ಯಗಳಿಂದ ಇದು ದೊರೆಯುತ್ತದೆ ಎಂದು ಹಾರಕೂಡ ಪೂಜ್ಯ ಡಾ.ಚನ್ನವೀರ ಶಿವಾಚಾರ್ಯರು ನುಡಿದರು. ತಾಲೂಕಿನ ಹೊನ್ನಿಕೇರಿ ಸಿದ್ದೇಶ್ವರ ದೇವಸ್ಥಾನ ಹತ್ತಿರದಲ್ಲಿ ನಿರ್ಮಿಸಲಾದ ನೂತನ ಸಾಯಿಬಾಬಾ ಮಂದಿರ ಉದ್ಘಾಟಿಸಿ ಮಾತನಾಡಿರುವ ಅವರು, ನಿರಾಕಾರ ಸಾಕಾರವಾಗಲು ಒಂದು ಸಾಧನ ಅಗತ್ಯ. ಇಲ್ಲಿ ಅಧ್ಯಾತ್ಮ ಸಾಕಾರವಾಗಲು ಪ್ರವಚನ, ಭಕ್ತಿಯ ಸಾಕಾರಕ್ಕೆ ಪೂಜೆ, ಜ್ಞಾನದ ಸಾಕಾರಕ್ಕೆ ಪುಸ್ತಕ, ಪ್ರಸಾದದ ಸಾಕಾರಕ್ಕೆ ಅನ್ನವಾದರೆ ನೆಮ್ಮದಿಯ ಸಾಕಾರವೇ ಮಂದಿರ ನಿರ್ಮಾಣ. ಆದ್ದರಿಂದ ಆತ್ಮಾನಂದ ಪರಮಾನಂದವಾಗಲು ಪರಮಾತ್ಮನ ಸಾಕಾರ ಅಗತ್ಯವೆಂದು ಪ್ರತಿಪಾದಿಸಿದರು.

ಸೃಷ್ಟಿಯಲ್ಲಿ ದೇವರು ಇದ್ದಾನೆ ಎಂಬುದಕ್ಕೆ ಅದರಲ್ಲಿರುವ ಶಕ್ತಿ ಕಾರಣ. ಅದನ್ನು ಪತ್ತೆ (2ನೇ ಪುಟ ನೋಡಿ...)

## ಕಾಂಗ್ರೆಸ್ ಸರ್ಕಾರದಲ್ಲಿ ಜನಪ್ರತಿನಿಧಿಗಳಿಗೆ ರಕ್ಷಣೆಯೇ ಇಲ್ಲ: ವಿಜಯೇಂದ್ರ ಆರೋಪ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಬೆಂಗಳೂರಿನ ನಂದಿನಿ ಲೇಔಟ್ ನಲ್ಲಿ ಡಿ. 25ರ ಬೆಳಗ್ಗೆ ರಾಜರಾಜೇಶ್ವರಿ ನಗರದ ಶಾಸಕರಾದ ಮುನಿರತ್ನ ಮೇಲೆ ದುಷ್ಕರ್ಮಿಗಳು ಕಲ್ಲು ತೂರಾಟ ನಡೆಸಿರುವ ಘಟನೆ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತೀವ್ರವಾಗಿ ಕಿಡಿಕಾರಿದ್ದಾರೆ. ಬಿಜೆಪಿ ಶಾಸಕರ ಮೇಲೆ ಪದೇ ಪದೇ ಹಲ್ಲೆಗಳು ನಡೆಯುತ್ತಿವೆ. ಕಾಂಗ್ರೆಸ್ ಸರ್ಕಾರದಲ್ಲಿ ಜನಪ್ರತಿನಿಧಿಗಳಿಗೆ ರಕ್ಷಣೆ ಇಲ್ಲದಂತಾಗಿದೆ ಎಂದು ಅವರು ಹೇಳಿದ್ದಾರೆ.

ತಮ್ಮ ಅಸಮಾಧಾನವನ್ನು ಟ್ವೀಟರ್ ನಲ್ಲಿ ಹೊರಹಾಕಿರುವ ಅವರು, "ಕಾಂಗ್ರೆಸ್ ಸರ್ಕಾರದಲ್ಲಿ ಜನಪ್ರತಿನಿಧಿಗಳಿಗೆ ರಕ್ಷಣೆಯಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಕಾನೂನು ಸುವ್ಯವಸ್ಥೆಯನ್ನು (2ನೇ ಪುಟ ನೋಡಿ...)

ಅಟಲ್ ಬಿಹಾರಿ ವಾಜಪೇಯಿ ಜನ್ಮ ಶತಮಾನೋತ್ಸವ

## ಸದೈವ್ ಅಟಲ್‌ನಲ್ಲಿ ಪ್ರಧಾನಿ ಮೋದಿ, ರಾಷ್ಟ್ರಪತಿ ಮುರ್ಮು ನಮನ!




ಮಲ್ಲಮ್ಮ ನುಡಿ ವಾರ್ತೆ

ಹೊಸದಿಲ್ಲಿ : ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವದ ಪ್ರಯುಕ್ತ ಗಣ್ಯರು ಅಟಲ್ ಸದೈವ ಸ್ಮಾರಕದಲ್ಲಿ ವಾಜಪೇಯಿ ಅವರಿಗೆ ಪುಷ್ಪನಮನ ಸಲ್ಲಿಸಿದರು. ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನಕರ್, ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರಾಧ್ಯಕ್ಷ ಜೆಪಿ ನಡ್ಡಾ ಸೇರಿ ಹಲವರು ಅಟಲ್ ಬಿಹಾರಿ ವಾಜಪೇಯಿಗೆ ಪುಷ್ಪ ನಮನ ಸಲ್ಲಿಸಿ, ಗೌರವ ಸಮರ್ಪಿಸಿದರು. ದಿಲ್ಲಿಯಲ್ಲಿರುವ ವಾಜಪೇಯಿ ಸ್ಮಾರಕ ಅಟಲ್ ಸದೈವಕ್ಕೆ ಬೆಳಗ್ಗೆಯಿಂದಲೇ ಆಗಮಿಸಿದ ಗಣ್ಯರು ಪುಷ್ಪ ನಮನ ಸಲ್ಲಿಸಿ, ದೇಶಕ್ಕೆ ವಾಜಪೇಯಿ ನೀಡಿದ ಕೊಡುಗೆಗಳನ್ನು ಸ್ಮರಿಸಿದರು. ಅದಲ್ಲದೇ ಪ್ರಧಾನಿ ನರೇಂದ್ರ ಮೋದಿ ಅಟಲ್ ಬಿಹಾರಿ ವಾಜಪೇಯಿ ಅವರ ಬಗ್ಗೆ ವಿಶೇಷ ಲೇಖನ ಬರೆದಿದ್ದು, ತಮ್ಮ ನೆಚ್ಚಿನ ನಾಯಕನನ್ನು ಸ್ಮರಿಸಿದ್ದಾರೆ.

## ಅಮಿತ್ ಶಾ ಕ್ಷಮೆಯಾಚನೆಗೆ ಜಿಲ್ಲಾ ಕಾಂಗ್ರೆಸ್ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಡಿ.25: ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಡಾ. ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ಹೇಳಿರುವ ಅವಹೇಳನಕಾರಿ ಹೇಳಿಕೆಗಳನ್ನು ಖಂಡಿಸಿ ಮತ್ತು ಶಾ ಅವರು ಈ ಕುರಿತು ಬಹಿರಂಗ ಕ್ಷಮೆಯಾಚಿಸಬೇಕು ಎಂದು ರಾಷ್ಟ್ರಪತಿಗಳಿಗೆ ಜಿಲ್ಲಾ ಕಾಂಗ್ರೆಸ್ ಸಮಿತಿ ಪತ್ರ ಬರೆದು ಆಗ್ರಹಿಸಿದೆ.

ನಿನ್ನೆ ಸಂಜೆ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಅಲ್ಲಂ ಪ್ರಶಾಂತ್ ಅವರ ನೇತೃತ್ವದಲ್ಲಿ ಅಮಿತ್ ಶಾ ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ಮತ್ತು ಅವರ ಈ ಅಕ್ಷೇಪಾರ್ಹ ಹೇಳಿಕೆಗಳಗೆ ಸಾರ್ವಜನಿಕವಾಗಿ ಕ್ಷಮೆಯಾಚಿಸುವಂತೆ ಮನವಿ ಪತ್ರವನ್ನು ಡಿಸಿಯವರಿಗೆ ಸಲ್ಲಿಸಿದರು.

ಈ ವೇಳೆ ಕಲ್ಲುಕಂಭ ಪಂಪಾಪತಿ, ಹುಮಯೂನ್ ಖಾನ್, ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ್, ಬ್ಲಾಕ್ ಅಧ್ಯಕ್ಷ ಮೀನಳ್ಳಿ ಚಂದ್ರಶೇಖರ್ ಗೌಡ, ಕೆಪಿಸಿಸಿ ವಕ್ತರ ವೆಂಕಟೇಶ್ ಹೆಗಡೆ, ಯಾತಿಂದ್ರಗೌಡ, ಸಿದ್ದೇಶ್, ಸಂಗನಕಲ್ ವಿಜಯ್ ಕುಮಾರ್ ಇನ್ನಿತರರು ಇದ್ದರು.

## ಒಂದನೆ ಪುಟದಿಂದ...

## ಶಾಂತಿ ಹಾಗೂ ನೆಮ್ಮದಿ ಪ್ರಾಪ್ತಿಗಾಗಿ ಮಂದಿರಗಳು ಅಗತ್ಯ: ಹಾರಕೂಡ ಶ್ರೀಗಳು

ಹಚ್ಚಲು ನಿತ್ಯ ಪ್ರಕೃತಿಯ ಆರಾಧನೆ ಅಗತ್ಯ. ನಿಸರ್ಗದತ್ತವಾದ ಈ ಭೂಮಿಯಲ್ಲಿ ಸಾಧನೆಯ ಬದುಕು ಕಟ್ಟಿಕೊಳ್ಳಬೇಕಿದೆ, ಹುಟ್ಟು-ಸಾವಿನ ಮಧ್ಯದ ಜೀವನ ಸಾಧನೆಗೆ ಯೋಗ್ಯವಾಗಿದೆ. ಆದ್ದ-ರಿಂದ ಮನುಷ್ಯನಾಗಿ ಹುಟ್ಟಿದ ಬಳಿಕ ಒಂದು ಒಳ್ಳೆಯ ಕಾರ್ಯ ಮಾಡಬೇಕು. ಗುದಗೆ ಹಾಗೂ ಅಷ್ಟೂರ್ ಕುಟುಂಬ ಇಂಥ ಮಂದಿರ ನಿರ್ಮಿಸಿ ಸಾವಿರಾರು ಭಕ್ತರಿಗೆ ಭಕ್ತಿ ಮಾರ್ಗ ತೋರಿಸುವಲ್ಲಿ ಮುಂದಾಗಿರುವುದು ಉತ್ತಮ ನಡೆ ಎಂದು ಬಣ್ಣಿಸಿದರು.

ಖೇಳಗಿಯ ಪೂಜ್ಯ ಮ.ನಿ.ಪ್ರ ಶಿವಲಿಂಗ ಶ್ರೀಗಳು ಮಾತನಾಡಿ, ಜೀವನದಲ್ಲಿ ಜಲ, ಅನ್ನ ಹಾಗೂ ಸುಭಾಷಿತ ಇವು ಪ್ರಮುಖ ರತ್ನಗಳಾಗಿವೆ. ಜಲದ ಸಂಸ್ಕಾರದಿಂದ ಉದಕವಾಗಿ, ಅನ್ನವನ್ನು ಸಂಸ್ಕರಿಸುವುದರಿಂದ ಪ್ರಸಾದವಾಗಿ ಹಾಗೂ ಉತ್ತಮ ಮಾತುಗಾರಿಕೆಯಿಂದ ಪ್ರವಚನವಾಗಿ ಪರಿವರ್ತನೆಯಾಗುತ್ತವೆ. ಆದ್ದರಿಂದ ಮನುಷ್ಯನ ಬದುಕು ಸುಸಂಸ್ಕೃತವಾಗಲು ನಿತ್ಯ ಧ್ಯಾನ, ಜಪ, ತಪ, ಪೂಜೆ ಇತ್ಯಾಧಿ ಧಾರ್ಮಿಕ ಹಾಗೂ ಅಧ್ಯಾತ್ಮಿಕ ಕಾರ್ಯಕ್ರಮಗಳಿಗೆ ಮಾರು ಹೋಗಬೇಕೆಂದು ಕರೆ ನೀಡಿದರು.

ಪ್ರಾಸ್ತಾವಿಕ ಮಾತನಾಡಿದ ಮಂದಿರದ ನಿರ್ಮಾಣ ಮಾಡಿದ ಹಿರಿಯ ರಾಜಕಾರಣಿ ಬಾಬುರಾವ ಗುದಗೆ ಅವರು, ಇದು ಕಳೆದ 40 ವರ್ಷಗಳ ಹಿಂದೆ ಜನವಾಡ ಗ್ರಾಮದ ನಿವಾಸಿ ಹಣಮಂತರಾವ ಪಾಂಡ್ರೆ ಎಂಬುವವರ ಬಳಿ 112 ಎಕರೆ ಕೃಷಿಗೆ ಯೊಗ್ಯವಿಲ್ಲದ ಜಮಿನು ಖರಿದಿಸಿ ಇಲ್ಲಿ ಸಾಯಿಬಾಬಾ ಮಂದಿರ ಸ್ಥಾಪಿಸಬೇಕೆಂಬ ಚಿಂತನೆ ನನ್ನಲ್ಲಿ ಬೇರೂರಿತು. ಮಂದಿರಕ್ಕಾಗಿ ಹಾಗೂ ಇಲ್ಲಿ ಆಗಮಿಸುವ ಭಕ್ತರ ವಾಸ್ತವ್ಯಕ್ಕಾಗಿ 10 ಎಕರೆ ಜಾಗ ಮೀಸಲಿಡಲಾಗಿದೆ. ಈ ಹತ್ತು ಎಕರೆ ಪರಿಸರದಲ್ಲಿ ಗೋಶಾಲೆ, ಪಾಠ, ಪ್ರವಚನಕ್ಕಾಗಿ ಮಂಟಪ ನಿರ್ಮಾಣ ಇತ್ಯಾದಿ ಧಾರ್ಮಿಕ ಯೊಗ್ಯ ಕಟ್ಟಡ ನಿರ್ಮಾಣ ಮಾಡಲಾಗುವುದು. ಇಲ್ಲಿ ಬರೀ 50 ಅಡಿ ಆಳದಲ್ಲಿ ನೀರು ಹತ್ತಿರುವ ಕಾರಣ ಈ ಮಂದಿರ ನಿರ್ಮಿಸಲು ಬೇಗ ಸಾಧ್ಯವಾಯಿತೆಂದು ತಿಳಿಸಿದರು.

ಕಾರ್ಯಕ್ರಮಕ್ಕೂ ಮುನ್ನ ರಾಜ್ಯದ ಪರಿಸರ, ಅರಣ್ಯ ಹಾಗೂ ಜೀವಶಾಸ್ತ್ರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆ ಮಾತನಾಡಿ, ಭರತ ಭೂಮಿ ಋಷಿ, ಮುನಿಗಳ ತವರು. ಹಾಗಾಗಿ ಇಲ್ಲಿ ಮಠ, ಮಂದಿರಗಳಿಗೆ ಬೆಲೆ ಇದೆ. ಒತ್ತಡದ ನಮ್ಮ ಬದುಕಿನಲ್ಲಿ ನೆಮ್ಮದಿ ಬೇಕಾದಲ್ಲಿ ದೇವಸ್ಥಾನಗಳು ಬೇಕು. ಹಾಗಾಗಿ ಗುದಗೆ ಪರಿವಾರದವರು ಹಾಗೂ ಅಷ್ಟೂರ ಕುಟುಂಬದವರು ಸೇರಿ ನಿರ್ಮಿಸಿರುವ ಈ ಮಂದಿರ ಜಿಲ್ಲೆಯ ಭಕ್ತರ ಪಾಲಿನ ಭಕ್ತಿಯ ತಾಣವಾಗಲಿ ಎಂದು ಹರಸಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಎಂ.ಜಿ ಮುಳೆ, ಹಿರಿಯ ಪತ್ರಕರ್ತ ಶಿವಶರಣಪ್ಪ ವಾಲಿ, ಖ್ಯಾತ ವೈದ್ಯರಾದ ಡಾ.ಚಂದ್ರಕಾಂತ ಗುದಗೆ, ರಾಜಶೇಖರ ಅಷ್ಟೂರ್, ಡಾ.ಬಸವರಾಜ.ಜಿ.ಪಾಟೀಲ, ಬಿ.ಎಸ್ ಕುದುರೆ, ಮುರ್ಲಿಧರ ಎಕಲಾರಕರ್, ಮುರ್ಲಿಧರ ಮಹಾರಾಜ, ನರಸಿಂಗರಾವ ಸೂರ್ಯವಂಶಿ, ಗೀತಾ ಚಿದ್ರಿ, ಬಾಬು ವಾಲಿ, ಕಾಶಿನಾಥ ಬೆಲ್ದಾಳೆ ಹಾಗೂ ಇತರರು ಕಾರ್ಯಕ್ರಮದಲ್ಲಿದ್ದರು.

ಆರಂಭದಲ್ಲಿ ನಾಗೇಶ ಪಾಟೀಲ ಸ್ವಾಗತಿಸಿದರು. ಶಿರಡಿ ಸಾಯಿಬಾಬಾ ಮಂದಿರದಿಂದ ಆಗಮಿಸಿದ ಚಂದ್ರಶೇಖರ ಕುಲಕರ್ಣಿ ಹಾಗೂ ಸಂಗಡಿಗರು ಪೂಜಾ ವಿಧಿ ವಿಧಾನ ನಡೆಸಿಕೊಟ್ಟರು. ಇದೇ ವೇಳೆ ಮಂದಿರದ ಮೂರ್ತಿ ಉದ್ಘಾಟನೆ ಹಾಗೂ ಕಳಸಾರೋಹಣ ಕಾರ್ಯಕ್ರಮ ಜರುಗಿತು.

ಆಕಾಶವಾಣಿ ಕಲಾವಿದ ನವಲಿಂಗ ಪಾಟೀಲ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ನೂರಾರು ಭಕ್ತರು ಆಗಮಿಸಿ ದೇವರ ದರುಶನಗೈದು ಪ್ರಸಾದ ಸ್ವೀಕರಿಸಿ ಪುನಿತರಾದರು.

## ಗೊಬ್ಬುರ (ಬಿ) ಬಳಿ ಸರಣಿ ಅಪಘಾತ: ಸ್ಥಳದಲ್ಲೇ ಮೂವರ ಸಾವು

ಟೆಂಪೊದಲ್ಲಿದ್ದ ಮೃತರಿಬ್ಬರು ಗಾಣಗಾಪುರದ ದತ್ತಾತ್ರೇಯ ದೇವಸ್ಥಾನದ ದರ್ಶನ ಪಡೆದು ಕಲಬುರ್ಗಿಯತ್ತ ತೆರಳುತ್ತಿದ್ದರು. ಈ ವೇಳೆಯೇ ಲಾರಿ, ಟೆಂಪೋ ಮತ್ತು ದ್ವಿಚಕ್ರವಾಹನದ ನಡುವೆ ಅಪಘಾತ ಸಂಭವಿಸಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಘಟನಾ ಸ್ಥಳಕ್ಕೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಮತ್ತು ಡಿಎಸ್ಪಿ ಗೊಪಿ ಬಿ.ಆರ್, ಸಿಪಿಐ ಪ್ರಕಾಶ್ ಯಾತನೂರ್, ಸಿಬ್ಬಂದಿ ಸಂಗಣ್ಣ ಸೇರಿದಂತೆ ಗಣಗಾಪುರ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದರು. ಈ ಕುರಿತು ದೇವಲ್ ಗಾಣಗಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

## ಕಾಂಗ್ರೆಸ್ ಸರ್ಕಾರದಲ್ಲಿ ಜನಪ್ರತಿನಿಧಿಗಳಿಗೆ ರಕ್ಷಣೆಯೇ ಇಲ್ಲ: ವಿಜಯೇಂದ್ರ ಆರೋಪ

ಕೈಗೆತ್ತಿಕೊಂಡಿರುವ ಗೂಂಡಾಗಳು ಬಿಜೆಪಿ ಶಾಸಕರನ್ನು ಗುರಿಯಾಗಿಸಿಕೊಂಡು ದಾಳಿ ನಡೆಸುತ್ತಿದ್ದಾರೆ" ಎಂದು ಹೇಳಿದ್ದಾರೆ.

ಇತ್ತೀಚೆಗೆ, ಬೆಳಗಾವಿಯ ಸುವರ್ಣಸೌಧದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ಬಿಜೆಪಿ ಶಾಸಕ ಸಿಟಿ ರವಿ ನಡುವಿನ ವಾಕ್ಸಮರದ ಬಗ್ಗೆಯೂ ಉಲ್ಲೇಖಿಸಿದ ಅವರು, "ಬೆಳಗಾವಿಯ ಸುವರ್ಣಸೌಧದಲ್ಲಿ ಶಾಸಕ ಶ್ರೀ ಸಿ.ಟಿ ರವಿ ಅವರ ಮೇಲೆ ನಡೆದ ಹಲ್ಲೆಯ ಪ್ರಕರಣವನ್ನು ಲಘುವಾಗಿ ತೆಗೆದುಕೊಂಡಿರುವ ಸರ್ಕಾರದ ಧೋರಣೆಯಿಂದ ಪ್ರೇರಣೆ ಪಡೆದಿರುವ ಕಾಂಗ್ರೆಸ್ ಗೂಂಡಾಗಳು ಇಂದು ನಮ್ಮ ಶಾಸಕ ಶಾಸಕ ಮುನಿರತ್ನ ಅವರ ಮೇಲೆ ಹಲ್ಲೆ ನಡೆಸಿರುವ ಘಟನೆ ಅತ್ಯಂತ ಹೇಯಕರ ಹಾಗೂ ಖಂಡನೀಯ" ಎಂದು ಹೇಳಿದ್ದಾರೆ.

"ಜನರಿಗೆ ರಕ್ಷಣೆ ನೀಡಬೇಕಾದ ಜನಪ್ರತಿನಿಧಿಗಳಿಗೇ ರಕ್ಷಣೆ ಇಲ್ಲವೆಂದರೆ ಸಾಮಾನ್ಯ ಜನರ ಪಾಡೇನು ಎಂಬ ಆತಂಕ ಉಲ್ಬಣಗೊಳ್ಳುತ್ತಿದೆ. ಸಾಮಾಜಿಕ ಸುಭದ್ರತೆಯಿಲ್ಲದ ಅರಾಜಕತೆಯ ರಾಜ್ಯವನ್ನು ನಿರ್ಮಿಸಲು ಕಾಂಗ್ರೆಸ್ ಹೊರಟಂತಿದೆ" ಎಂದು ಅವರು ತಿಳಿಸಿದ್ದಾರೆ.

## ದೆಹಲಿ ಸಿಎಂ ಅತಿಶಿ ಶೀಘ್ರ ಬಂಧನ

ಎಂದು ಹೇಳಿರುವ ಕೇಜ್ರಿವಾಲ್, ಸಾರ್ವಜನಿಕರ ಪರ ಕೆಲಸ ಮಾಡುವ ಪಕ್ಷದ ಪ್ರಯತ್ನಗಳಿಗೆ ಅಡ್ಡಿಪಡಿಸುವ ಕುತಂತ್ರಗಳು ನಡೆಯುತ್ತಿವೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.

ದೆಹಲಿ ವಿಧಾನಸಭಾ ಚುನಾವಣೆಗೂ ಮುನ್ನ ಎಎಪಿ ಸರ್ಕಾರ ಪ್ರಮುಖ ಕಲ್ಯಾಣ ಯೋಜನೆಯನ್ನು ಜಾರಿಗೊಳಿಸುತ್ತಿರುವ ಸಮಯದಲ್ಲಿ ಈ ಆರೋಪಗಳು ಕೇಳಿ ಬಂದಿವೆ.

## ಕಾಂಗ್ರೆಸ್ಸಿನಿಂದ ಕುಟುಂಬ ರಾಜಕಾರಣ: ತೇಲ್ಕೂರ್

ನೀಡುವ ಪಕ್ಷ ಎಂದು ತಮ್ಮ ಬೆನ್ನನ್ನು ತಾವು ತಟ್ಟಿಕೊಳ್ಳುತ್ತಿರುವ ನಡೆ ನಾಚಿಕೆಗೇಡಿನ ಸಂಗತಿಯಾಗಿದೆ. ಇಂತಹ ಸ್ವಾರ್ಥವನ್ನು ಕಾಂಗ್ರೆಸ್ ಬಿಡಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಸುದೀರ್ಘ ಭಾಷಣದ ಒಂದು ಸಣ್ಣ ತುಣುಕನ್ನು ತಿರುಚಿ ಅಪಪ್ರಚಾರ ಮಾಡುವ ಮೂಲಕ ಕಾಂಗ್ರೆಸ್ ರಾಜಕೀಯಗೊಳಿಸುತ್ತಿದೆ. ಆದರೆ, ದೇಶದ ಜನತೆ ಕಾಂಗ್ರೆ ಸ್‌ನ ಶಡ್ಯಂತ್ರವನ್ನು ಅರಿತುಕೊಳ್ಳುವಷ್ಟು ಬುದ್ಧಿವಂತರಿದ್ದಾರೆ ಹಾಗೂ ಈ ಶಡ್ಯಂತ್ರಕ್ಕೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಅವರು ಎಚ್ಚರಿಸಿದ್ದಾರೆ.

ಬಾಬಾಸಾಹೇಬರು ದೇಶದ ಆರ್ಟಿಕಲ್ 370 ಹಾಗೂ ಪೂರ್ವ ಬಂಗಾಳದಲ್ಲಿ ಹಿಂದೂಗಳ ಮೇಲೆ ನಡೆದ ದೌರ್ಜನ್ಯವನ್ನು ವಿರೋಧಿಸಿದ್ದರು. ಬಿಜೆಪಿ ಹಾಗೂ ಕಾಂಗ್ರೆಸ್ನ ಪಕ್ಷದಗಳ ನಡುವಿನ ಸೈದ್ಧಾಂತಿಕ ವ್ಯತ್ಯಾಸವನ್ನು ಅರಿಯಬೇಕಾದ ಅವಶ್ಯಕತೆ ಇದೆ. ಭಾರತೀಯ ಜನತಾ ಪಾರ್ಟಿ ದೇಶದ ಪ್ರಗತಿಗಾಗಿ ಶ್ರಮಿಸಿದರೆ ಕಾಂಗ್ರೆಸ್ ಪಕ್ಷ ಒಂದು ಕುಟುಂಬದ ಪಕ್ಷವಾಗಿದೆ. ಭಾರತೀಯ ಜನತಾ ಪಾರ್ಟಿ ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವ ಜೊತೆಜೊತೆಗೆ ಸೈದ್ಧಾಂತಿಕ ವಿರೋಧಿಗಳನ್ನು ಕೂಡ ಗೌರವಿಸುವ ಸಂಸ್ಕೃತಿಯನ್ನು ಹೊಂದಿದೆ ಎಂದು ಅವರು ತಿಳಿಸಿದ್ದಾರೆ.

ಕಾಂಗ್ರೆಸ್ ಪಕ್ಷ ಒಂದು ಕುಟುಂಬದ ಶ್ರೇಯೋಭಿವೃದ್ಧಿಗೆ ಶ್ರಮಿಸುವ ಪಕ್ಷವಾಗಿದೆ. ಬಾಬಾ ಸಾಹೇಬರನ್ನು ಅಗೌರವಿಸುವ ಕಾಂಗ್ರೆಸ್ ಪಕ್ಷದ ಪರಂಪರೆಯನ್ನು ರಾಹು ಲ್ ಗಾಂಧಿ ಮುಂದುವರೆಸುತ್ತಿದ್ದಾರೆ. ಇಂತಹ ನಾಟಕಗಳಿಗೆ ರಾಹುಲ್ ಗಾಂಧಿ ಅಂತ್ಯ ಹಾಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

## ಮೈಸೂರಿನ ರಸ್ತೆಗೆ ಸಿದ್ದರಾಮಯ್ಯ ಹೆಸರು: ಸಿಎಂಗೆ ನೈತಿಕ ಹೊಣೆಗಾರಿಕೆ ಇಲ್ಲವೇ ಎಂದ ಬಿವೈ ವಿಜಯೇಂದ್ರ



ಬೆಂಗಳೂರು: ಮೈಸೂರಿನ ಪ್ರಮುಖ ರಸ್ತೆಯೊಂದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಸರಿಡುವ ಮಹಾನಗರ ಪಾಲಿಕೆಯ ಪ್ರಸ್ತಾವನೆಗೆ ತೀವ್ರ ಆಕ್ಷೇಪ ವ್ಯಕ್ತವಾಗಿದೆ. ಈ ವಿಚಾರದಲ್ಲಿ ಸಿಎಂಗೆ ನೈತಿಕ ಹೊಣೆಗಾರಿಕೆಯಿಲ್ಲವೇ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಪ್ರಶ್ನಿಸಿದ್ದಾರೆ.

ಮೈಸೂರು ಸಾಮ್ರಾಜ್ಯವನ್ನು ರಾಜರು ಮತ್ತು ಆಢಳಿತಗಾರರು ಕಟ್ಟಿ ಬೆಳೆಸಿದರು. ಆದರೆ, ಮಹಾನ್ ರಾಜವಂಶದ ಹೆಸರನ್ನು ಹೊಂದಿರುವ ರಸ್ತೆಗೆ ತಮ್ಮ ಹೆಸರಿಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಧರಿಸಿದ್ದಾರೆ. ಸದ್ಯ ಚುನಾಯಿತ ಪ್ರತಿನಿಧಿಗಳಿಲ್ಲದ ಮೈಸೂರು ಮಹಾನಗರ ಪಾಲಿಕೆಯು ಇಂತಹ ಪ್ರಮುಖ ನಿರ್ಧಾರ ಕೈಗೊಳ್ಳುವುದು ಎಷ್ಟು ಸಮಂಜಸವಾಗಿದೆ ಎಂದರು.

ಮುಖ್ಯಮಂತ್ರಿ ಅಧಿಕಾರದಲ್ಲಿದ್ದುಕೊಂಡು ತಮ್ಮ ಹೆಸರಿಡಲು ಪ್ರಯತ್ನಿಸುತ್ತಿರುವ ಸಿದ್ದರಾಮಯ್ಯ ಅವರಿಗೆ ನೈತಿಕ ಹೊಣೆಗಾರಿಕೆ ಇಲ್ಲವೇ? ತುಘಲಕ್ ಆಡಳಿತವನ್ನು ನೆನಪಿಸುವ ಆಡಳಿತದಲ್ಲಿ ಮಾತ್ರ ಇಂತಹ ನಡವಳಿಕೆಗಳನ್ನು ಕಾಣಬಹುದು ಎಂದು ಟೀಕಿಸಿದರು.

ಕೆಆರ್‌ಎಸ್ ರಸ್ತೆಯ ಲಕ್ಷ್ಮೀನಾರಾಯಣ ಸ್ವಾಮಿ ದೇವಸ್ಥಾನದಿಂದ ಮೇಟಗಳ್ಳಿ ರಾಯಲ್ ಜಂಕ್ಷನ್‌ವರೆಗಿನ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಎಂದು ನಾಮಕರಣ ಮಾಡುವ ಪ್ರಸ್ತಾವನೆಗೆ ಮೈಸೂರು ಮಹಾನಗರ ಪಾಲಿಕೆ ಇತ್ತೀಚೆಗೆ ಪತ್ರಿಕೆಗಳಲ್ಲಿ ಜಾಹೀರಾತು ನೀಡಿ ಆಕ್ಷೇಪಣೆಗಳನ್ನು ಆಹ್ವಾನಿಸಿದೆ. ಡಿ.13ರಂದು ಜಾಹೀರಾತು ಪ್ರಕಟವಾಗಿದ್ದು, ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು 30 ದಿನಗಳೊಳಗೆ ಲಿಖಿತವಾಗಿ ಸಲ್ಲಿಸಲು ಕೇಳಲಾಗಿದೆ.

ಕಾಂಗ್ರೆಸ್ ಶಾಸಕ ಹರೀಶ್ ಗೌಡ ಅವರ ಸಲಹೆಯನ್ನು ಆಧರಿಸಿ, ಮೈಸೂರು ಮಹಾನಗರ ಪಾಲಿಕೆ (ಎಂಸಿಸಿ) ನವೆಂಬರ್ 22 ರಂದು ನಡೆದ ಸಭೆಯಲ್ಲಿ ಈ ನಿರ್ಧಾರವನ್ನು ತೆಗೆದುಕೊಂಡಿದೆ. ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ಸಿದ್ದರಾಮಯ್ಯ ಅವರು ಆರೋಪಿಯಾಗಿದ್ದು, ಲೋಕಾಯುಕ್ತ ಪೊಲೀಸರಿಂದ ತನಿಖೆ ಎದುರಿಸುತ್ತಿದ್ದಾರೆ. ಹೀಗಿರುವಾಗ ಅವರ ಹೆಸರನ್ನು ಇಡುವುದಕ್ಕೆ ಪ್ರಸ್ತಾವನೆಗೆ ಆಕ್ಷೇಪಣೆಗಳು ಕೇಳಿಬಂದಿವೆ.

## ಮೂವರು ಕಿಡಿಗೇಡಿಗಳ ಬಂಧನ



**ಮಲ್ಲಮ್ಮ ನುಡಿ ವಾರ್ತೆ**

ಬೆಂಗಳೂರು: ಬಿಜೆಪಿ ಶಾಸಕ ಮುನಿರತ್ನ ಮೇಲೆ ಮೊಟ್ಟೆ ದಾಳಿ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಲಕ್ಷ್ಮಿದೇವಿನಗರ ವಾರ್ಡ್‌ನ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ವಾಜಪೇಯಿ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ತೆರಳಿದ ಮುನಿರತ್ನ ಅವರ ತಲೆಗೆ ಮೊಟ್ಟೆ ಹೊಡೆಯಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಸ್ಥಳಕ್ಕೆ ನಂದಿನಿ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಘಟನೆಗೆ ಕಾಂಗ್ರೆಸ್ ಮುಖಂಡರಾದ ಕುಸುಮಾ ಹಾಗೂ ಹನುಮಂತರಾಯಪ್ಪ ಕಾರಣ ಎಂದು ಆರೋಪಿಸಿರುವ ಮುನಿರತ್ನ, ನನ್ನನ್ನು ಕೊಲೆ ಮಾಡಲು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಸುರೇಶ್ ಯತ್ನಿಸುತ್ತಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಇದು ನನ್ನನ್ನು ಕೊಲ್ಲುವ ಪ್ರಯತ್ನವಾಗಿದೆ. ನನ್ನನ್ನು ಮುಗಿಸಲು ಸುಮಾರು 150 ಜನರನ್ನು ಕರೆಸಿದ್ದಾರೆ. ನನ್ನ ಬೆಂಬಲಿಗರು ಮತ್ತು ಪೊಲೀಸರು ಇಲ್ಲದಿದ್ದರೆ ನನ್ನನ್ನು ಹತ್ಯೆ ಮಾಡುತ್ತಿದ್ದರು. ಡಿಕೆ ಶಿವಕುಮಾರ್, ಡಿಕೆ ಸುರೇಶ್, ಹನುಮಂತರಾಯಪ್ಪ ಸೇರಿದಂತೆ ಕೆಲವರು ಇದರಲ್ಲಿ ಶಾಮೀಲಾಗಿದ್ದಾರೆ ಎಂದು ಮುನಿರತ್ನ ಆರೋಪಿಸಿದ್ದಾರೆ.

ಬೆಳಗಾವಿಯಲ್ಲಿ ಈ ಬಗ್ಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್ ಅವರು ಆರೋಪವನ್ನು ತಳ್ಳಿಹಾಕಿದರು. ಮಹಾತ್ಮ ಗಾಂಧಿಯವರ ಅಧ್ಯಕ್ಷತೆಯಲ್ಲಿ ನಡೆದ 1924ರ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚರಣೆಗೆ ತಯಾರಿ ನಡೆಸುತ್ತಿರುವುದಾಗಿ ಹೇಳಿದರು. ಮುನಿರತ್ನ ಅವರು ತಮ್ಮ ಕ್ಷೇತ್ರದಲ್ಲಿ ಕಾಂಗ್ರೆಸ್ ಕಾರ್ಯಕರ್ತರಿಗೆ ಬೆದರಿಕೆ ಹಾಕುತ್ತಿದ್ದಾರೆ ಎಂದು ಆರೋಪಿಸಿ ಸುರೇಶ್ ಆರೋಪವನ್ನು ತಳ್ಳಿಹಾಕಿದರು. ಮತ್ತೊಂದೆಡೆ ಗೃಹ ಸಚಿವ ಪರಮೇಶ್ವರ ಅವರು ಪ್ರಕರಣ ಸಂಬಂಧ 'ಮೂವರನ್ನು ಬಂಧಿಸಲಾಗಿದೆ. ಅವರು ಯಾರು ಮತ್ತು ಯಾಕೆ ಹೀಗೆ ಮಾಡಿದ್ದಾರೆ ಎಂಬುದನ್ನು ಪತ್ತೆಹಚ್ಚಲು ತನಿಖೆ ನಡೆಯುತ್ತಿದೆ ಎಂದರು.

ಶಾಸಕ ಮುನಿರತ್ನ ಮೇಲೆ ಮೊಟ್ಟೆ ದಾಳಿಯನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಖಂಡಿಸಿದ್ದಾರೆ. ಇಂತಹ ದಾಳಿ ಮುನಿರತ್ನಗೆ ಮಾತ್ರವಲ್ಲ, ಇಡೀ ರಾಜ್ಯಕ್ಕೆ ಮಾಡಿದ ಅವಮಾನ. ಕಾಂಗ್ರೆಸ್ ಅಧಿಕಾರದಲ್ಲಿರುವ ಕಾರಣ. ಇಂತಹ ದಾಳಿಗಳು ನಡೆಯುತ್ತಿವೆ. ಸಾರ್ವಜನಿಕ ಪ್ರತಿನಿಧಿ ಮೇಲೆ ಹಲ್ಲೆ ನಡೆದಿರುವುದು ಖಂಡನೀಯ ಎಂದು ವಿಜಯೇಂದ್ರ ಹೇಳಿದರು. ಅಷ್ಟೇ ಅಲ್ಲದೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಮಾಜಿ ಸಚಿವ ಸಿಟಿ ರವಿ ಕೂಡ ಘಟನೆಯನ್ನು ಖಂಡಿಸಿದ್ದಾರೆ.

ಅತ್ಯಾಚಾರ ಪ್ರಕರಣ ಸೇರಿದಂತೆ ಹಲವು ಪೊಲೀಸ್ ಪ್ರಕರಣಗಳನ್ನು ಎದುರಿಸುತ್ತಿರುವ ಮುನಿರತ್ನ ಇತ್ತೀಚೆಗೆ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದರು.

## ಮನೆ, ಮಳಿಗೆ ತೆರವು ಕಾರ್ಯಾಚರಣೆ: ಧರಣಿ



ತಗಡಿನ ಮಳಿಗೆಗಳನ್ನು ತೆರವುಗೊಳಿಸಿದ್ದಕ್ಕೆ ಮಹಿಳೆಯೊಬ್ಬರು ಆಕ್ರೋಶ ವ್ಯಕ್ತಪಡಿಸಿದರು.

ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 25 :- ನಗರದ ಚಿದ್ರಿ ರಿಂಗ್‌ರೋಡ್ ಸಮೀಪದ ರಸ್ತೆಗೆ ಹೊಂದಿಕೊಂಡಿದ್ದ ಮೂರು ತಗಡಿನ ಮಳಿಗೆ ಹಾಗೂ ಒಂದು ಮನೆಯನ್ನು ಮಂಗಳವಾರ ನಗರಸಭೆಯವರು ತೆರವುಗೊಳಿಸಿದರು.

ಜೆಸಿಬಿಗಳೊಂದಿಗೆ ಸ್ಥಳಕ್ಕಾಗಮಿಸಿದ ನಗರಸಭೆ ಅಧಿಕಾರಿಗಳು, ಸಿಬ್ಬಂದಿ ಮಳಿಗೆಯವರು, ಮನೆಯ ಮಾಲೀಕರನ್ನು ಹೊರಗೆ ಕಳಿಸಿ, ಜೆಸಿಬಿಯಿಂದ ಮನೆ ಹಾಗೂ ತಗಡಿನ ಮಳಿಗೆಗಳನ್ನು ತೆರವುಗೊಳಿಸಿದರು.

ತೆರವು ಕಾರ್ಯಾಚರಣೆಗೆ ಅಧಿಕಾರಿಗಳು ಮುಂದಾಗುತ್ತಿದ್ದಂತೆ ಮನೆಯ ಒಡತಿ ಗುಂಡಮ್ಮ ನರ್ಸಪ್ಪ ಚಿದ್ರಿ ಅವರು ತೀವ್ರ ವಿರೋಧ ವ್ಯಕ್ತಪಡಿಸಿದರು. 'ಯಾವುದೇ ರೀತಿಯ ಮುನ್ಸೂಚನೆ ನೀಡಿಲ್ಲ. ನೋಟಿಸ್ ಕೂಡ ಕೊಟ್ಟಿಲ್ಲ. ಏಕಾಏಕಿ ಬಂದು ಮನೆ ಒಡೆದರೆ ಹೇಗೆ' ಎಂದು ಪ್ರಶ್ನಿಸಿದರು. ಆದರೆ, ಅಧಿಕಾರಿಗಳು ಅವರ ಮಾತಿಗೆ ಕಿವಿಗೊಡದೆ ತೆರವು ಕಾರ್ಯ ನಡೆಸಿದರು.

ಇದರಿಂದ ಸಿಟ್ಟಿಗೆದ್ದ ಗುಂಡಮ್ಮ ಹಾಗೂ ಅವರ ಕುಟುಂಬ ಸದಸ್ಯರು ಮನೆಯ ವಸ್ತುಗಳನ್ನು ನಡುಬೀದಿಯಲ್ಲಿ ಇರಿಸಿ, ಅವರು ಕುಳಿತುಕೊಂಡು ಧರಣಿ ನಡೆಸಿದರು. ಕೆಲಹೊತ್ತಿನ ನಂತರ ಅವರನ್ನು ಅಲ್ಲಿಂದ ಪೊಲೀಸರು ಕಳಿಸಿದರು.

'ಮನೆ ಹಾಗೂ ತಗಡಿನ ಮಳಿಗೆಗಳನ್ನು ಸರ್ಕಾರಿ ಜಾಗದಲ್ಲಿ ನಿರ್ಮಿಸಲಾಗಿತ್ತು. ಈ ಹಿಂದೆಯೇ ತೆರವುಗೊಳಿಸಲು ಸೂಚಿಸಲಾಗಿತ್ತು. ಆದರೆ, ಕಿವಿಗೊಟ್ಟಿರಲಿಲ್ಲ. ಮಂಗಳವಾರ ತೆರವುಗೊಳಿಸಲಾಗಿದೆ' ಎಂದು ನಗರಸಭೆಯ ಅಧಿಕಾರಿಗಳು ತಿಳಿಸಿದ್ದಾರೆ.



ನಗರಸಭೆಯ ತೆರವು ಕಾರ್ಯಾಚರಣೆಯನ್ನು ವಿರೋಧಿಸಿ ಸ್ಥಳೀಯರು ಬೀದರ್‌ನ ಚಿದ್ರಿ ರಿಂಗ್-ರೋಡ್ ರಸ್ತೆಯಲ್ಲಿ ಧರಣಿ ನಡೆಸಿದರು.

## ವಿವಿಧ ಗಣ್ಯರಿಂದ ಆತ್ಮೀಯ ಸನ್ಮಾನ ಕಾರ್ಯಕ್ರಮ



**ಮಲ್ಲಮ್ಮ ನುಡಿ ವಾರ್ತೆ**

ಬೀದರ್ ನಗರದ ಲಡಾಗೇರಿ ಸಂಸ್ಥಾನ ಮಠ ದ ಬಡಾವಣೆಯಾ ಮಠ ದ ಆವರಣದಲ್ಲಿ ನೂತನವಾಗಿ ಆಯ್ಕೆ ಯಾದ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಪದಾಧಿಕಾರಿಗಳಾಗಿ ನೂತನವಾಗಿ ಆಯ್ಕೆ ಯಾದ ಜಿಲ್ಲಾಧ್ಯಕ್ಷ ಸೋಮಶೇಖರ್ ಬಿರಾದಾರ್ ಚಿದ್ರಿ ಬೀದರ್, ನೂತನ ವಾಗಿ ಆಯ್ಕೆ ಯಾದ ಜಿಲ್ಲಾ ಖಜಾಂಚಿಗಳಾದ ದೇವಪ್ಪ ಹಾಗೂ ನೂತನವಾಗಿ ಆಯ್ಕೆ ಯಾದ ಶ್ರೀ ರಾಜಕುಮಾರ ಮಾಳಗೆ ರಾಜ್ಯ ಪರಿಷತ ಸದಸ್ಯರಿಗೆ ಶ್ರೀ ಶ್ರೀ ರುದ್ರಮುನಿ ಹಿರೇಮಠ ಸಂಸ್ಥಾನ ಮಠದ ವತಿಯಿಂದ ಹಾಗೂ ಬೀದರ ನಗರದ ವಿವಿಧ ಸಂಘ, ಸಂಸ್ಥೆ ಗಳಿಂದ ಹಾಗೂ ನಗರದ ವಿವಿಧ ಗಣ್ಯರಿಂದ ಆತ್ಮೀಯ ಸನ್ಮಾನ ಕಾರ್ಯಕ್ರಮ ಜರುಗಿತು, ಈ ಕಾರ್ಯಕ್ರಮ ದ ಸಾನಿಧ್ಯಾ ವಹಿಸಿದ ಪೂಜ್ಯ ಶ್ರೀ ಲಾಡಗೇರಿ ಮುತ್ಯಾ ಶ್ರೀಗಳು, ಡಾ ವಿಠಲ ರಡ್ಡಿ ಪ್ರಾಂಶುಪಾಲರು ಬಿ ವ್ಹಿ ಬಿ ಕಾಲೇಜು ಬೀದರ್, ಪ್ರೊ :ಕುಮಾರ ಸ್ವಾಮಿ ಹಿರೇಮಠ, ಶ್ರೀ ನವೀನ ಚಿಕಬಸೇ ನವೀನ್ ಪಬ್ಲಿಕ್ ಶಿಕ್ಷಣ ಸಂಸ್ಥೆ ಬೀದರ್, ಸಭೆಯ ಅಧ್ಯಕ್ಷತೆ ಪ್ರೊ :ಬಸವರಾಜ ಸ್ವಾಮಿ ಹೆಡಗಾಪೂರಕರ್ ಜಿಲ್ಲಾ ಚುನಾವಣಾಧಿಕಾರಿಗಳು ಕ ರಾ ಸ ನೌ ಸಂಘ ಚುನಾವಣೆ ಬೀದರ ಜಿಲ್ಲಾ ಘಟಕ ಬೀದರ್, ಈ ಸಂಸ್ಥೆಯ ಆಡಳಿತಧಿಕಾರಿಗಳಾದ ಶ್ರೀ ಸಿದ್ರಾಮಯ್ಯ ಹಿರೇಮಠ, ಪತ್ರಕರ್ತ ರು ಗಳಾದ ಸುನಿಲ ಬಾವಿಕಟ್ಟಿ ಇನ್ನಿತರರು ಹಾಜರಿದ್ದರು.

## ಕೋಲಾರ: ಇಬ್ಬರು ಮಕ್ಕಳನ್ನು ಕೊಂದು ಮಹಿಳೆ ಆತ್ಮಹತ್ಯೆಗೆ ಶರಣು

**ಮಲ್ಲಮ್ಮ ನುಡಿ ವಾರ್ತೆ**

ಕೋಲಾರ: ಕೋಲಾರ ಜಿಲ್ಲೆಯ ಕೆಜಿಎಫ್ ತಾಲೂಕಿನಲ್ಲಿ ಬುಧವಾರ 38 ವರ್ಷದ ಮಹಿಳೆಯೊಬ್ಬರು ತನ್ನ ಇಬ್ಬರು ಮಕ್ಕಳನ್ನು ಕೊಂದು ನಂತರ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಆತ್ಮಹತ್ಯೆ ಮಾಡಿಕೊಂಡ ಮಹಿಳೆಯನ್ನು ತಿಪ್ಪಮ್ಮ ಎಂದು ಗುರುತಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಪೊಲೀಸರ ಪ್ರಕಾರ, ಮಹಿಳೆ ಮತ್ತು ಆಕೆಯ ಪತಿ ಮಣಿ ಮದುವೆಯಾಗಿ 8 ವರ್ಷಗಳಾಗಿದ್ದು, ದಂಪತಿಗಳ ನಡುವಿನ ವೈವಾಹಿಕ ಕಲಹವೇ ಮಹಿಳೆ ಇಂತಹ ಕಠಿಣ ನಿರ್ಧಾರ ತೆಗೆದುಕೊಳ್ಳಲು ಕಾರಣವಾಗಿದೆ ಎಂದು ಶಂಕಿಸಲಾಗಿದೆ.

# ಕೊರತೆಗಳು ನೆಪವಾಗದೇ ಜೀವನ ಪಥವಾಗಬೇಕು-ಸಿದ್ದಲಿಂಗಪ್ಪ ಬೀಳಗಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.25-ಜೀವನದಲ್ಲಿ ಎದುರಾಗುವ ಸಮಸ್ಯೆ ಮತ್ತು ಕೊರತೆಗಳನ್ನು ಸವಾಲಿನಂತೆ ಎದುರಿಸುವವರು ಮಾತ್ರ ಸಾಧಕರೆನಿಸಿಕೊಳ್ಳಲು ಸಾಧ್ಯ ಎಂದು ನಿವೃತ್ತ ಉಪನ್ಯಾಸಕ, ಹಿರಿಯ ಲೇಖಕ ಸಿದ್ದಲಿಂಗಪ್ಪ ಬೀಳಗಿ ಅಭಿಪ್ರಾಯ ಪಟ್ಟಿದ್ದಾರೆ.

ಜಿಲ್ಲೆಯ ಹುನಗುಂದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಏರ್ಪಡಿಸಲಾಗಿದ್ದ ಪಾಲಕರ ಸಭೆ ಮತ್ತು ಫಲಿತಾಂಶ ಸುಧಾರಣೆ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಅವರು, ಶಿಸ್ತು ಬದ್ಧತೆ ಮತ್ತು ಗುರಿ ಇಲ್ಲದ ಜೀವನಅರ್ಥಹೀನವಾದುದಾಗಿದ್ದು ಸ್ಪಷ್ಟ ಗುರಿ ಮತ್ತು ನಿರಂತರ ಅಧ್ಯಯನದಿಂದನಾವಿಟ್ಟುಕೊಂಡ ಗುರಿ ತಲುಪಬಹುದು ಎಂದರು.

ಪರೀಕ್ಷೆಗಳನ್ನು ಭಯದಿಂದ ಎದುರಿಸುವ ಬದಲು ಹಬ್ಬದಂತೆ ಸ್ವಾಗತಿಸಬೇಕು. ಕೀಳರಿಮೆ ಕಿತ್ತೆಸೆದಾಗ ಮಾತ್ರ ಯಶಸ್ಸಿನ ಶಿಖರವನ್ನು ಏರಬಹುದು. ಮಕ್ಕಳ ಶೈಕ್ಷಣಿಕ ಪ್ರಗತಿಯಲ್ಲಿ ಪಾಲಕರ ಪಾತ್ರವೂ ಮಹತ್ತರವಾಗಿದ್ದು ಪಾಲಕರಾದವರು ಮಕ್ಕಳ ಅಧ್ಯಯನಕ್ಕೆ ಪೂರಕವಾದ ವಾತಾವರಣ ಕಲ್ಪಿಸಿಕೊಡುವುದರೊಂದಿಗೆ ಅವರ ಫಲಿತಾಂಶ ಹೆಚ್ಚಳಕ್ಕೆ ಸಹಕರಿಸಬೇಕೆಂದರು.

ಕಲಾ ವಿಭಾಗದ ಪರವಾಗಿ ಛಾಯಾ ಪುರಂದರೆ, ವಿಜ್ಞಾನ ವಿಭಾಗದ ಪರವಾಗಿ ಎಚ್.ಟಿ.ಅಗಸಿಮುಂದಿನ ಮತ್ತು ವಾಣಿಜ್ಯ ವಿಭಾಗದ ಪರವಾಗಿ ಶ್ರೀಧರ ಕಾವಲಿ ವಿದ್ಯಾರ್ಥಿಗಳ ಪ್ರಗತಿ ಕುರಿತು ಮಾತನಾಡಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜು ಅಭಿವೃದ್ಧಿ ಸಮಿತಿಯ ಹಿರಿಯ ಸದಸ್ಯ ಚಂದ್ರಶೇಖರ ಚಟ್ಟಿಹಾಳ ಅವರು, ವಿದ್ಯಾರ್ಥಿ ಜೀವನ ಅದರಲ್ಲೂ ಪಿಯುಸಿ ಹಂತದಲ್ಲಿರುವ ತಾವು ಸತತ ಅಧ್ಯಯನ ಮಾಡಿ ತಮ್ಮ ಬದುಕನ್ನು ರೂಪಿಸಿಕೊಳ್ಳಬೇಕೆಂದರು.

ಪಾಲಕರ ಪರವಾಗಿ ಜಗದೀಶ ಹೊಸಮನಿ,ರಾಜಮುನ್ನಿ ಕಡಿವಾಲ ಮತ್ತು ಹನಮಪ್ಪ ಕಮತರ ವಿದ್ಯಾರ್ಥಿಗಳ ಪರವಾಗಿ ವಾಹೀದ್ ಕಡಿವಾಲ ಮಾತನಾಡಿದರು. ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯರಾದ ಮುತ್ತಣ್ಣ ಗಂಜಿಹಾಳ, ಅಶ್ವಿನಿ ಹುಚನೂರ, ಉಪನ್ಯಾಸಕಿ ಛಾಯಾ ಪುರಂದರೆ, ಪಿ.ಬಿ.ಧುತ್ತರಗಿ ಟ್ರಸ್ಟಿನ ಅಧ್ಯಕ್ಷ ಎಸ್ಕೆ.ಕೊನೆಸಾಗರ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಪಿ.ಬಿ.ಧುತ್ತರಗಿ ಟ್ರಸ್ಟಿಗೆ ಅಧ್ಯಕ್ಷರಾಗಿ ಆಯ್ಕೆಯಾದ ಎಸ್.ಕೆ.ಕೊನೆಸಾಗರ ಮತ್ತು ವಿಶೇಷ ಉಪನ್ಯಾಸ ನೀಡಿದ ಸಿದ್ದಲಿಂಗಪ್ಪ ಬೀಳಗಿ ಅವರನ್ನು ಕಾಲೇಜಿನ ಪರವಾಗಿ ಸನ್ಮಾನಿಸಲಾಯಿತು.

ಸೇವಂತಿ ಬೆಣಗಿ ಪ್ರಾರ್ಥಿಸಿದರು, ಪ್ರಭಾರ ಪ್ರಾಚಾರ್ಯ ಶರಣಪ್ಪ ಹೂಲಗೇರಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಐ.ಎಚ್.ನಾಯಕ ವಂದಿಸಿದರು. ಡಾ.ಎನ್.ವಾಯ್.ನದಾಫ್ ನಿರೂಪಿಸಿದರು.

### ಅಖಿಲ ಭಾರತೀಯ ಕೋಲಿ ಸಮಾಜದ ರಾಜ್ಯಾಧ್ಯಕ್ಷರಾಗಿ ದತ್ತಾತ್ರೇಯ ರೆಡ್ಡಿ ನೇಮಕ

# ಅಂಬಿಗರ ಚೌಡಯ್ಯ ಯುವ ಸೇನೆ : ಹರ್ಷ

ಮಲ್ಲಮ್ಮ ನುಡಿ ವಾರ್ತೆ

ಬೀದರ್ ಡಿ. 25: ಅಖಿಲ ಭಾರತೀಯ ಕೋಲಿ ಸಮಾಜದ ನೂತನ ರಾಷ್ಟ್ರಾಧ್ಯಕ್ಷರಾಗಿ ಹಿಮಾಚಲ ಪ್ರದೇಶ ರಾಜ್ಯದ ಶಿಮ್ಲಾದ ಮಾಜಿ ಲೋಕ ಸಭಾ ಸದಸ್ಯರಾದ ವಿರೇಂದ್ರ ಕಶಪ್‌ರವರು ಆಯ್ಕೆಯಾದನಂತರ ದೇಶದ 18 ರಾಜ್ಯಗಳ ನೂತನ ರಾಜ್ಯಾಧ್ಯಕ್ಷರುಗಳನ್ನಾಗಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.





ಕರ್ನಾಟಕ ರಾಜ್ಯದ ನೂತನ ಅಧ್ಯಕ್ಷರನ್ನಾಗಿ ಕೋಲಿ ಸಮಾಜದ ಮುಖಂಡ ದತ್ತಾತ್ರೇಯ ರೆಡ್ಡಿ ಅವರನ್ನು ನೇಮಕ ಮಾಡಿ ಆದೇಶ ಹೊರಡಿಸಿದ ರಾಷ್ಟ್ರೀಯ ಅಧ್ಯಕ್ಷರು ತಕ್ಷಣವೇ ಅಧಿಕಾರ ಸ್ವೀಕರಿಸಿ ಸಂಘದ ಧ್ಯೇಯ ಉದ್ದೇಶಗಳನ್ನು ಸಮಾಜ ಬಾಂಧವರಿಗೆ ಮಾಹಿತಿ ನೀಡಿ, ಸಂಘಟನೆ ಮಾಡುವುದರೊಂದಿಗೆ ಸಂಘಟನೆ ಬಲ ಪಡಿಸಬೇಕೆಂದು ತಿಳಿಸಿದ್ದಾರೆ. ಮತ್ತು ಕೋಲಿ ಸಮಾಜದ ಅಭಿವೃದ್ಧಿಗಾಗಿ ಸರ್ಕಾರದಿಂದ ಸಿಗುವ ಸಕಲ ಸೌಲಭ್ಯಗಳನ್ನು ತಲುಪುವಂತೆ ಹಂತ ಹಂತವಾಗಿ ಜಿಲ್ಲಾ ತಾಲೂಕಾ ಹೋಬಳಿಗಳಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಅರಿವು ನೀಡಿ, ತಮ್ಮ ಪ್ರಗತಿಗೋಸ್ಕರ ಸಿಗುವ ಸೌಲಭ್ಯಗಳನ್ನು ಪಡೆದುಕೊಂಡು ಆರ್ಥಿಕವಾಗಿ ಸಬಲರಾಗುವಂತೆ ಮಾಡಬೇಕು ಮತ್ತು ಸಮಾಜ ಬಾಂಧವರ ಮಕ್ಕಳಿಗೆ ಉತ್ತಮ ಉನ್ನತ ಶಿಕ್ಷಣ ಕೊಡಿಸುವಂತೆ ಪ್ರೇರಣೆ ನೀಡಬೇಕು. ಅಲ್ಲದೇ ಅದಕ್ಕಾಗಿ ಸೂಕ್ತ ಮಾರ್ಗದರ್ಶನ ಮಾಡುವಂತಹ ಮಹತ್ತರವಾದ ಕಾರ್ಯ ಕೈಗೊಳ್ಳಬೇಕೆಂದು ರಾಷ್ಟ್ರೀಯ ಅಧ್ಯಕ್ಷರಾದ ವಿರೇಂದ್ರ ಕಶಪ್ ಅವರು ಕರ್ನಾಟಕ ರಾಜ್ಯಾಧ್ಯಕ್ಷ ದತ್ತಾತ್ರೇಯ ರೆಡ್ಡಿ ಅವರಿಗೆ ನಿರ್ದೇಶನ ನೀಡಿದ್ದಾರೆ.

ನೂತನ ರಾಜ್ಯಾಧ್ಯಕ್ಷರ ನೇಮಕಕ್ಕೆ ಅಂಬಿಗರ ಚೌಡಯ್ಯ ಯುವ ಸೇನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಸುನೀಲ ಭಾವಿಕಟ್ಟಿ ಹರ್ಷ ವ್ಯಕ್ತಪಡಿಸಿದ್ದಾರೆ.

# ಇಂದಿನ ಒತ್ತಡದ ಬದುಕಿನಲ್ಲಿ ಮನುಷ್ಯನು ನೆಮ್ಮದಿಯಿಂದ ಬದುಕಲು ಸಾಧ್ಯವಾಗುತ್ತಿಲ್ಲ - ಶಿವಾನಂದ ಗುರೂಜಿ



ಮಲ್ಲಮ್ಮ ನುಡಿ ವಾರ್ತೆ

ಬೀದರ್ ಡಿ. 25: ಇಂದಿನ ಒತ್ತಡದ ಬದುಕಿನಲ್ಲಿ ಮನುಷ್ಯನು ನೆಮ್ಮದಿಯಿಂದ ಬದುಕಲು ಸಾಧ್ಯವಾಗುತ್ತಿಲ್ಲ. ವೇಗವಾಗಿ ಓಡುತ್ತಿರುವ ಜೀವನ ಶೈಲಿಯಲ್ಲಿ ಊಟ, ವಿಶ್ರಾಂತಿ ಮತ್ತು ನಿದ್ದೆಯ ಕಡೆಗೆ ಗಮನವನ್ನೇ ನೀಡುತ್ತಿಲ್ಲ. ಹಣ ಗಳಿಸಬೇಕೆಂಬ ಧಾವಂತ ಮನುಷ್ಯನನ್ನು ರೋಗ ಗ್ರಸ್ಥನನ್ನಾಗಿಸುತ್ತಿದೆ. ದೈಹಿಕ ಶ್ರಮವೆಂಬುದನ್ನೆ ಮರೆತು ಚಿಕ್ಕ ವಯಸ್ಸಿನಲ್ಲಿಯೇ ಅನೇಕ ರೋಗಗಳಿಗೆ ತುತ್ತಾಗಿ ಅಲ್ಪಾಯುಷಿ ಆಗುತ್ತಿರುವುದನ್ನು ನಾವೆಲ್ಲರೂ ನೋಡುತ್ತಿದ್ದೇವೆ ಎಂದು ಆರ್ಟ ಆಪ್ ಲಿವಿಂಗ್ ತಂಡದ ಶಿಕ್ಷಕ ಶಿವಾನಂದ ಗುರೂಜಿ ಹೇಳಿದರು.

ಅವರು ಇತ್ತೀಚೆಗೆ "ಆರ್ಟ ಆಪ್ ಲಿವಿಂಗ್ ತಂಡವೂ" ಬೀದರ ನಗರದ ಪೋಲೋ ಫಂಗ್ಷನ್ ಹಾಲ್‌ನಲ್ಲಿ ವರ್ಲ್ಡ್ ಮೆಡಿಟೇಶನ್ ದಿನಾಚರಣೆಯನ್ನು ಆಚರಿಸಿ ಮಾತನಾಡುತ್ತಿದ್ದರು.

ಇನ್ನೋರ್ವ ಶಿಕ್ಷಕರಾದ ಅಶೋಕ ಅವರು ಮಾತನಾಡಿ, ದುಡ್ಡಿನ ಹಿಂದೆ ಓಡುತ್ತಿರುವ ಮನುಷ್ಯ ನೆಮ್ಮದಿಯನ್ನು ಕಳೆದು ಕೊಂಡಿದ್ದಾನೆ. ಹೇಗೆ ಶರೀರಕ್ಕೆ ಊಟ, ವ್ಯಾಯಾಮ ಮತ್ತು ವಿಶ್ರಾಂತಿ ಬೇಕೋ ಅದೇ ರೀತಿ ಮೆದುಳಿಗೂ ಊಟ, ವ್ಯಾಯಾಮ ವಿಶ್ರಾಂತಿಯ ಅವಶ್ಯಕತೆ ಇದೆ. ಅಷ್ಟೇ ಅಲ್ಲದೆ ಈ ಶರೀರವು ಅನೇಕ ರೋಗಗಳ ಗೂಡಾಗಲು ನಮ್ಮ ಮೆದುಳೇ ಕಾರಣವಾಗಿದೆ. ಅದೆಲ್ಲವನ್ನ ಸರಿ ಮಾಡಬೇಕು ಎಂದರೆ ನಾವು ಮೆಡಿಟೇಶನ್ ಮಾಡುವ ಅವಶ್ಯಕತೆ ತುಂಬಾ ಇದೆ. ಮೆಡಿಟೇಶನ್ ಮಾಡುವುದರಿಂದ ಮಾನಸೀಕ ಮತ್ತು ದೈಹಿಕ ಸದೃಡತೆಯನ್ನು ಪಡೆಯಬಹುದಾಗಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಡಿ.ಡಿ ಸಿಂಗ್ ಸದಸ್ಯರಾದ ಮಂಜುಳಾ ಪಟೇಲ್, ಸಂಗೀತಾ ರೆಜೆಂತಾಲ್, ಉಮಾದೇವಿ ಗಾದಾ, ರಜನಿ ಸಿಂಗಾ, ಬಸವಶ್ರೀ ಸ್ವಾಮಿ, ಪಾರ್ವತಿ ಸೋನಾರೆ, ಮಂಗಲಾ ಹಿರೇಗೌಡಾ, ರಾಮಕೃಷ್ಣ ಸಾಳೆ, ಕಾಮಶೆಟ್ಟಿ ಚಿಕ್ಕಬಸ್ಸೆ, ಮಲ್ಲಿಕಾರ್ಜುನ ಶಿವಶೆಟ್ಟಿ ಮುಂತಾದವರಿದ್ದರು.

# ಕೆವಿಕೆಯಲ್ಲಿ ದಂತ ತಪಾಸಣೆ ಶಿಬಿರ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 25 :- ರೈತ ದಿನಾಚರಣೆ ಅಂಗವಾಗಿ ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿ, ಎಸ್. ಬಿ. ಪಾಟೀಲ ದಂತ ಆಸ್ಪತ್ರೆ ಹಾಗೂ ಇಂಡಿಯನ್ ಡೆಂಟಲ್ ಅಸೋಸಿಯೇಷನ್ ವತಿಯಿಂದ ತಾಲ್ಲೂಕಿನ ಜನವಾಡ ಹತ್ತಿರದ ಕೃಷಿ ವಿಜ್ಞಾನ ಕೇಂದ್ರದಲ್ಲಿ ಸೋಮವಾರ ದಂತ ತಪಾಸಣೆ ಶಿಬಿರ ನಡೆಯಿತು.

ರೈತರು, ಕೇಂದ್ರದ ಸಿಬ್ಬಂದಿ, ಕೃಷಿ ಡಿಪ್ಲೋಮಾ ವಿದ್ಯಾರ್ಥಿಗಳು ಸೇರಿದಂತೆ ನೂರು ಜನರ ದಂತ ತಪಾಸಣೆ ಮಾಡಲಾಯಿತು.

ಅವಶ್ಯಕತೆ ಇರುವವರಿಗೆ ಹೆಚ್ಚಿನ ಚಿಕಿತ್ಸೆಗೆ ಸಲಹೆ ನೀಡಲಾಯಿತು.

ದಂತ ಆರೋಗ್ಯದ ಬಗ್ಗೆ ಪ್ರತಿಯೊಬ್ಬರೂ ಕಾಳಜಿ ವಹಿಸಬೇಕು ಎಂದು ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿಯ ಅಧ್ಯಕ್ಷ ಶಿವಕುಮಾರ ಪಾಖಾಲ್ ಹೇಳಿದರು.

ಕ್ಲಬ್ ಕಾರ್ಯದರ್ಶಿ ಪ್ರಭು ತಟ್ಟಪಟಿ, ಡಾ. ಸಿದ್ದನಗೌಡ, ಡಾ. ಕಪಿಲ್ ಪಾಟೀಲ, ಎಸ್ ಬಿ ಪಾಟೀಲ ದಂತ ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿ ಇದ್ದರು.

# ಗೊರೆಬಾಳ ಗ್ರಾಮದಲ್ಲಿ ತೊಗರಿ ರಾಶಿಗೆ ಬೆಂಕಿ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು : ತಾಲ್ಲೂಕಿನ ಗೊರೆಬಾಳ ಗ್ರಾಮದ ಗುತ್ತೆದಾರ ಕುಟುಂಬದವರ ಜಮೀನದಲ್ಲಿ ರಾಶಿ ಮಾಡಿ ಹಾಕಿದ್ದ ತೆ-ೂಗರಿಗೆ ಬೆಂಕಿ ಹತ್ತಿ ಭಾರಿ ನಷ್ಟ ಸಂಭವಿಸಿದೆ.

ಗ್ರಾಮದ ಆಂಜನೇಯ ಮುದಕಪ್ಪ, ಜಯಮ್ಮ ಚಂದ್ರಯ್ಯ (ಹಿರೆ ಮಗನ ಹೆಂಡತಿ) ಹಾಗೂ ಮಕ್ಕಳಾದ ಆಶಪ್ಪ, ವೆಂಕಟೇಶ, ಸಿದ್ದಪ್ಪ ಅವರಿಗೆ ಸೇರಿದ 8 ಎಕರೆ ಜಮೀನಲ್ಲಿ ಬೆಳೆದ ತೊಗರಿ ಸೋಮವಾರ ರಾತ್ರಿ ಬೆಂಕಿಗೆ ಆಹುತಿಯಾಗಿದೆ ರಾಶಿ ಎಂದು ತಿಳಿದು ಬಂದಿದೆ.

ಎರಡು ದಿನಗಳ ಹಿಂದೆ 30 ರಿಂದ 32 ಕ್ವಿಂಟಲ್ ತೊಗರಿ ರಾಶಿ ಮಾಡಿ ಒಂದಡೆ ಕೂಡಿ ಹಾಕಲಾಗಿತ್ತು. ಯಾರು ಇಲ್ಲದ ಸಮಯದಲ್ಲಿ ಬಾಂಕಿ ಕಾಣಿ-ಕೊಂಡು ಲಕ್ಷಾಂತರ ಮೌಲ್ಯದ ತೊಗರಿ ನಷ್ಟವಾಗಿದೆ. ಘಟನೆ ಬಗ್ಗೆ ಸ್ಪಷ್ಟ ಮಾಹಿತಿ ಇಲ್ಲ ಎಂದು ಸಂಬಂಧಿ ರಾಜಶೇಖರ ಗುತ್ತೆದಾರ ತಿಳಿಸಿದ್ದಾರೆ.

### ಅಜಾತಶತ್ರು ಅಟಲ್ಜಿ ಬಿಹಾರ್ ವಾಜ್ಪೇಯ್ ರವರ ಜನ್ಮದಿನದ

# ಶುಭಾಶಯಗಳು ದೇವೇಂದ್ರ ಕೊನಿಯರ್ ಕರೆ



(ಮಲ್ಲಿಕಾರ್ಜುನ್ ಮಳಿಕೇರಿ)

ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ಮಾತೆಯ ಹೆಮ್ಮೆಯ ಪುತ್ರ, ದೇಶ ಕಂಡ ಧೀಮಂತ ನಾಯಕ, ಅದ್ವಿತೀಯ ಮಾತುಗಾರ, ಕವಿ ಹೃದಯಿ, ಅಜಾತಶತ್ರು, ಪದ್ಮವಿಭೂಷಣ ಹಾಗೂ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿಯವರ ಜನ್ಮದಿನವನ್ನು ವಾರ್ಡ್ ಸಂ-ಖ್ಯೆ 10 ಬೂತ್ ಸಂಖ್ಯೆ 175ರ ಶ್ರೀ ಚಾಮುಂಡೇಶ್ವರಿ ನಗರದಲ್ಲಿ ಹಾಗೂ ವಾರ್ಡ್ ಸಂಖ್ಯೆ 4,ಬೂತ್ ಸಂಖ್ಯೆ 164ರ ಸಂಗಮೇಶ್ವರ ನಗರದಲ್ಲಿ ಆಚರಿಸಲಾಯಿತು

ಭಾರತದ ರಾಜಕಾರಣದಲ್ಲಿ ಇಂಥ ನಾಯಕ ತೀರಾ ತೀರ ಅಪರೂಪ. ಆರು ದಶಕಗಳ ಕಾಲ ಭಾರತದ ಉದ್ದಗಲಕ್ಕೂ ಜನಮನ್ನಣೆಗೆ ಪಾತ್ರರಾದವರು ವಾಜಪೇಯಿ ಜೀ ಎಂದು ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ಶ್ರೀ ದೇವಿಂದ್ರಪ್ಪ ಪಿ. ಕೊನೇರ ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ನಗರ ಬೂತ್ ಅಧ್ಯಕ್ಷರು ವಿಶ್ವನಾಥ್ ಗೌಡಗಾವ್, ಜಿಲ್ಲಾ ರೈತ ಮೋರ್ಚಾದ ಕೋಶಾಧ್ಯಕ್ಷ ಶ್ರೀ ಶರಣಪ್ಪ ಸಿ. ಟೋಕಾಪುರ್, ಬಿಜೆಪಿ ನಗರ ಖಥಿ ಮೋರ್ಚಾ ಅಧ್ಯಕ್ಷ, ಶ್ರೀ ಲಕ್ಷ್ಮಿಕಾಂತ್ ಬಿರಾಳ, ನಗರ ರೈತ ಮೋರ್ಚಾ ಅಧ್ಯಕ್ಷ ಶ್ರೀ ಸಾಯಿಬಣ್ಣ ನಾಶಿ, ಹಾಗೂ ಕುಮಾರ್ ಪೃಥ್ವಿ,ಕುಮಾರ್ ಹೃತ್ವಿಕ್, ಕುಮಾರ್ ಬನದೇಶ್ವರ,ಕುಮಾರ ಅಮೀತ ಉಪಸ್ಥಿತರಿದ್ದರು.

# ಭಾಷೆಗಳ ಮಹತ್ವ ಕುರಿತ ವಿಚಾರ ಸಂಕಿರಣ

ಮಲ್ಲಮ್ಮ ನುಡಿ ವಾರ್ತೆ

ತುಮಕೂರು,ಡಿ.21-ನಗರದ ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನಲ್ಲಿ ಸಂಸ್ಕೃತ ಮತ್ತು ಹಿಂದಿ ವಿಭಾಗದ ವತಿಯಿಂದ ಭಾಷೆಗಳ ಮಹತ್ವ ಕುರಿತು ವಿಚಾರ ಸಂಕಿರಣ ಏರ್ಪಡಿಸಲಾಗಿತ್ತು.

ಕಾಲೇಜಿನ ಪ್ರಾಂಶುಪಾಲರಾದ ಡಾ. ನಿಜಲಿಂಗಪ್ಪ ಟಿ.ಬಿ. ರವರು ಪ್ರತಿಯೊಂದು ಭಾಷೆಯು ಅದರದೇ ಆದ ಮಹತ್ವ ಹೊಂದಿದೆ. ಆ ಭಾಷೆ ಅಲ್ಲಿನ ಮೌಲ್ಯಗಳನ್ನು ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು.

ಸಂಸ್ಕೃತ ವಿಷಯ ಕುರಿತು ಮಾತನಾಡಿದ ವತ್ಸಲಾ ಜಿ. ರವರು, ಕಾಳಿದಾಸನು ತನ್ನ ಕಾವ್ಯಗಳಲ್ಲಿ ನೈತಿಕ ಮೌಲ್ಯ ಅಜಮಹರಾಜನ ಗುಣ ಲಕ್ಷಣಗಳನ್ನು ಸೂಕ್ಷ್ಮವಾಗಿ ತಿಳಿಸಿದರು. ಹಿಂದಿ ವಿಷಯ ಕುರಿತು ಡಾ. ಶೋಭಾ, ಭಾಷೆಯ ಪ್ರಾಮುಖ್ಯತೆ, ಇತಿಹಾಸ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಹಿಂದಿ ಮುಖ್ಯಸ್ಥರಾದ ರೆಹಾನ ಭಾನು, ಸಂಸ್ಕೃತ ವಿಭಾಗದ ಮುಖ್ಯಸ್ಥರಾದ ಸಿದ್ಧಲಿಂಗಸ್ವಾಮಿ, ಐ.ಕ್ಯೂ.ಎ.ಸಿ. ಮುಖ್ಯಸ್ಥರಾದ ಸರ್ವಮಂಗಳ ಮತ್ತಿತರರು ಉಪಸ್ಥಿತರಿದ್ದರು.

ತುಮಕೂರು ವಿಶ್ವವಿದ್ಯಾನಿಲಯದ ಡಾ. ಶೋಭಾ ರವರು ಅತಿಥಿಗಳಾಗಿ ಆಗಮಿಸಿದ್ದರು.

# ಭಾರತೀಯ ನ್ಯಾಯಾಂಗಕ್ಕೆ ವಿಜ್ಞಾನೇಶ್ವರರ ಕೊಡುಗೆ ಅವಿಸ್ಮರಣೀಯ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಡಿ.25: ಶ್ರೇಷ್ಠ ನ್ಯಾಯಶಾಸ್ತ್ರಜ್ಞರಾದ ವಿಜ್ಞಾನೇಶ್ವರರು ದೇಶದ ಮೊದಲ ನ್ಯಾಯಶಾಸ್ತ್ರ ಗ್ರಂಥ 'ಮಿತಾಕ್ಷರ'ವನ್ನು ನೀಡಿ ಮರತೂರನ್ನು ನ್ಯಾಯಶಾಸ್ತ್ರದ ಕಾಶಿಯನ್ನಾಗಿಸಿದ್ದಾರೆ. ತನ್ಮೂಲಕ ಕಲಬುರಗಿ ಜಿಲ್ಲೆ, ಕನ್ನಡ ನಾಡಿನ ಕೀರ್ತಿಯನ್ನು ದೇಶದಾದ್ಯಂತ ಪಸರಿಸುವ ಮೂಲ ಭಾರತೀಯ ನ್ಯಾಯಾಂಗಕ್ಕೆ ಅವಿಸ್ಮರಣೀಯವಾದ ಕೊಡುಗೆಯನ್ನು ನೀಡಿದ್ದಾರೆ ಎಂದು ಸಂಶೋಧಕ-ಸಾಹಿತಿ ಮುಡಬಿ ಗುಂಡೇರಾವ ಅಭಿಮತಪಟ್ಟರು.

ಮರತೂರ ಗ್ರಾಮದಲ್ಲಿ ಕಲಬುರಗಿಯ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಬುಧವಾರ ಏರ್ಪಡಿಸಲಾಗಿದ್ದ ಜಿಲ್ಲೆಯ ಐತಿಹಾಸಿಕ ಸ್ಥಳಗಳ ಪರಿಚಯಾತ್ಮಕ ಸರಣಿ ಕಾರ್ಯಕ್ರಮ-7ರಲ್ಲಿ ಅವರು ಮಾತನಾಡುತ್ತಿದ್ದರು.

ಮರತೂರ ಗ್ರಾಮ ಆಧ್ಯಾತ್ಮ, ಐತಿಹಾಸಿಕ ಸ್ಥಳಗಳು, ಅಪರೂಪದ ವಾಸ್ತುಶಿಲ್ಪಗಳು, ದೇವಾಲಯಗಳು, ವೀರಗಲ್ಲುಗಳನ್ನು ಹೊಂದಿದೆ. ಪ್ರಸ್ತುತವಾಗಿ ಕಾಶಿ ವಿಶ್ವನಾಥ, ಕಾಳಿಂಗೇಶ್ವರ, ಗುಬ್ಬಿನಾಥ, ಈಶ್ವರ ದೇವಾಲಯಗಳಿವೆ. ಇಲ್ಲಿ 360 ದೇವಾಲಯಗಳು, ಭಾವಿಗಳು ಇದ್ದವು ಎಂಬ ಐತಿಹ್ಯವಿದೆ. ನಮ್ಮ ಸ್ಥಳೀಯ ಇತಿಹಾಸ ತಿಳಿಯಬೇಕಾದರೆ ಇಲ್ಲಿನ ದೇವಾಲಯಗಳು, ಸ್ಮಾರಕಗಳನ್ನು ರಕ್ಷಣೆ ಮಾಡುವುದು ಅಗತ್ಯವಾಗಿದೆ ಎಂದರು.

ಮರತೂರನ ಕೃಷಿ ಪ್ರಾಥಮಿಕ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಡಾ.ರವೀಂದ್ರ ಬಿ.ನರೋಣಾ ಮಾತನಾಡಿ, ನಮ್ಮ ಮರತೂರನ್ನು ವಿಜ್ಞಾನೇಶ್ವರರು ದೇಶಕ್ಕೆ ಮುಟ್ಟಿಸುವ ಕಾರ್ಯ ಮಾಡಿದ್ದಾರೆ. ಆಗಿನ ಕಾಲದಲ್ಲಿಯೇ ಇಲ್ಲಿ ಕಾಲುವೆ ವ್ಯವಸ್ಥೆಯಿತ್ತು. ಸಾಂಬಾರು ಪದಾರ್ಥಗಳು ಬೇರೆ ಪ್ರದೇಶಗಳಿಗೆ ರಫ್ತು ಮಾಡಲಾಗುತ್ತಿತ್ತು ಎಂಬ ಶಾಸನದಲ್ಲಿ ಉಲ್ಲೇಖವಾಗಿರುವುದು ಗಮನಸಿದರೆ, ನಮ್ಮ ಪ್ರದೇಶ ಅಭಿವೃದ್ಧಿಯ ಮೂಲಕ ಮಾದರಿಯಾಗಿತ್ತು ಎಂದು ತಿಳಿದುಬರುತ್ತದೆ. ಭವ್ಯವಾದ ಇತಿಹಾಸ, ಪರಂಪರೆಯನ್ನು ಪಠ್ಯಕ್ಕೆ ಸೇರ್ಪಡೆಗೊಳಿಸಿ, ವಿದ್ಯಾರ್ಥಿ ದೆಸೆಯಿಂದಲೇ ಪರಿಚಯಿಸುವ ಕಾರ್ಯವಾಗಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಬಳಗದ ಅಧ್ಯಕ್ಷ ಹಾಗೂ ಉಪನ್ಯಾಸಕ ಎಚ್.ಬಿ.ಪಾಟೀಲ, ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಪ್ರಮುಖರಾದ ಬಸವಪ್ರಭು ಜಿ.ಮುಡಬಿ, ಲಕ್ಷ್ಮೀಕಾಂತ ಮಡಿವಾಳ, ಬಸವರಾಜ ದುಗಣ್ಣ, ಶರಣು ಅಂಕಲಗಿ, ಶಾಮರಾಯ ಮಾಲಿಪಾಟೀಲ, ಮಲ್ಲಣ್ಣ ಅಣಕಲ್, ಶರಣಬಸಪ್ಪ ಪಟ್ಟೆದ್, ಸಂಗಣ್ಣ ಮೈನಾಳ, ನಾಗಣ್ಣ ರಾಯನಾಡ್ ಸೇರಿದಂತೆ ಗ್ರಾಮಸ್ಥರು ಪಾಲ್ಗೊಂಡಿದ್ದರು.

# ವಿ.ಜಿ ಮಹಿಳಾ ಕಾಲೇಜು:ತಾಂಡಾದಲ್ಲಿ ಕ್ಷೇತ್ರ ಕಾರ್ಯ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.25: ನಗರದ ಶ್ರೀಮತಿ ವೀರಮ್ಮ ಗಂಗಸಿರಿ ಮಹಿಳಾ ಮಹಾವಿದ್ಯಾಲಯದ ಸಮಾಜಶಾಸ್ತ್ರ ವಿಭಾಗದ ಬಿ.ಎ. ಅಂತಿಮ ವರ್ಷದ ಐದನೇ ಸೆಮಿಸ್ಟರ್ ವಿದ್ಯಾರ್ಥಿನಿಯರು ಆದಿವಾಸಿ ಸಮಾಜ ದ ಕುರಿತು ಕಲಬುರಗಿ ಜಿಲ್ಲೆಯ ಕಮಲಾಪುರ ತಾಲ್ಲೂಕಿನ ತಾಂಡಾದಲ್ಲಿ ಕ್ಷೇತ್ರ ಕಾರ್ಯವನ್ನು ಹಮ್ಮಿಕೊಂಡರು. ತಾಂಡಾದ ಲಂಬಾಣಿ ಜನಾಂಗದವರ ಶಿಕ್ಷಣ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಜೀವನ ಮತ್ತು ಅವರ ರಾಜಕೀಯ ಪಾಲ್ಗೋಳ್ಳುವಿಕೆ ಆರ್ಥಿಕ ಸ್ಥಿತಿಗತಿಗಳ ಕುರಿತು ಸುಮಾರು 90 ಕ್ಕೂ ಹೆಚ್ಚು ಪ್ರಶ್ನೆಗಳನ್ನು ಒಳಗೊಂಡ ಪ್ರಶ್ನಾವಳಿಯ ಮೂಲಕ ನೇರವಾಗಿ ತಾಂಡಾದ ನಿವಾಸಿಗಳಿಂದ ಮಾಹಿತಿಯನ್ನು ಸಂಗ್ರಹಿಸಿದರು. ಈ ಕ್ಷೇತ್ರ ಕಾರ್ಯದಲ್ಲಿ ಸಂಗ್ರಹಿಸಿದ ಮಾಹಿತಿಯನ್ನು ಆಧರಿಸಿ ಸಮಗ್ರ ವರದಿಯನ್ನು

ತಯಾರಿಸಿ ತಾಲ್ಲೂಕು ಆಡಳಿತಕ್ಕೆ ನೀಡಲಾಗುತ್ತದೆ. ಆ ಮೂಲಕವಾಗಿ ಅವರ ಸಮಸ್ಯೆಗಳನ್ನು ಪರಿಹರಿಸಲು ಪ್ರಯತ್ನಿಸುವುದು ಇದರ ಉದ್ದೇಶಗಳಲ್ಲಿ ಒಂದು. ಈ ಕ್ಷೇತ್ರ ಕಾರ್ಯವನ್ನು ವಿದ್ಯಾರ್ಥಿನಿಯರು ಮಹಾವಿದ್ಯಾಲಯದ ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಮಹೇಶಕುಮಾರ ಗಂವ್ಹಾರ ಅವರ ಮಾರ್ಗದರ್ಶನದಲ್ಲಿ ನಿರ್ವಹಿಸಿದರು. ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ಡಾ.ಪ್ರೇಮಚಂದ ಚವ್ಹಾಣ, ಡಾ.ಶ್ರೀದೇವಿ ಸರಡಗಿ, ಶಿವಲೀಲಾ ಧೋತ್ರೆ, ಕವಿತಾ ಎಮ್.ಸಂಗಮೇಶ ಅವರು ಭಾಗವಹಿಸಿ ವಿದ್ಯಾರ್ಥಿನಿಯರ ಸಮೀಕ್ಷಾ ಕಾರ್ಯಕ್ಕೆ ಬೆಂಬಲಿಸಿ ಪ್ರೋತ್ಸಾಹಿಸಿದರು.

### ಗಾಣಸಿರಿ ಸರ್ಕಲ್ ಭೂಮಿ ಪೂಜೆ ಸಮಾರಂಭದಲ್ಲಿ ಪೂಜ್ಯ ಸಿದ್ದಲಿಂಗ ಶ್ರೀ

# ಸಜ್ಜನರು ಸರ್ವ ಸಮಾಜದ ಪ್ರೀತಿಗೆ ಪಾತ್ರರಾದವರು




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ಸಜ್ಜನ ಸಮಾಜದ ಬಾಂಧವರು ಅನುಭಾವಿಗಳಾಗಿದ್ದು ಎಲ್ಲ ಸಮಾಜದವರೊಂದಿಗೆ ಅನೂನ್ಯವಾಗಿ ಬೆರೆಯುವವರಾಗಿದ್ದಾರೆ. ಇವರು ಸರ್ವ ಸಮಾಜದ ಪ್ರೀತಿಗೆ ಪಾತ್ರರಾಗಿದ್ದು ಸಮಾಜದಲ್ಲಿ ಒಗ್ಗಟ್ಟು ಕಾಪಾಡಿಕೊಂಡಿದ್ದಾರೆ. ಈ ಕಾರಣಕ್ಕಾಗಿಯೇ ಅವರಿಗೆ ಇಂತಹ ದೊಡ್ಡ ಕಾರ್ಯವನ್ನು ಮಾಡಲು ಸಾಧ್ಯವಾಗಿದೆ ಎಂದು ಖಾಸ್ಗತೇಶ್ವರ ಮಠದ ಪರಮ ಪೂಜ್ಯ ಶ್ರೀ ಸಿದ್ದಲಿಂಗ ದೇವರು ಹೇಳಿದರು. ಬುಧವಾರ ಪಟ್ಟಣದ ಹುಣಸಗಿ ರಸ್ತೆ ಪಕ್ಕದ ಸಂಗಮ ಲಾಡ್ಜ್ ಹತ್ತಿರ ನಿರ್ಮಾಣಗೊಳ್ಳಲಿರುವ ಸಜ್ಜನ ಸಮಾಜದ ಗಾಣಸಿರಿ ಸರ್ಕಲ್ ಗೆ ಭೂಮಿ ಪೂಜೆ ನೆರವೇರಿಸಿ ಅವರು ಆಶೀರ್ವಚನ ನೀಡಿದರು. ಇಂದು ಭೂಮಿ ಪೂಜೆ ನೆರವೇರಿಸಿದ ಈ ಸರ್ಕಲ್ ಒಂದು ಸುಂದರ ಹಾಗೂ ಭವ್ಯವಾದ ಸರ್ಕಲ್ ಆಗಿ ನಿರ್ಮಾಣವಾಗಿ ಇದರಿಂದ ಈ ಸಮಾಜದ ಪರಂಪರೆಯನ್ನು ಮುಂದಿನ ಪೀಳಿಗೆ ತಿಳಿಯುವಂತಾಗಬೇಕು, ಶ್ರೀ ಮಠದ ಆಶೀರ್ವಾದ ಈ ಸಮಾಜದೊಂದಿಗೆ ಸದಾ ಇರುತ್ತದೆ ಎಂದರು. ಕಾರ್ಯಕ್ರಮದಲ್ಲಿ ಸಮಾಜದ ಅಧ್ಯಕ್ಷ ಪ್ರಕಾಶ ಸಜ್ಜನ, ಉಪಾಧ್ಯಕ್ಷ ತಿಪ್ಪಣ್ಣ ಸಜ್ಜನ, ಪುರಸಭೆ ಸದಸ್ಯರಾದ ಮುತ್ತಪ್ಪ ಚಮಲಾಪೂರ, ಪರಶುರಾಮ ತಂಗಡಗಿ, ಜೈಸಿಂಗ್ ಮೂಲಿಮನಿ, ಅರ್ಬನ್ ಬ್ಯಾಂಕ್ ನಿರ್ದೇಶಕ ಎಂ.ಎಸ್.ಸರಸಟ್ಟಿ, ಪ್ರಕಾಶ ಹಜೇರಿ, ವಿಜಯಸಿಂಗ್ ಹಜೇರಿ, ಹುಸೇನ ಜಮಾದಾರ, ಜಿ.ಜಿ.ಮದರಕಲ್ಲ, ಸಂಗಮೇಶ ಶರಣರ, ಇಬ್ರಾಹಿಂ ಮನ್ನೂರ, ಮಾನಸಿಂಗ್ ಕೊಕಟನೂರ, ಮಹಾಂತೇಶ ಮುರಾಳ, ಮಂಜೂರ ಬೇಪಾರಿ, ರಾಜು ಸಜ್ಜನ, ಭರತ್ ವಿಜಾಪುರ, ಹನುಮಂತ್ರಾಯಗೌಡ ಬಾಗೇವಾಡಿ, ರವಿಕಾಂತ ಚಂದುಕರ, ಸೌರಭ ವಿಜಾಪುರ, ರತನಸಿಂಗ್ ಕೊಕಟನೂರ, ಅಶೋಕ ಸಜ್ಜನ, ಶರಣಪ್ಪ ಸಜ್ಜನ, ಡಾ.ನಾಗರಾಜ ಸಜ್ಜನ, ಪರಪ್ಪ ಸಜ್ಜನ, ವಿ.ಬಿ.ಕೋರವಾರ ಮತ್ತಿತರರು ಇದ್ದರು.

ಜಾಹೀರಾತಿಗಾಗಿ ಇಂದೆ ಸಂಪರ್ಕಿಸಿ:9449732000


# ಸಹಕಾರ ಕ್ಷೇತ್ರದಲ್ಲಿ ಸಿಗುವ ಸವಲತ್ತುಗಳು ಸಾಮಾನ್ಯರಿಗೆ ಸಿಗಲಿ ವಿಶ್ವನಾಥರಡ್ಡಿ

ಮಲ್ಲಮ್ಮ ನುಡಿ ವಾರ್ತೆ
ಮಲ್ಲಿಕಾರ್ಜುನ್ ಮಳಿಕೇರಿ



ಶಹಾಪುರ :- ಶಹಾಪುರ ನಗರದಲ್ಲಿರುವ ಸರ್ಕಾರಿ ನೌಕರರ ಭವನದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಶ್ರಿಕ್ಷಣ ಪ್ರೇಮಿಗಳು ಸಹಕಾರ ಬಂಧುಗಳಾದ ವಿಶ್ವನಾಥ್ ರೆಡ್ಡಿ ದರ್ಶನಾಪುರವರು ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ಏರ್ಪಡಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಸಹಕಾರ ಕ್ಷೇತ್ರದಲ್ಲಿನ ಹಲವಾರು ಯೋಜನೆಗಳನ್ನು ಜನಸಾಮಾನ್ಯರಿಗೆ ಪ್ರಮಾಣಿಕವಾಗಿ ಮುಟ್ಟಿಸುವ ಕೆಲಸ ಮಾಡಬೇಕು ಆಯುಷ್ಮಾನ್ ಕಾರ್ಡು ಯೋಜನೆ ಸಾಲ ಸೌಲಭ್ಯದ ವಿಚಾರಗಳನ್ನು ಮನೆ ಮನೆಗೆ ಮುಟ್ಟಿಸುವ ಜವಾಬ್ದಾರಿ ನಿಮ್ಮದಾಗಿದೆ ಅದಕ್ಕೆ ಪ್ರಾಮಾಣಿಕವಾಗಿ ಕೆಲಸವನ್ನು ಮಾಡಬೇಕು ಎಂದು ಹೇಳಿದರು. ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಬೆಂಗಳೂರು ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ(ಯುನಿಯನ್) ನಿ ಯಾದಗಿರಿ ಹಾಗೂ ಸಹಕಾರ ಇಲಾಖೆ ಯಾದಗಿರಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ಶಹಾಪುರ ಮತ್ತು ವಡಿಗೇರಾ ತಾಲೂಕಿನ ಚುನಾವಣೆ ಜರುಗಲಿರುವ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಒಂದು ದಿನದ ವಿಶೇಷ ತರಬೇತಿ ಶಿಬಿರದ ಉದ್ಘಾಟನಾ ಸಮಾರಂಭ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಬೆಂಗಳೂರು ಯಾದಗಿರಿ ಜಿಲ್ಲಾ ಯುನಿಯನ್ ಒಕ್ಕೂಟದ ಉಪಾಧ್ಯಕ್ಷರಾದ ಶ್ರೀ ಎಂ ನಾರಾಯಣ ಸರ್ ಕೆಂಚಪ್ಪ ನಗನೂರ ವೈಜನಾಥ ಪೋಲಿಸ್ ಪಾಟೀಲ್, ಆರ್ ಪವನ್ ಕುಮಾರ್ ಹಾಗೂ ಇತರರು ಉಪಸ್ಥಿತರಿದ್ದರು.

# ಆರೋಗ್ಯ ಸೇವೆಗಳು ಜನರ ಮನೆ ಬಾಗಲಿಗೆ - ಯಶವಂತರಾಯಗೌಡ



ಮಲ್ಲಮ್ಮ ನುಡಿ ವಾರ್ತೆ

ಇಂಡಿ:ವಿವಿಧ ಆರೋಗ್ಯ ಸೇವೆಗಳು ಇಂದು ಜನರ ಮನೆ ಬಾಗಲಿಗೆ ಬರುತ್ತಿರುವದು ಸಂತೋಷದ ಸಂಗತಿ, ಕ್ಷೇತ್ರದ ಜನತೆ ಆರೋಗ್ಯ ಇಲಾಖೆಯ ಸೇವೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಶಾಸಕ ಯಶವಂತರಾಯಗೌಡ ಪಾಟೀಲರು ಹೇಳಿದರು.

ಪಟ್ಟಣದ ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಯುನಾನಿ ಘಟಕ ಪ್ರಾರಂಭೋತ್ಸವ ಮತ್ತು ಇಂಡಿ ತಾಲೂಕಾ ಆರೋಗ್ಯ ಸೇವೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡುತ್ತಿದ್ದರು.

ಕೆಲ ಚಿಕಿತ್ಸೆ ಸೌಲಭ್ಯಗಳಿಗಾಗಿ ಮಹಾರಾಷ್ಟ್ರದ ಸೋಲಾಪುರ, ಸಾಂಗಲಿ, ಮಿರಜ ಇಲ್ಲವೆ ಜಿಲ್ಲಾ ಕೇಂದ್ರ ವಿಜಯಪುರಕ್ಕೆ ಹೋಗಬೇಕಾಗುತ್ತಿತ್ತು. ಮತ್ತು ಸಾಕಷ್ಟು ಹಣ ಕೂಡ ಖರ್ಚಾಗುತ್ತಿತ್ತು. ಆದರೆ ಈಗ ನಮ್ಮ ಕ್ಷೇತ್ರದಲ್ಲಿ ಎಲ್ಲ ಸೌಲಭ್ಯಗಳು ಸಿಗುತ್ತಿವೆ ಎಂದರು.

ಪ್ರತಿಯೊಬ್ಬರ ಜೀವನದಲ್ಲಿ ಆರೋಗ್ಯವೇ ಭಾಗ್ಯ. ಕಾರಣ ನಮ್ಮ ಜೀವನ ಸುಗಮವಾಗಿ ನಡೆಯಬೇಕಾದರೆ ಆರೋಗ್ಯ ಸರಿಯಾಗಿ ಇರಬೇಕು. ಹೀಗಾಗಿ ಎಲ್ಲರೂ ಆರೋಗ್ಯ ರಕ್ಷಣೆ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಕ್ಷೇತ್ರದ ಜನತೆಯ ಆರೋಗ್ಯ ಚೆನ್ನಾಗಿರಬೇಕು ಎಂದರು.

ಜಿಲ್ಲಾ ಆರೋಗ್ಯ ಅಧಿಕಾರಿ ಡಾ॥ ಸಂಪತಕುಮಾರ ಗುಣಾರಿ ಮಾತನಾಡಿ ಆರೋಗ್ಯ ಸೇವೆ ಖಾಸಗಿ ಆಸ್ಪತ್ರೆಗಳಲ್ಲಿ ಬಡವರಿಗೆ ಗಗನ ಕುಸುಮವಾಗಿದೆ. ಈಗ ಸರಕಾರಿ ಆಸ್ಪತ್ರೆಗಳಲ್ಲಿ ಅನೇಕ ಸೌಲಭ್ಯಗಳಿವೆ. ಆಯುಷ್ಮಾನ ಭಾರತ ಆರೋಗ್ಯ ಕಾರ್ಯಕ್ರಮದಲ್ಲಿ ಬಡ ಜನರಿಗೆ ಐದು ಲಕ್ಷದ ವರೆಗೆ ಉಚಿತ ಚಿಕಿತ್ಸೆ ಸಿಗುತ್ತದೆ ಎಂದರು.

ಗೃಹ ಆರೋಗ್ಯ ಕಾರ್ಯಕ್ರಮದಲ್ಲಿ ಸಾಂಕ್ರಾಮಿಕ ರೋಗಗಳಿಂದ ಬಳಲುವ ರೋಗಿಗಳಿಗೆ ಮನೆ ಮನೆಗೆ ಹೋಗಿ ಪರೀಕ್ಷೆ ಮತ್ತು ಔಷಧ ಯೋಜನೆಯನ್ನು ಸರಕಾರ ಪ್ರಾರಂಭಿಸಿದೆ. ಸಾರ್ವಜನಿಕರು ಸಹಕರಿಸಿದರೆ ಇನ್ನೂ ಹೆಚ್ಚಿನ ಸೇವೆ ನೀಡುತ್ತೇವೆ ಎಂದರು.

ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ॥ಆರ್.ಎಸ್.ಇಂಗಳೆ ಮಾತನಾಡಿ ಪ್ರಯೋಗಾಲಯ, ರಕ್ತ ಸೇಖರಣಾ ಘಟಕ, ಅತ್ಯಾಧುನಿಕ ಯಂತ್ರಗಳ ಚಾಲನೆ, ಡಿಜಿಟಲ್ ಎಕ್ಸ ರೇ ಯಂತ್ರ, ವೈದ್ಯಕೀಯ ಆಮ್ಲಜನಕ ಉತ್ಪಾದನಾ ಘಟಕ ಸೇರಿದಂತೆ ಅನೇಕ ಸೌಲಭ್ಯ ಆಸ್ಪತ್ರೆ ಹೊಂದಿದ್ದು ಸಾರ್ವಜನಿಕ ಆಸ್ಪತ್ರೆಯ ಸದುಪಯೋಗ ಪಡೆಯಲು ಕೇಳಿಕೊಂಡರು. ಟಿಎಚ್‌ಓ ಡಾ॥ ಕೃಷ್ಣಕುಮಾರ ಜಾಧವ, ಶಿವಾಜಿ ಮಾನೆ ಮಾತನಾಡಿದರು.

ವೇದಿಕೆಯ ಮೇಲೆ ಆರೋಗ್ಯ ಇಲಾಖೆಯ ನಾಮ ನಿರ್ದೇಶಿತ ಸದಸ್ಯರಾದ ರಾಜು ಪತಂಗೆ, ಸತೀಶ ಕುಂಬಾರ, ಡಾ. ರಾಜಶೇಖರ ತೋಳನೂರ, ಸುದೀರ ಕರಕಟ್ಟಿ, ಪ್ರಭು ನಾಡಗೌಡ, ಜಹಾಂಗೀರ ಸೌದಾಗರ ಮತ್ತಿತರಿದ್ದರು.

ಸಮಾರಂಭದಲ್ಲಿ ಡಾ॥ರಾಜೇಶ ಕೋಳೆಕರ, ಡಾ॥ರವಿ ಭತಗುಣಕಿ, ಜಗದೀಶ ಬಿರಾದಾರ, ಪ್ರಸನ್ನ ಗಜಾಕೋಶ, ಶೃತಿ ಕುಂಬಾರ, ಡಾ॥ ಅನೀಲ ರಾಠೋಡ, ಸತೀಶ ಪಾಟೀಲ, ಪ್ರಶಾಂತ ಧೂಮಗೊಂಡ, ಡಾ॥ ವಿಪುಲ್ ಕೋಳೆಕರ ಮತ್ತಿತರಿದ್ದರು.

# ಧುತ್ತರಗಿ ಟ್ರಸ್ಟ್ ಅಧ್ಯಕ್ಷ ಕೊನೆಸಾಗರಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.25-

ಪಿ.ಬಿ.ಧುತ್ತರಗಿ ಟ್ರಸ್ಟ್‌ನ ನೂತನ ಅಧ್ಯಕ್ಷ ಎಸ್.ಕೆ.ಕೊನೆಸಾಗರ ಅವರನ್ನು ಜಿಲ್ಲೆಯ ಹುನಗುಂದ ನಗರದ ಲೇಖಕರ ಬಳಗದಿಂದ ಸತ್ಕರಿಸಲಾಯಿತು. ಹಿರಿಯ ಲೇಖಕ ಸಿದ್ದಲಿಂಗಪ್ಪ ಬೀಳಗಿ, ಶರಣಪ್ಪ ಹೂಲಗೇರಿ ಮತ್ತು ಲೇಖಕಿ ದಾನೇಶ್ವರಿ ಸಾರಂಗಮಠ ಅಭಿನಂದಿಸಿ ಮಾತನಾಡಿ, ತಾಲೂಕಿನ ಹಿರಿಯ ಲೇಖಕ ಮತ್ತು ರಂಗಕರ್ಮಿಯಾದ ಕೊನೆಸಾಗರ ಅವರು ಧುತ್ತರಗಿ ಅವರ ಸಮೀಪವರ್ತಿಗಳು, ಕಳೆದ ನಾಲ್ಕು ದಶಕಗಳಿಂದ ರಂಗ ಸಂಘಟನೆ ಮಾಡಿದ ಅನುಭವ ಉಳ್ಳವರು. ಇವರಿಂದ ಟ್ರಸ್ಟ್ ಚಟುವಟಿಕೆಗಳು ಸಮರ್ಪಕವಾಗಿ ನಡೆಯುತ್ತವೆ ಎಂದು ಶುಭ ಹಾರೈಸಿದರು. ಲೇಖಕ ಬಳಗದ ಡಾ.ಶ್ರೀಶೈಲ ಗೋಲಗೊಡ, ಡಾ.ಮುರ್ತುಜಾ ಒಂಟಿ, ಬಸವರಾಜ ಬನ್ನಟ್ಟಿ,

ಸಿ.ಎಂ.ತುಂಬಗಿ, ವ್ಯಾಸತೀರ್ಥ ಜೋಶಿ, ಎಂ.ಡಿ.ಚಿತ್ತರಗಿ, ಮಹಾಂತೇಶ ಮಠ, ಶಿವಬಸವ ಅಂಗಡಿ, ಜಗದೀಶ ಹಾದಿಮನಿ, ಶಶಿ ದರಗಾದ, ಸುಮಿತ್ರಾ ಚಿನ್ನಾಪುರ, ಭಾರತಿ ಮಡಿವಾಳರ ಮತ್ತು ಎಸ್.ಎಚ್.ಮುಕ್ಕಣ್ಣವರ ಉಪಸ್ಥಿತರಿದ್ದರು.

# ಶಿರೂರಿನಲ್ಲಿ ಸಂಭ್ರಮದ ಕಾರ್ತಿಕೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.24-ತಾಲೂಕಿನ ಶಿರೂರ ಪಟ್ಟಣದಲ್ಲಿ ಬಸ್ ನಿಲ್ದಾಣದ ಬಳಿಯಿರುವ ಹಾದಿ ಬಸವೇಶ್ವರ ಹಾಗೂ ಬೀರಲಿಂಗೇಶ್ವರ ದೇವರ ಕಾರ್ತಿಕೋತ್ಸವ ಸೋಮವಾರ ಸಂಭ್ರಮದಿಂದ ಜರುಗಿತು. ಪಟ್ಟಣದ ದುರ್ಗದ ಬಯಲಿನ ಬಸವೇಶ್ವರ ಮೂರ್ತಿಗೆ, ಬೀರಲಿಂಗೇಶ್ವರ ಹಾಗೂ ಮಹಾಳಿಂಗರಾಯ ದೇವರು ಮತ್ತು ಪಂಚಪ್ಪನ ಪೇ-ಟೆಯ ಬಸವೇಶ್ವರನಿಗೆ ವಿಶೇಷ ಪೂಜೆನೆರ 'ವೇರಿದ ನಂತರ ಸಂಜೆ ಭಕ್ತರು ಎಣ್ಣೆ ದೀಪ ಹಚ್ಚಿ ಸಂಭ್ರಮಿಸಿದರು. ಅನ್ನ ಸಂತರ್ಪಣೆ ನಡೆಯಿತು. ದೊಡ್ಡ ಓಣಿಯ ಹೂಲಿ ಬಸವೇಶ್ವರ ಕಾರ್ತಿಕೋತ್ಸವವು ಸಡಗರದಿಂದ ಜರುಗಿತು. ಸೋಮವಾರ ಬೆಳಿಗ್ಗೆ ಅಭಿಷೇಕ, ವಿವಿಧ ಪೂಜಾ ಕಾರ್ಯಗಳು ನೆರವೇರಿದವು. ಸಾಯಂಕಾಲ ದೇವಸ್ಥಾನದ ಆವರಣದಲ್ಲಿ ಭಕ್ತರು ಎಣ್ಣೆ ದೀಪ ಬೆಳಗಿಸಿದರು.

ಕಾರ್ತಿಕೋತ್ಸವದ ಅಂಗವಾಗಿ ಮನರಂಜನೆ ಕಾರ್ಯಕ್ರಮಗಳು ಜರುಗಿದವು.

# ಚಿಕಿತ್ಸೆ ಹಾಗೂ ಜಾಗೃತಿಯಿಂದ ಹೆಚ್.ಐ.ವಿ ನಿಯಂತ್ರಣ: ಎಂ.ಡಿ ಅಹಮದುದ್ದಿನ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 25:-ಹೆಚ್.ಐ.ವಿ ಸೊಂಕು ತಡೆಗಟ್ಟಲು ಜಾಗೃತಿ ಹಾಗೂ ಕಾಲ ಕಾಲಕ್ಕೆ ಚಿಕಿತ್ಸೆ ಅಗತ್ಯವಾಗಿದೆ ಎಂದು ಬ್ರಿಮ್ಸ್ ಆಸ್ಪತ್ರೆಯ ಜಿಲ್ಲಾ ಸಸ್ತ್ರ ಚಿಕಿತ್ಸಕ ಎಂ.ಡಿ ಅಹಮದುದ್ದಿನ್ ಹೇಳಿದರು.

ನಗರದ ಭಾರತೀಯ ಕುಟುಂಬ ಯೋಜನಾ ಸಂಘ(ಎಫ್.ಪಿ.ಎ.ಐ) ನಲ್ಲಿ ಹಮ್ಮಿಕೊಂಡ ಜಿಲ್ಲಾ ಮಟ್ಟದ ವಿಶ್ವ ಏಡ್ಸ್ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಹೆಚ್.ಐ.ವಿ ಒಂದು ಸಾಂಕ್ರಾಮಿಕ ಪಿಡುಗು ಇಲ್ಲದಿದ್ದರೂ ಅದ-ರಿಂದ ಜಾಗರುಕರಾಗಿರುವುದು ಅಗತ್ಯ. ಹಾಗಂತ ಹೆಚ್.ಐ.ವಿ ಸೊಂಕಿತರೊಂದಿಗೆ ಓಡಾಡುವುದು, ಕೈ ಕುಲುಕುವುದು. ಹತ್ತಿರ ಕೂಳಿತುಕೊಳ್ಳುವುದರಿಂದ ಇದು ಹರಡುವುದಿಲ್ಲ. ಲೈಂಗಿಕ ಸಂಪರ್ಕ, ರೋಗಿಯ ರಕ್ತವು ನಮ್ಮ ರಕ್ತದೊಂದಿಗೆ ಮಿಶ್ರಿತವಾಗುವುದು ಸೊಂಕಿತ ವ್ಯಕ್ತಿ ಬಳಿಸಿದ ಮಾರಕಾಸ್ತ್ರ, ಕ್ಷೌರ ಉಪಕರಣಗಳು ಸಿರೆಂಜ್ ಇದನ್ನು ಹೊರತು ಯಾವವಯದರಿಂದಲೂ ಹರಡುವುದಿಲ್ಲ ಎಂಬ ಭಾವ ಎಲ್ಲರಲ್ಲಿ ಬರಬೇಕು ಎಂದರು.

ಇಂದು ಹಳ್ಳಿಗಳಲ್ಲಿ ಹೆಚ್.ಐ.ವಿ ಸೊಂಕಿನ ಬಗ್ಗೆ ಬಹಳಷ್ಟು ದುಷ್ಟ ಕಲ್ಪನೆಗಳಿವೆ. ಸೊಂಕಿತರನ್ನು ದೂರ ಇಡುವುದನ್ನು ಅವರನ್ನು ಎಲ್ಲ ಉತ್ತಮ ಕಾರ್ಯಗಳಿಂದ ದೂರ ಇಡುವುದು, ಕುಷ್ಟರೋಗಿಗಳ ತರಹ ಅವರ ಬಟ್ಟೆ, ಬರಿ, ಆಹಾರ ಪ್ರತ್ಯೇಕವಾಗಿ ಇಡುವುದನ್ನು ಇನ್ನು ಹಳ್ಳಿಯಲ್ಲಿ ನೋಡುತ್ತೇವೆ. ಅದು ಸಂಪೂರ್ಣವಾಗಿ ತೊಲಗಬೇಕು, ಸೊಂಕಿತರಿಗೆ ಧೈರ್ಯ ತುಂಬಿ ಅವರನ್ನು ಪರಸ್ಪರ ಪ್ರೀತಿಸುವುದರಿಂದ ಅವರು ಧೀರ್ಘ ಕಾಲ ಬದುಕುವಂಥ ಧೈರ್ಯ ಬರುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ ಭಾರತೀಯ ಕುಟುಂಬ ಯೋಜನಾ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ್ ಪಾಟೀಲ ಮಾತನಾಡಿ, ಹೆಚ್.ಐ.ವಿ ಇರುವ ಸೊಂಕಿತರಿಗೆ ಎಫ್.ಪಿ.ಎ.ಐ ಸುಮಾರು 500ಕ್ಕೂ ಅಧಿಕ ಶಸ್ತ್ರ ಚಿಕಿತ್ಸೆಗಳನ್ನು ಮಾಡಿದೆ. ನಮ್ಮಲ್ಲಿರುವ ಡಾ.ಲಕಶೆಟ್ಟಿಯವರಂಥ ಮೇಧಾವಿ ವೈದ್ಯರಿಂದ ಇದು ಸಾಧ್ಯವಾಗಿದ್ದು, ಜಿಲ್ಲಾಡಳಿತ, ಜನಪ್ರತಿನಿಧಿಗಳು ಹಾಗೂ ಇಂಥ ಸಂಘ, ಸಂಸ್ಥೆಗಳು ಅಂಥವರನ್ನು ಗುರುತಿಸಿ ಸನ್ಮಾನಿಸುವುದು ಅಗತ್ಯವೆಂದು ಪ್ರತಿಪಾದಿಸಿದರು.

ಜಿಲ್ಲಾ ಏಡ್ಸ್ ತಡೆಗಟ್ಟುವ ಘಟಕದ ಜಿಲ್ಲಾ ಮೇಲ್ವಿಚಾರಕ ಸೂರ್ಯಕಾಂತ ಸೂರ್ಯಕಾಂತ ಸಂಗೋಳ್ಕರ್ ಜಿಲ್ಲೆಯ ಹೆಚ್.ಐ.ವಿ ಸೊಂಕಿತರ ಅಂಕಿ ಅಂಶ ವಿವರಿಸಿ, 2030ರೊಳಗೆ ಭಾರತ ಏಡ್ಸ್ ಮುಕ್ತ ದೇಶವಾಗಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕೈ ಜೋಡಿಸಿವೆ. ಕಳೆದೆರಡು ವರ್ಷಗಳಿಂದೀಚಿಗೆ ಹೆಚ್.ಐ.ವಿ ಸೊಂಕಿತರಿಗೆ ಹುಟ್ಟುವ ಮಕ್ಕಳು ಹೆಚ್.ಐ.ವಿಯಿಂದ ಮುಕ್ತರಾಗಿ ಹುಟ್ಟುತ್ತಿರುವುದು ಸಮಾಧಾನಕರ ಬೆಳವಣಿಗೆ. ಫಸ್ಟ್-95, ಸೆಕೆ-ಂಡ್-95 ಹಾಗೂ ಥರ್ಡ್-95 ಕಾರ್ಯಕ್ರಮಗಳಿಂದ ಅದನ್ನು ಶುನ್ಯಕ್ಕೆ ಇಳಿಸಬಹುದಾಗಿದೆ. 8000 ಸೊಂಕಿತರು ಎ.ಆರ್.ಟಿ ಕೇಂದ್ರದಲ್ಲಿ ನೊಂದಣಿ ಮಾಡುತ್ತಿರುವರು. 3864 ಜನರು ಕಾಲ ಕಾಲಕ್ಕೆ ಮಾತ್ರೆ ಪಡೆಯುತ್ತಿದ್ದಾರೆ. 100 ಹಳ್ಳಿಗಳಲ್ಲಿ ಲಾಲ ಬಹಾದ್ದೂರ ಏಜ್ಯುಕೇಶನ್ ಸುಸೈಟಿ ಇಂತಹ ರೋಗಿಗಳಿಗಾಗಿ ಕಾರ್ಯ ಮಾಡುತ್ತಿದ್ದು, ಯಾರು ಇದನ್ನು ಮುಜುಗರ ಎನ್ನದೇ ಇನ್ನು ಗೊತ್ತಿಲ್ಲದ ಅದೆಷ್ಟು ಸೊಂಕಿತರು ಚಿಕಿತ್ಸೆ ಪಡೆಯಲು ಮುಂದೆ ಬರಬೇಕೆಂದು ಕಿವಿ ಮಾತು ಹೇಳಿದರು. ಹಿರಿಯ ಸಾಹಿತಿ ಎಂ.ಜಿ ದೇಶಪಾಂಡೆ ಮಾತನಾಡಿ, ಎಡ್ಸ್ ಕ್ಯಾನ್ಸರ್‌ಗಿಂತಲೂ ಭಯಾನಕವಾಗಿದೆ. ಕ್ಯಾನ್ಸರ್ ಹಾಗೂ ಏಡ್ಸ್ ಈ ಎರಡಕ್ಕೂ ಸಂಪೂರ್ಣ ಚಿಕಿತ್ಸೆ ಇಲ್ಲ. ಹಾಗಾಗಿ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಪಡೆದು ಇತರರಿಗೆ ಹರಡದಂತೆ ಮುಂಜಾಗ್ರತೆ ವಹಿಸುವುದು ಒಳ್ಳೆಯ ಲಕ್ಷಣ ಎಂದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ಡಿ.ಕೆ ಗಣಪತಿ ಮುಖ್ಯ ಅತಿಥಿಗಳಾಗಿ ಮಾತನಾಡಿ, ಶ್ರೀಮಂತರಿರೊ ಎಷ್ಟೊ ಹಚ್.ಐ.ವಿ ಸೊಂಕಿತರು ತಮ್ಮ ಮಾಹಿತಿ ಮುಚ್ಚಿಟ್ಟು ಅನೇಕ ಮುಗ್ದರ ಬಾಳು ಹಾಳು ಮಾಡಿರುವ ಉದಾಹರಣೆಗಳಿವೆ. ಅಂಥವರನ್ನು ಪತ್ತೆ ಹಚ್ಚಿ ಸೊಂಕು ಹರಡುವವರ ವಿರೂದ್ಧ ಸಂಸತ್ತಿನಲ್ಲಿ ಕಾನೂನೊಂದನ್ನು ಜಾರಿಗೆ ತರುವ ಅಗತ್ಯವಿದೆ ಎಂದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಡಾ.ಪ್ರಿಯಂಕಾ, ಡಾ.ಸುಜಾತಾ ಹೊಸಮನಿ ಸೇರಿದಂತೆ ಆರೋಗ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ 25 ಸಾಧಕರಿಗೆ ಆರೋಗ್ಯ ಸೇವಾ ರತ್ನ ಪ್ರಶಸ್ತಿ ನೀಡಿ ಸನ್ಮಾನ ಮಾಡಲಾಯಿತು ಹಾಗೇ ಲಾಲ ಬಹದ್ದೂರ ಶಿಕ್ಷಣ ಸಂಸ್ಥೆ ವತಿಯಿಂದ 5 ಜನ ಸಂಪರ್ಕ ಕಾರ್ಯಕರ್ತರಿಗೆ 2024-25 ನೆಯ ಸಾಲಿನ ಉತ್ತಮ ವಲಯ ಸಂಪರ್ಕ ಕಾರ್ಯಕರ್ತ ಪ್ರಶಸ್ತಿ ನೀಡಿ ಗೌರವಿಸಲಾಯಿತು ಪ್ರಮುಖರಾದ ವೀರಭದ್ರಪ್ಪ ಉಪ್ಪಿನ್, ಸುನಿಲಕುಮಾರ ಕುಲಕರ್ಣಿ, ಪಾಂಡುರಂಗ ಬೆಲ್ದಾರ್ ಕಾರ್ಯಕ್ರಮ ಸಂಘಟಕರಾದ ವಿಶ್ವನಾಥ ಸ್ವಾಮಿ, ಸಂಜೀವ್ ಕುಮಾರ್ ಸ್ವಾಮಿ ಬಸವರಾಜ್ ಖಂಡ್ರೆ, ಶ್ರೀನಿವಾಸ ಬಿರಾದಾರ, ಸಂತೋಷ ಶಿಂಧೆ, ಸುಬ್ಬಯ್ಯ ಸ್ವಾಮಿ, ರಿಯಾಜ ಪಾಶಾ ಕೊಳ್ಳೂರ್ ಹಾಗೂ ಇತರರು ಕಾರ್ಯಕ್ರಮದಲ್ಲಿದ್ದರು.

ಲಾಲ್ ಬಹದ್ದೂರ್ ಶಿಕ್ಷಣ ಸಂಸ್ಥೆ, ಶರಣ ತತ್ವ ಪ್ರಸಾರ ಸಮಿತಿ, ನ್ಯೂ ಮದರ್ ತೆರೇಸಾ, ಫ್ಯಾಮಿಲಿ ಪ್ಲಾನಿಂಗ್ ಅಸೊಶಿಯಶನ್ ಆಫ್ ಇಂಡಿಯಾ ವತಿಯಿಂದ ಕಾರ್ಯಕ್ರಮ ಜರುಗಿತು. ಚೆನ್ನಮ್ಮ ಪ್ರಾರ್ಥನೆ ಗೀತೆ ಹಾಡಿದರು. ಅರವಿಂದ ಕುಲಕರ್ಣಿ ಸ್ವಾಗತಿಸಿ ವಂದನೆ ಸಲ್ಲಿಸಿದರು.

# ಬೀದರ್ ಯಶವಂತಪುರ ಸೇವೆ ಪುನರಾರಂಭಿಸಿ: ಕೇಂದ್ರ ಸಚಿವರಿಗೆ ಸಂಸದ ಸಾಗರ್ ಖಂಡ್ರೆ ಬೇಡಿಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 25:-ಕರ್ನಾಟಕದ ಕಟ್ಟ ಕಡೆಯ ಜಿಲ್ಲೆಯಾದ, ಪ್ರವಾಸೋದ್ಯಮ ಮಹತ್ವ ಪಡೆದಿರುವ ಬೀದರ್ ಜಿಲ್ಲೆಯನ್ನು ದಯಮಾಡಿ ಕಡೆಗಣಿಸಬೇಡಿ. ರಾಜಧಾನಿ ಬೆಂಗಳೂರು ಸಹಿತ ನಾನಾ ಭಾಗಗಳಿಂದ ಬೀದರ್‌ಗೆ ರೈಲು ಸೇವೆ ಕೊಡಿ. ಅದರಲ್ಲೂ ವಂದೇ ಭಾರತ್ ಎಕ್ಸ್ ಪ್ರೆಸ್ ರೈಲು ಬೀದರ್‌ಗೂ ಬೇಕು.

ಬೆಂಗಳೂರಿನಿಂದ ಬೀದರ್‌ಗೆ ವಂದೇ ಭಾರತ್ ರೈಲು ಆರಂಭಿಸಿ. ಈಗಾಗಲೇ ಸೇವೆಯಲ್ಲಿದ್ದ ಬೀದರ್ ಯಶವಂತಪುರ ರೈಲನ್ನು ಸ್ಥಗಿತಗೊಳಿಸಲಾಗಿದ್ದು, ಅದನ್ನು ಪುನರಾರಂಭಿಸಿ. ಇದು ಬೀದರ್ ನೂತನ ಸಂಸದ ಸಾಗರ್ ಖಂಡ್ರೆ ಅವರ ಮನವಿ. ದೆಹಲಿಯಲ್ಲಿ ಕೇಂದ್ರ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್ ಅವರನ್ನು ಭೇಟಿ ಮಾಡಿದ ಖಂಡ್ರೆ ದೊಡ್ಡ ಬೇಡಿಕೆಯ ಪಟ್ಟಿಯನ್ನೇ ಸಚಿವರಿಗೆ ಸಲ್ಲಿಸಿದರು. ಸಚಿವರಿಂದಲೂ ಪೂರಕ ಸ್ಪಂದನೆ ದೊರೆಯಿತು. ಪ್ರಮುಖ ಬೇಡಿಕೆಗಳು:

1. ಯಶವಂತಪುರ-ಬೀದರ-ಯಶವಂತಪುರ ಎಕ್ಸ್‌ಪ್ರೆಸ್ (ಟ್ರೇನ್ ನಂ.16578/77): ಪ್ರಸ್ತುತ ಸ್ಥಗಿತಗೊಂಡಿರುವ ಈ ರೈಲು ಸೇವೆಯನ್ನು ಪುನಃ ಆರಂಭಿಸಿ, ಅದನ್ನು ದೈನಂದಿನ ಸೇವೆಯಾಗಿ ಪರಿವರ್ತಿಸಲು ಒತ್ತಾಯಿಸಿದೆನು. ಇದರಿಂದ ಬೀದರ ಮತ್ತು ರಾಜ್ಯದ ರಾಜಧಾನಿ ಬೆಂಗಳೂರಿನ ನಡುವಿನ ಸಂಪರ್ಕ ಸುಧಾರಣೆ ಆಗುತ್ತದೆ.

2. ವಂದೇ ಭಾರತ್ ರೈಲು: ಬೀದರ ಮತ್ತು ಬೆಂಗಳೂರಿನ ನಡುವೆ ವಂದೇ ಭಾರತ್ ರೈಲು ಪ್ರಾರಂಭಿಸಲು ಮನವಿ ಮಾಡಿದೆನು, ಇದರಿಂದ ಪ್ರಯಾಣ ಸಮಯ ಕಡಿಮೆಯಾಗಿ, ಜನರ ಅನುಕೂಲತೆ ಹೆಚ್ಚುತ್ತದೆ.

3. ತಾಂಡೂರು-ಜಹೀರಾಬಾದ್ ಹೊಸ ರೈಲು ಮಾರ್ಗ: 2023ರಲ್ಲಿ ಅನುಮೋದನೆ ಪಡೆದ ಈ ಮಾರ್ಗದ ಅಂತಿಮ ಸ್ಥಳ ಸಮೀಕ್ಷೆಯನ್ನು ನಮ್ಮ ಬೀದರ ಲೋಕಸಭಾ ಕ್ಷೇತ್ರದ ಚಿಂಚೋಳಿ ತಾಲೂಕು ಮೂಲಕ ಮರುಸಮೀಕ್ಷೆ ಮಾಡುವಂತೆ ವಿನಂತಿಸಿದೆನು, ಇದರಿಂದಾಗಿ ಆರ್ಥಿಕವಾಗಿ ಹಿಂದುಳಿದ ಈ ಭಾಗದ ಅಭಿವೃದ್ಧಿಗೆ ನೆರವಾಗುತ್ತದೆ.

4. ಸಿಎಸ್‌ಎಂಟಿ-ಬೀದರ ಎಕ್ಸ್‌ಪ್ರೆಸ್ (ಟ್ರೇನ್ ನಂ. 22143/44):

ವಾರದಲ್ಲಿ ಮೂರು ದಿನ ಮಾತ್ರ ಲಭ್ಯವಿರುವ ಈ ರೈಲು ಸೇವೆಯನ್ನು ದೈನಂದಿನ ಸೇವೆಯಾಗಿ ಪರಿವರ್ತನೆ ಮಾಡುವಂತೆ ಕೋರಿದೆನು, ಇದರಿಂದ ಬೀದರ, ಪುಣೆ, ಮತ್ತು ಮುಂಬೈನ ನಡುವಿನ ವ್ಯಾಪಾರ ಮತ್ತು ಉದ್ಯೋಗಾವಕಾಶಗಳು ಸುಧಾರಿಸುತ್ತವೆ.

5. ಬೀದರ-ದಿಲ್ಲಿ ನೇರ ರೈಲು ಸಂಪರ್ಕ: ದಕ್ಷಿಣ ಎಕ್ಸ್‌ಪ್ರೆಸ್ (ಟ್ರೇನ್ ನಂ.12721/22) ಅನ್ನು ಬೀದರವರೆಗೆ ವಿಸ್ತರಿಸಲು ಮನವಿ ಮಾಡಿದೆನು, ಇದರಿಂದ ಬೀದರ ಜನತೆಗೆ ದೇಶದ ರಾಜಧಾನಿಯೊಂದಿಗೆ ನೇರ ಸಂಪರ್ಕ ಸಾಧಿಸಲು ಅನುಕೂಲವಾಗುತ್ತದೆ.

6. ಬೀದರ-ಪಂಡರಪೂರ್ ರೈಲು: ಪಂಡರಪೂರ್ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಬೀದರ ಮತ್ತು ಪಂಡರಪೂರ್ ನಡುವಿನ ನೇರ ರೈಲು ಸೇವೆ ಪ್ರಾರಂಭಿಸಿದರೆ ಧಾರ್ಮಿಕ ಸಂಪರ್ಕಕ್ಕೆ ಸಹಕಾರಿಯಾಗಲಿದೆ.

7. ಬೀದರ-ನಾಂದೇಡ್ ಹೊಸ ರೈಲು ಮಾರ್ಗ (157 ಕಿ.ಮೀ):

2018-19ರ ಬಜೆಟ್‌ನಲ್ಲಿ ಅನುಮೋದನೆಗೊಂಡ ಈ ಹೊಸ ಮಾರ್ಗವನ್ನು ಶೀಘ್ರವಾಗಿ ಕಾರ್ಯರೂಪಕ್ಕೆ ತರುವಂತೆ ಕೋರಿಕೆ ಸಲ್ಲಿಸಲಾಯಿತು.

# ಮನೆ ಬೀಗ ಮುರಿದು ಚಿನ್ನ, ಬೆಳ್ಳಿ ಕಳವು: ಪತ್ನಿ ಮೇಲೆ ಪತಿ ದೂರು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.25-ಪತ್ನಿ ಮತ್ತು ಅವರ ಮನೆಯವರು ಸೇರಿ ಮನೆ ಬೀಗ ಮುರಿದು 1.20 ಲಕ್ಷ ರೂಪಾಯಿ ಮೌಲ್ಯದ ಚಿನ್ನ ಮತ್ತು ಬೆಳ್ಳಿ ಆಭರಣ, ಮನೆ ಲೋನಿನ ಹೆಚ್.ಡಿ.ಎಫ್.ಸಿ.ಬ್ಯಾಂಕಿನ ದಾಖಲಾತಿಗಳನ್ನು ಕಳವು ಮಾಡಿದ್ದಾರೆ ಎಂದು ಪತಿಯೊಬ್ಬ ವಿಶ್ವ ವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

ಜಿಲ್ಲಾ ಸಶಸ್ತ್ರ ಮೀಸಲು ಪಡೆಯಲ್ಲಿ ಮುಖ್ಯ ಪೇದೆಯಾಗಿರುವ ತಾರಾಸಿಂಗ್ ನಾಯ್ಕ್ ಎಂಬುವವರೆ ದೂರು ಸಲ್ಲಿಸಿದ್ದು, ಪತ್ನಿ ಶೀಮಾ ರಾಠೋಡ್, ಅವರ ಸಹೋದರ ಪವನಕುಮಾರ ಚವ್ಹಾಣ್, ತಾಯಿ ಸುನೀತಾಬಾಯಿ ಚವ್ಹಾಣ್, ತಂದೆ ಸುಭಾಶ್ಚಂದ್ರ ಚವ್ಹಾಣ್, ಸಹೋದರಿ ಮಮತಾ ಚವ್ಹಾಣ್ ಅವರು ಸೇರಿ ಮನೆ ಬೀಗ ಮುರಿದು 15 ಗ್ರಾಂ.ತೂಕದ ಸುತ್ತುಂಗುರ, 20 ತೊಲೆಯ ಬೆಳ್ಳಿ ಗಣಪತಿ, ಲಕ್ಷ್ಮೀ ಮೂರ್ತಿಗಳು, ಲಕ್ಷ್ಮೀದೇವಿ ಪಾದ ಹಾಗೂ ಲಕ್ಷ್ಮೀಯ ಮುಖ ಹೀಗೆ ಒಟ್ಟು 1.20 ಲಕ್ಷ ರೂ.ಬೆಲೆಬಾಳುವ ಚಿನ್ನ ಮತ್ತು ಬೆಳ್ಳಿ ಆಭರಣ ಹಾಗೂ ಮನೆ ಲೋನಿನ ಹೆಚ್.ಡಿ.ಎಫ್.ಸಿ.ಬ್ಯಾಂಕಿನ ದಾಖಲಾತಿಗಳನ್ನು ಕಳವು ಮಾಡಿದ್ದಾರೆ ಎಂದು ತಿಳಿಸಿದ್ದಾರೆ.

ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ಅಮಿತ್ ಶಾ ವಿರುದ್ಧ ಪ್ರತಿಭಟನಾ ರ‍್ಯಾಲಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 24:- ಡಾ.ಬಿ.ಆರ್. ಅಂಬೇಡ್ಕರ್ ವಿರುದ್ಧ ಅವಹೇಳನಕಾರಿ ಮಾತನಾಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ದೇಶದ್ರೋಹ ಪ್ರಕರಣ ದಾಖಲಿಸಿ, ಅವರನ್ನು ಸಂಪುಟದಿಂದ ವಜಾಗೊಳಿಸಬೇಕೆಂದು ಆಗ್ರಹಿಸಿ ಸ್ವಾಭಿಮಾನಿ ಡಾ.ಬಿ.ಆರ್. ಅಂಬೇಡ್ಕರ್ ವಾದಿಗಳ ಹೋರಾಟ ಸಮಿತಿ ಬೀದರ್ ಜಿಲ್ಲಾ ಘಟಕದಿಂದ ನಗರದಲ್ಲಿ ಮಂಗಳವಾರ ರಸ್ತೆತಡೆ ನಡೆಸಿ, ಪ್ರತಿಭಟನಾ ರ‍್ಯಾಲಿ ನಡೆಸಲಾಯಿತು. ನಗರದ ಜನವಾಡ ರಸ್ತೆಯ ಡಾ.ಬಿ.ಆರ್. ಅಂಬೇಡ್ಕರ್ ಭವನದಿಂದ ಆರಂಭಗೊಂಡ ರ‍್ಯಾಲಿ ಅಂಬೇಡ್ಕರ್ ವೃತ್ತ ತಲುಪಿದಾಗ ಅಲ್ಲಿ ಅಮಿತ್ ಶಾ ವಿರುದ್ಧ ದಿಕ್ಕಾರ ಎಂದು ಸಮಿತಿಯ ಕಾರ್ಯಕರ್ತರು ಘೋಷಣೆಗಳನ್ನು ಕೂಗಿದರು. ಮಾನವ ಸರಪಳಿ ನಿರ್ಮಿಸಿ ಸುಮಾರು ಅರ್ಧಗಂಟೆಗೂ ಹೆಚ್ಚು ಕಾಲ ರಸ್ತೆತಡೆ ನಡೆಸಿದರು. ಬಳಿಕ ಬಸವೇಶ್ವರ ವೃತ್ತ, ಭಗತ್ ಸಿಂಗ್ ವೃತ್ತ, ಛತ್ರಪತಿ ಶಿವಾಜಿ ಮಹಾರಾಜ ವೃತ್ತದ ಮೂಲಕ ಜಿಲ್ಲಾಧಿಕಾರಿ ಕಚೇರಿ ತಲುಪಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಹೆಸರಿಗೆ ಬರೆದ ಮನವಿ ಪತ್ರವನ್ನು ಹೆಚ್ಚುವರಿ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಅವರಿಗೆ ಸಲ್ಲಿಸಿದರು. ಅಮಿತ್ ಶಾ ಅವರನ್ನು ಸಂಪುಟದಿಂದ ತೆಗೆದು ಹಾಕದಿದ್ದರೆ ಬೀದರ್ ಬಂದ್‌ಗೆ ಕರೆ ಕೊಡಲಾಗುವುದು ಎಂದು ತಿಳಿಸಿದರು. ವಿವಿಧ ಕಡೆಗಳಿಂದ ಬಂದಿದ್ದ ಸಮಿತಿಯ ಕಾರ್ಯಕರ್ತರು ಅಂಬೇಡ್ಕರ್ ಅವರ ಭಾವಚಿತ್ರ ಹಿಡಿದುಕೊಂಡು ಹೆಜ್ಜೆ ಹಾಕಿದರು. ಅವರ ಪರ ಘೋಷಣೆಗಳನ್ನು ಕೂಗಿದರು. ಮುಸ್ಲಿಂ ಮಹಿಳೆಯರೂ ಅಂಬೇಡ್ಕರ್ ಭಾವಚಿತ್ರದೊಂದಿಗೆ ಪ್ರತಿಭಟನಾ ರ‍್ಯಾಲಿಯಲ್ಲಿ ಭಾಗವಹಿಸಿದ್ದರು. ಸಮಿತಿಯ ಅಧ್ಯಕ್ಷ ಉಮೇಶ ಸ್ವಾರಳ್ಳಿಕರ್ ಮಾತನಾಡಿ, ಅಮಿತ್ ಶಾ ಅವರನ್ನು ತಕ್ಷಣವೇ ಕೇಂದ್ರ ಸಂಪುಟದಿಂದ ವಜಾಗೊಳಿಸಬೇಕು. ಅವರ ವಿರುದ್ಧ ದೇಶದ್ರೋಹದ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು. ಪ್ರಧಾನ ಕಾರ್ಯದರ್ಶಿ ಮಹೇಶ ಗೋರನಾಳಕರ್ ಮಾತನಾಡಿ, ಅಮಿತ್ ಶಾ ಅವರು ಅಂಬೇಡ್ಕರ್ ಅವರನ್ನು ಅಪಮಾನಿಸಿ ದೊಡ್ಡ ತಪ್ಪು ಎಸಗಿದ್ದಾರೆ. ಅವರನ್ನು ಸಂಪುಟದಿಂದ ವಜಾಗೊಳಿಸುವವರೆಗೆ ಹೋರಾಟ ಮುಂದುವರಿಯಲಿದೆ ಎಂದು ಹೇಳಿದರು.


ಸಮಿತಿ ಮುಖಂಡ ವಿಠಲದಾಸ್ ಪ್ಯಾಗೆ ಮಾತನಾಡಿ, ಸಂವಿಧಾನ ಜಾರಿಗೆ ಬಂದ ದಿನದಿಂದಲೂ ಮನುಸ್ಮೃತಿ ನಂಬುವವರು ಅದನ್ನು ವಿರೋಧಿಸಿಕೊಂಡೇ ಬಂದಿದ್ದಾರೆ. ಮನುವಾದ ಮುಂದುವರೆಸುವ ಹುನ್ನಾರವಿದು. ಅಮಿತ್ ಶಾ ಅವರ ಹೇಳಿಕೆ ಅದರ ಭಾಗ. ಈ ದೇಶದ ಶೇ 80ರಷ್ಟು ದಲಿತರು, ಅಲ್ಪಸಂಖ್ಯಾತರು, ಹಿಂದುಳಿದವರು ಜಾಗೃತರಾಗಿ ಕೇಂದ್ರದ ವಿರುದ್ಧ ಹೋರಾಟ ಮಾಡಬೇಕು. ಅಮಿತ್ ಶಾ ರಾಜೀನಾಮೆ ಪಡೆಯುವವರೆಗೆ ವಿರಮಿಸಬಾರದು ಎಂದು ಹೇಳಿದರು. ಮುಖಂಡ ಶಿವಶರಣಪ್ಪ ಹುಗ್ಗೆ ಪಾಟೀಲ ಮಾತನಾಡಿ, ಅಮಿತ್ ಶಾ ರಾಜೀನಾಮೆ ಕೊಟ್ಟು ದೇಶದ ಜನರ ಕ್ಷಮೆ ಕೇಳಬೇಕು. ಸಂವಿಧಾನದಿಂದಲೇ ಅಧಿಕಾರ ಪಡೆದಿದ್ದರೂ ಅದನ್ನು ಬರೆದವರ ವಿರುದ್ಧ ಮಾತನಾಡಿರುವುದು ಸರಿಯಲ್ಲ ಎಂದು ಟೀಕಿಸಿದರು.

ಮುಖಂಡ ಬಾಬುರಾವ್ ಹೊನ್ನಾ ಮಾತನಾಡಿ, ಈ ಜಗತ್ತಿನಲ್ಲಿ ಸ್ವರ್ಗ ನೋಡಿದವರೂ ಯಾರೂ ಇಲ್ಲ. ಆದರೆ, ಏಳೇಳು ಜನ್ಮ ಕೂಡ ಅಂಬೇಡ್ಕರ್ ಅವರನ್ನು ನೆನೆಯಬೇಕಾಗುತ್ತದೆ. ಏಕೆಂದರೆ ಈ ದೇಶಕ್ಕೆ ಅವರ ಕೊಡುಗೆ ಅಷ್ಟಿಷ್ಟಲ್ಲ ಎಂದರು.

ಸಮಿತಿ ಗೌರವ ಅಧ್ಯಕ್ಷರಾದ ಚಂದ್ರಕಾಂತ ನಿರಾಟೆ, ಕಲ್ಯಾಣರಾವ್ ಭೋಸ್ಲೆ, ಕಾರ್ಯಾಧ್ಯಕ್ಷರಾದ ವಿಷ್ಣುವರ್ಧನ್ ವಾಲದೊಡ್ಡಿ, ಅಭಿ ಕಾಳೆ, ಉಪಾಧ್ಯಕ್ಷರಾದ ಅಂಬರೀಶ ಕುದುರೆ, ರಾಜಕುಮಾರ ಶಿಂಧೆ, ರಾಜಕುಮಾರ ಡೊಂಗರೆ, ಸಂ-ಜಯ ಭೋಸ್ಲೆ, ಸಂಜುಕುಮಾರ ಮೇತ್ರೆ, ರಾಜಕುಮಾರ ಗುನ್ನಳ್ಳಿ, ರಾಜಕುಮಾರ ಭಾವಿಕಟ್ಟಿ, ಕಾರ್ಯದರ್ಶಿಗಳಾದ ಪವನ್ ಮಿಠಾರೆ, ಪ್ರಕಾಶ ರಾವಣ, ಸಂತೋಷ ಏಣಕೂರೆ, ಹರ್ಷಿತ್ ಪಾಂಡೇಕರ್, ಗೌತಮ ಬಗದಲಕರ್, ಜಗನ್ನಾಥ ಹೊನ್ನಾ, ಪ್ರಕಾಶ ಹಳ್ಳಿಖೇಡ್, ಸಂಘಟನಾ ಕಾರ್ಯದರ್ಶಿ ರಾಹುಲ್ ಡಾಂಗೆ, ಬಾಬುರಾವ್ ಕೌಠಾ, ವಿನೀತ ಗಿರಿ, ಬಿಎಸ್‌ಪಿ ಜಿಲ್ಲಾಧ್ಯಕ್ಷ ಕಪಿಲ ಗೋಡಬಲೆ, ಮುಖಂಡರಾದ ಶ್ರೀಕಾಂತ ಸ್ವಾಮಿ, ಓಂಪ್ರಕಾಶ ರೊಟ್ಟೆ, ಮುಬಶೀರ್ ಶಿಂಧೆ, ಅಮೃತ ಎಸ್. ಮೊಳಕೇರೆ, ಸೈಯದ್ ವಹೀದ್ ಲಖನ್, ಮುನ್ನಾ, ಶಫಿವುಲ್ಲಾ ಬೇಗ್, ಅಮೃತ್ ಮುತ್ತಂಗಿಕರ್, ಜೈಶೀಲ ಮೇತ್ರೆ ಮತ್ತಿತರರು ಪಾಲ್ಗೊಂಡಿದ್ದರು.

ಮಾಜಿ ಪ್ರಧಾನಿ ವಾಜಪೇಯಿ ಅವರ 100ನೇ ಜನ್ಮ ದಿನಾಚರಣೆ.

# ಭಾರತದ ಮೂಲಸೌಕರ್ಯಕ್ಕೆ ವಾಜಪೇಯಿ ಕೊಡುಗೆ :ಯಾಳಗಿ



(ಎಂ. ರಫೀಕ್ ಪಟೇಲ್)

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:–ಮಾಜಿ ಪ್ರಧಾನಿ ವಾಜಪೇಯಿ ಅವರ 100ನೇ ಜನ್ಮ ದಿನಾಚರಣೆ ಅಂಗವಾಗಿ ಇಂದು ಬೆಳಿಗ್ಗೆ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ವಾಜಪೇಯಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿದ ಜಿಲ್ಲಾಧ್ಯಕ್ಷ ಅಮೀನರಡ್ಡಿ ಯಾಳಗಿ ಅವರು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಂತಹ ಉಪಕ್ರಮಗಳ ಮೂಲಕ ಸ್ಥಳೀಯ ಸಂಪರ್ಕವನ್ನು ಹೆಚ್ಚಿಸಲು ವಾಜಪೇಯಿ ಸರ್ಕಾರದ ಪ್ರಯತ್ನಗಳು ಅಷ್ಟೇ ಗಮನಾರ್ಹವಾಗಿವೆ. ಅಂತೆ–ಯೇ, ಅವರ ಸರ್ಕಾರವು ದೆಹಲಿ ಮೆಟ್ರೋಗಾಗಿ ವ್ಯಾಪಕ ಕೆಲಸ ಮಾಡುವ ಮೂಲಕ ಮೆಟ್ರೋ ಸಂಪರ್ಕಕ್ಕೆ ಉತ್ತೇಜನ ನೀಡಿತು. ಇದೀಗ ಇದು ವಿಶ್ವದರ್ಜೆಯ ಮೂಲಸೌಕರ್ಯ ಯೋಜನೆಯಾಗಿ ಎದ್ದು ಕಾಣುತ್ತದೆ. ಹೀಗಾಗಿ, ವಾಜಪೇಯಿ ಸರ್ಕಾರವು ಆರ್ಥಿಕ ಬೆಳವಣಿಗೆಯನ್ನು ಹೆಚ್ಚಿಸಿದ್ದಲ್ಲದೆ, ಏಕತೆ ಮತ್ತು ಏಕೀಕರಣವನ್ನು ಬೆಳೆಸಿತು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಯುವ ಮುಖಂಡ ಮಹೇಶರಡ್ಡಿ ಮುದ್ನಾಳ ಮಾತನಾಡಿದ ಅವರು ಅಟಲ್ ಬಿಹಾರಿ ವಾಜಪೇಯಿ ಅವರು ಅದ್ಭುತ ವಾಗ್ಮಿ ಮತ್ತು ನಾಯಕರಾಗಿ ಹೆಸರುವಾಸಿಯಾಗಿದ್ದು, ನಾಯಕರು ಮತ್ತು ವಿರೋಧ ಪಕ್ಷಗಳಿಂದ ಅಪಾರ ಗೌರವ ಮತ್ತು ಮೆಚ್ಚುಗೆಯನ್ನು ಗಳಿಸಿದ್ದಾರೆ. ಅವರು ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತದ ಸಾಧನೆಗಳಿಗೆ ಹೆಸರುವಾಸಿಯಾಗಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಮಾಜಿ ಜಿಲ್ಲಾಧ್ಯಕ್ಷ ಡಾ.ಶರಣಭೂಪಾಲರಡ್ಡಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುರು ಕಾಮ, ಅಲೆಮಾರಿ ನಿಗಮದ ಮಾಜಿ ಅಧ್ಯಕ್ಷ ದೇವಿಂದ್ರನಾಥ ನಾದ, ವೆಂಕಟರೆಡ್ಡಿ ಅಬ್ಬೆತುಮಕೂರು, ಜಿಲ್ಲಾ ವಕ್ತಾರ ಹಣಮಂತ ಇಟಗಿ, ಜಿಲ್ಲಾ ಉಪಾಧ್ಯಕ್ಷ ಮಾರುತಿ ಕಲಾಲ್, ಜಿಲ್ಲಾ ಕಾರ್ಯದರ್ಶಿ ಮಲ್ಲಿಕಾರ್ಜುನ ಹೋನಿಗೇರಿ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಸುನಿತಾ ಚೌವ್ಹಾಣ, ನಗರ ಮಂಡಲ ಅಧ್ಯಕ್ಷ ಲಿಂಗಪ್ಪ ಹತ್ತಿಮನಿ, ನಗರಸಭೆ ಸದಸ್ಯ ಸ್ವಾಮಿದೇವ ದಾಸನಕೇರಿ ಮತ್ತು ಮಾಶೇಪ್ಪ ನಾಯಕ, ಗೋಪಾಲದಾಸನಕೇರಿ, ಶರಣುಗೌಡ ಅಲಿಪುರ, ನಗರ ಮಂಡಲ ಪ್ರಧಾನ ಕಾರ್ಯದರ್ಶಿ ರಮೇಶ್ ದೊಡ್ಡಮನಿ ಮತ್ತು ಮಲ್ಲಿಕಾರ್ಜುನ ಕಟ್ಟಿಮನಿ, ಶಕುಂತಲಾ ಜಿ, ಭೀಮಬಾಯಿ ಶೆಂಡೀಗಿ, ಮಹಾದೇವಪ್ಪ ಗಣಪುರ, ಯಾಲ್ಲಪ್ಪ ಮೆಳಿಕೇರಿ, ಆಂಜನೇಯ ಬಬಲಾದಿ, ಶಿವಣ್ಣ ಬಡಿಗೇರ ಜಿಲ್ಲಾ ಮಾಧ್ಯಮ ಸಹ ಸಂಚಾಲಕ ಚಂದ್ರಶೇಖರ ಕಡೆಸೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು..

# ಯುನೆಸ್ಕೋ ಪಟ್ಟಿಗೆ ಮಹದೇವ ದೇವಾಲಯ ಸೇರಿಸುವಂತೆ ಒತ್ತಾಯ



( ವೀರಯ್ಯ ವಿ ಹಿರೇಮಠ)

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ತಾಲೂಕಿನ ಇಟಗಿ ಗ್ರಾಮದ ಐತಿಹಾಸಿಕ ಮಹಾದೇವ ದೇವಾಲಯವನ್ನು ಯುನೆಸ್ಕೋ ಪಟ್ಟಿಗೆ ಸೇರಿಸಲು ಸರ್ಕಾರಕ್ಕೆ ನಿವೃತ್ತ ಶಿಕ್ಷಕ ಬಸವರಾಜ ಹಳ್ಳಿ ಒತ್ತಾಯಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಸಾಯಂಕಾಲ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಬಸವರಾಜ ಹಳ್ಳಿ ಮಾತನಾಡುತ್ತ ಕುಕನೂರು ಹಾಗೂ ಯಲಬುರ್ಗಾ ಅವಳಿ ತಾಲೂಕುಗಳ ಐತಿಹಾಸಿಕ ದೇವಾಲಯ ಎಂದು ಇಟಗಿ ಗ್ರಾಮದ ಶ್ರೀ ಮಹಾದೇವ ದೇವಾಲಯ ಪ್ರಸಿದ್ಧಿ ಹೊಂದಿದ್ದು ಇತಿಹಾಸ ಪುಟಗಳಲ್ಲಿ ಈ ದೇವಾಲಯವನ್ನು ದೇವಾಲಯಗಳ ಚಕ್ರವರ್ತಿ ಎಂದು ಬಣ್ಣಿಸಿರುವುದು ನೋಡಬಹುದು ಆಗಿದೆ. ಈ ದೇವಾಲಯ ಕಲ್ಯಾಣ ಚಾಲುಕ್ಯರ ಆರನೇ ಸೋಮೇಶ್ವರ ಆಳ್ವಿಕೆ ಮಾಡಿದ್ದು ಇದನ್ನು ವಿಕ್ರಮ ಶಕೆ ಎಂತಲೂ ಸಹ ಉಲ್ಲೇಖಿಸಲಾಗಿದೆ. ಇತಿಹಾಸದಲ್ಲಿ ಈ ದೇವಸ್ಥಾನ 400ಕ್ಕು ಹೆಚ್ಚು ಬ್ರಾಹ್ಮಣ ಕುಟುಂಬಗಳಿಗೆ ಆಶ್ರಯ ನಿಮಿತ್ತ ಎಂಬ ಕುರುಹುಗಳನ್ನು ಎಂದಿಗೂ ದೇವಾಲಯದಲ್ಲಿ ಕಾಣಬಹುದಾಗಿದೆ. 40 ವರ್ಷಗಳ ಹಿಂದೆಯೇ ಈ ದೇವಾಲಯವನ್ನು ಪುರಾತತ್ವ ಇಲಾಖೆಗೆ ಸೇರ್ಪಡೆಯಾಗಿದ್ದು ಇಲ್ಲಿನ ಐತಿಹಾಸಿಕ ಸ್ಥಳವನ್ನು ವಿಶ್ವ ಪಾರಂಪರಿಕ ಪಟ್ಟಿಯಲ್ಲಿ ಸೇರಿಸುವುದರಿಂದ ಇದರ ಮಹತ್ವ ಪ್ರಪಂಚದಾದ್ಯಂತ ಫಸರಿಸಲಿದ್ದು ಜೊತೆಗೆ ಈ ಭಾಗದ ಅಭಿವೃದ್ಧಿ ಕೂಡ ಆಗಲಿದೆ ಎಂದು ಹೇಳಿದರು.

ಹಿರಿಯ ಸಾಹಿತಿ ರವಿತೇಜ ಅಬ್ಬಿಗೇರಿ ಮಾತನಾಡಿ ಭಾರತೀಯ ಸರ್ವೇಕ್ಷಣ ಪುರಾತತ್ವ ಇಲಾಖೆಯವರು ಈ ದೇವಸ್ಥಾನವನ್ನು ಅಧ್ಯಯನ ಮಾಡಿದರೆ ಖಂಡಿತ ಯುನೆಸ್ಕೊ ಪಟ್ಟಿಗೆ ದೇವಸ್ಥಾನ ಸೇರುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದು ಹೇಳಿದರು. ಸ್ಥಳೀಯ ಪ್ರಗತಿಪರ ಸಂಘಟನೆಗಳ ಸಹಕಾರ ಕೂಡ ಇದಕ್ಕೆ ಅತ್ಯಂತ ಅವಶ್ಯಕ ಎಂದು ಸಹ ತಿಳಿಸಿದರು.

ಈ ವೇಳೆಯಲ್ಲಿ ಪ್ರಮುಖರಾದ ಅಂದಪ್ಪ ಹುರಳಿ, ಮಾದೇವಪ್ಪ ಕುರಿ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ರಾಮಣ್ಣ ಬಜಂತ್ರಿ, ವೀರಣ್ಣ ಅಣ್ಣಿಗೇರಿ, ಬಿ ಆರ್ ಕಾಸಿಂ, ಚನ್ನಬಸಪ್ಪ ಹಳ್ಳಿಕೇರಿ, ಬಸಪ್ಪ ಥಿಯೇಟರ್, ಕಾಕಪ್ಪ ಕುಂಬಾರ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

# 28,29 ರಂದು ದೃಶ್ಯಬೆಳಕು ಸಾಂಸ್ಕೃತಿಕ ಸಂಸ್ಥೆಯ ವಾರ್ಷಿಕೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.25: ನಗರದ ದೃಶ್ಯಬೆಳಕು ಸಾಂಸ್ಕೃತಿಕ ಸಂಸ್ಥೆಯ 11ನೆಯ ವಾರ್ಷಿಕೋತ್ಸವವನ್ನು ಡಿ.28 ಮತ್ತು 29 ರಂದು ನಗರದ ರಂಗಾಯಣದ ಕಲಾಗ್ಯಾಲರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಕಲಾಪ್ರದರ್ಶನ, ಸ್ಲೈಡ್ ಶೋ–ಸಂವಾದ, ದೃಶ್ಯಬೆಳಕು ಗೌರವ ಪುರಸ್ಕಾರ ಮತ್ತು ದೃಶ್ಯಬೆಳಕು ಪ್ರಶಸ್ತಿ ಪ್ರದಾನ ನಡೆಯಲಿದೆ ಎಂದು ಸಂಸ್ಥೆ ಅಧ್ಯಕ್ಷ ಡಾ. ಪರಶುರಾಮ ಪಿ. ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಡಿಸೆಂಬರ್ 28 ಮತ್ತು 29 ರಂದು 11ನೆಯ ವಾರ್ಷಿಕ ಕಲಾ ಪ್ರದರ್ಶನವನ್ನು ಏರ್ಪಡಿಸಲಾಗಿದೆ. ಈ ಕಲಾ ಪ್ರದರ್ಶನದಲ್ಲಿ ಕರ್ನಾಟಕ ರಾಜ್ಯದ ಅಲ್ಲದೆ ದೇಶದ ಬೇರೆ ಬೇರೆ ಭಾಗಗಳಿಂದ ಆಗಮಿಸಿದ 70ಕ್ಕೂ ಹೆಚ್ಚು ಕಲಾವಿದರ ಚಿತ್ರ–ಶಿಲ್ಪ ಮತ್ತು ಛಾಯಾಚಿತ್ರಗಳು ಬೆಳಿಗ್ಗೆ 10 ರಿಂದ ಸಂಜೆ 6:30ರ ವರೆಗೆ ಪ್ರದರ್ಶನಗೊಳ್ಳಲಿವೆ. ಡಿಸೆಂಬರ್ 28 ರಂದು ಸಾಯಂಕಾಲ 4 ಗಂಟೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ ಅವರು ಕಲಾಪ್ರದರ್ಶನವನ್ನು ಉದ್ಘಾಟಿಸುವರು. ಡಿಸೆಂಬರ್ 28 ರಂದು ಸಾಯಂಕಾಲ 4 ಗಂಟೆಗೆ ದೃಶ್ಯಬೆಳಕು ಗೌರವ ಪುರಸ್ಕಾರಕ್ಕೆ ಭಾಜನರಾದ ಹಿರಿಯ ಚಿತ್ರಕಲಾವಿದ ಮೊಹಮ್ಮದ್ ರಿಜ್ವಾನ್ ಇವರು ಸ್ಲೈಡ್ ಶೋ ಮತ್ತು ಸಂವಾದ ಕಾರ್ಯಕ್ರಮವನ್ನು ನಡೆಸಿ ಕೊಡಲಿದ್ದಾರೆ.

# ನಿಜ ಬದುಕಿಗೆ ನಗುವಿನ ಮಹತ್ವ



ಸುಜಾತಾ ಎಮ್. ತೆಳಕೇರಾ ಸರ್ಕಾರಿ ಪ್ರೌಢ ಶಾಲೆ ಜಲಸಂಗಿ

ನಗುವೆ ನಮ್ಮ ಜೀವನದ ಮೂಲ ಮಂತ್ರ. ನಗು ನಮ್ಮ ಜೀವನದ ಒಂದು ಅವಿಭಾಜ್ಯ ಅಂಗ. ಕಷ್ಟಗಳ ನಿವಾರಣೆಗೆ ನಗುವೇ ಉತ್ತಮ ಔಷಧಿ. ಆರೋಗ್ಯದ ಬದುಕಿಗೆ ನಗುವೇ ಒಂದು ಉತ್ತಮ ಚಿಕಿತ್ಸೆ.

ಉತ್ತಮ ಜೀವನಕ್ಕೆ ನಗುವೇ ಸಾಕು. ನಗುವಿನ ಜೀವನವೇ ಬೇಕು. ನಗಿಸುವ ಮನಸುಗಳು ಇರಬೇಕು. ಸಾರ್ಥಕ ಬದುಕಿಗೆ ನಗು ಬೇಕೆಬೇಕು.

ನಗುವ ವ್ಯಕ್ತಿ ಮುಖದಲ್ಲಿ ತೇಜಸ್ಸು ಹೆಚ್ಚು. ನಗುವ ವ್ಯಕ್ತಿಯ ಆಯಸ್ಸು ಹೆಚ್ಚು. ಹೀಗಾಗಿ ಪ್ರತಿಯೊಬ್ಬರು ನಿತ್ಯ ಜೀವನದಲ್ಲಿ ನಗುತಿರಿ, ಆರೋಗ್ಯವಾಗಿರಿ.

# ಬೆರಳೆಣಿಕೆಯ ಸೇರುದಾರರಿಗೆ ಅಷ್ಟೇ ಸೀಮಿತವಾದ ಕೃಷಿ ಪತ್ತಿನ ಸಹಕಾರ ಸಂಘ : ಸಿದ್ದಯ್ಯ ಕಳ್ಳಿಮಠ



( ವೀರಯ್ಯ ವಿ ಹಿರೇಮಠ)

ಮಲ್ಲಮ್ಮ ನುಡಿ ವಾರ್ತೆ


ಕುಕನೂರ : ಪಟ್ಟಣದ ಕೃಷಿ ಪತ್ತಿನ ಸಹಕಾರ ಸಂಘವು ಕೇವಲ ಕೆಲವೇ ವ್ಯಕ್ತಿಗಳಿಗೆ ಸೀಮಿತವಾಗಿದ್ದು ಸಹಕಾರದ ಸಂಘದ ಪ್ರತಿ ವ್ಯವಹಾರ ಹಾಗೂ ಸೌಲಭ್ಯಗಳಲ್ಲಿ ಸಂಘದ ಸದಸ್ಯರನ್ನು ತಾರತಮ್ಯದಿಂದ ನೋಡಲಾಗುತ್ತಿದೆ ಎಂದು ಪಟ್ಟಣದ ಪ್ರಮುಖರಾದ ಸಿದ್ದಯ್ಯ ಕಳ್ಳಿಮಠ ಹೇಳಿದರು.

ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿ ನಡೆದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಸಿದ್ದಯ್ಯ ಕಳ್ಳಿಮಠ ಮಾತನಾಡುತಾ ಡಿಸೆಂಬರ್ 29ರಂದು ಜರುಗುವ ಕುಕನೂರು ಪಟ್ಟಣ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆಗೆ ಮತದಾರರ ಪಟ್ಟಿಯಲ್ಲಿ ದೊಡ್ಡ ಬದಲಾವಣೆಯಾಗಿದ್ದು ಕಳೆದ ಎರಡು ಬಾರಿಯ ಅವಿರೋಧ ಆಯ್ಕೆಯನ್ನೇ ಈ ಬಾರಿಯೂ ಮುಂದುವರಿಸುವ ಉದ್ದೇಶದಿಂದ ಈ ರೀತಿ ಮತದಾರರ ಪಟ್ಟಿಯನ್ನು ತಿರುಚಲಾಗಿದೆ ಎಂದು ಆರೋಪಿಸಿದರು.

ಹಿರಿಯರಾದ ವೀರಯ್ಯ ತೋಟದಾರ್ಯಮಠ ಕೃಷಿ ಪತ್ತಿನ ಸಹಕಾರ ಸಂಘದ ಒಟ್ಟು 12 ಸ್ಥಾನಕ್ಕೆ ಚುನಾವಣೆ ಜರಗಲಿದ್ದು ಬೇರೆ ಯಾರಾದರೂ ಸ್ಪರ್ಧೆ ನಡೆಸಿದರೆ ಯಶಸ್ವಿಯಾಗಬಾರದು ಎಂಬ ಉದ್ದೇಶವನ್ನಿಟ್ಟುಕೊಂಡು 2000 ಕ್ಕೂ ಹೆಚ್ಚಿನ ಸೇರುದಾರ ಸದಸ್ಯರನ್ನು ಹೊಂದಿರುವ ಮತದಾರರ ಪಟ್ಟಿಯಲ್ಲಿ ದೊಡ್ಡ ಪ್ರಮಾಣದ ಬದಲಾವಣೆ ಮಾಡಿದ್ದು ಕೇವಲ 388 ಸೇರುದಾರರು ಸದಸ್ಯರನ್ನು ಮಾತ್ರ ಅರ್ಹ ಮತದಾರರ ಪಟ್ಟಿಯಲ್ಲಿ ಸೇರಿಸಿರುವುದು ಗೊಂದಲದ ಗೂಡಾಗಿದ್ದು ಹಲವಾರು ಅನುಮಾನಗಳು ಹುಟ್ಟಿಕೊಳ್ಳಲು ಕಾರಣವಾಗಿದೆ. ಅವರು ಏನೇ ಪಿತೂರಿ ನಡೆಸಿದರು ಸಹ ಚುನಾವಣೆಯನ್ನು ಎದುರಿಸಿ ಯಶಸ್ಸು ಕಾಣುವ ಭರವಸೆ ನಮಗಿದೆ ಎಂದು ತಿಳಿಸಿದರು.

ಈ ವೇಳೆಯಲ್ಲಿ ರಾಮಣ್ಣ ಭಜಂತ್ರಿ, ಸಂಗಮೇಶ್ ಗುತ್ತಿ, ರೆಹಮಾನ್ ಸಾಬ್ ಮಕಪ್ಪನವರ್, ಮುತ್ತು ವಾಲ್ಮೀಕಿ, ರಾಮಣ್ಣ ಬಂಕದಮನಿ, ಪ್ರಶಾಂತ್ ಆರುಬೆರಳಿನ್, ನೂರುದ್ದೀನ್ ಸಾಬ್ ಗುಡಿಹಿಂದಲ್, ಬಸವರಾಜ ಮಂಡಲಗಿರಿ, ಧರ್ಮಪ್ಪ ತಳವಾರ, ನಿಂಗಪ್ಪ ಗೊರಲೆಕೊಪ್ಪ, ಮಲೆಯಪ್ಪ ಅಣ್ಣಿಗೇರಿ, ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

# ಒಂದು ಮತ್ತು ಎರಡನೇ ಅಂಗನವಾಡಿ ಕೇಂದ್ರದಲ್ಲಿ ಬಾಲ ಮೇಳ ಕಾರ್ಯಕ್ರಮ



( ವೀರಯ್ಯ ವಿ ಹಿರೇಮಠ)

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ತಾಲೂಕ ಆಡೂರು ಗ್ರಾಮದಲ್ಲಿ ಬುದ್ಧ ಬಸವ ಅಂಬೇಡ್ಕರ್ ಭವನದಲ್ಲಿ ಒಂದು ಮತ್ತು ಎರಡು ಕೇಂದ್ರದಲ್ಲಿ ಅಂಗನವಾಡಿ ಕಾರ್ಯಕರ್ತರು ಮತ್ತು ಸಹಾಯಕರು ಮಕ್ಕಳನ್ನು ಕರೆದು–ಕೊಂಡು ಹೋಗಿ ಬಾಲ ಮೇಳ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿತ್ತು. ಈ ಕಾರ್ಯಕ್ರಮವನ್ನು ಗ್ರಾಮ ಪಂಚಾಯತ ಸದಸ್ಯರಾದ ರತ್ನಮ್ಮ ಆಡೂರ ಅವರು ಜ್ಯೋತಿ ಬೆಳಗಿಸುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಒಂದನೇ ಅಂಗನವಾಡಿ ಕೇಂದ್ರದ ಕಾರ್ಯಕತೆ–ರ್ಯಾದ ಶಿಲ್ಪ ಹಿರೇಮಠ ಮಾತನಾಡಿ ಕಾರ್ಯಕ್ರಮದಲ್ಲಿ ಮಗುವಿನ ಶಾಲಾ ಪೂರ್ವ ಶಿಕ್ಷಣ ಅವಶ್ಯಕತೆ ಎಂಬುದರ ಬಗ್ಗೆ ತಿಳಿಸಲಾಯಿತು ಮತ್ತು ಕೇಂದ್ರದಲ್ಲಿ ನಡೆಯುವ ದಿನನಿತ್ಯ ಚಟುವಟಿಕೆಗಳನ್ನು ಮತ್ತು ಮುಕ್ತ ಆಟದ ಬಗ್ಗೆ ತಿಳಿಸಿದರು.

ನಂತರ ಮಾತನಾಡಿದ ಪದ್ಮಾವತಿ ಚರ್ಚೆಯ ಮೂಲಕ ಗೃಹ ಉಪಯೋಗಿ ವಸ್ತುಗಳ ಬಗ್ಗೆ ಚರ್ಚಿಸಲಾಯಿತು. ಅಭಿನಯ ಗೀತೆ ಸಂಖ್ಯೆ ಆಟ ಮತ್ತು ಪೋಷಕರಿಗೆ ಕೇರಾಟ ಆಡಿಸಲಾಯಿತು ಈ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಸದಸ್ಯರು ಹಾಗೂ ಮೇಲ್ವಿಚಾರಕರು ಪ್ರೇಮ್ ಜೀ ಫೌಂಡೇಶ್ ಸಂಸ್ಥೆಯ ಅಧಿಕಾರಿಗಳು ಹಿರಿಯ ಕಾರ್ಯಕರ್ತರು ಅಂಗನವಾಡಿ ಕಾರ್ಯಕರ್ತರು ಮತ್ತು ಸಹಾಯಕರು ಮುದ್ದು ಮಕ್ಕಳು ತಂದೆ ತಾಯಿ ಪೋಷಕರು ಮುಂತಾದವರು ಪಾಲ್ಗೊಂಡಿದ್ದರು.

ಶ್ರೀಶಾಂತ ಮಲ್ಲಿಕಾರ್ಜುನ ಸ್ವಾಮಿಗಳ ಸಲಹೆ * ಹೆಡಗಿಮದ್ರಾದಲ್ಲಿ ಬಯಲಾಟ ಪ್ರದರ್ಶನಕ್ಕೆ ಚಾಲನೆ

# ಜಾನಪದ ಕಲೆಗಳ ಉಳುವಿಗೆ ಶ್ರಮಿಸೋಣ.



(ಎಂ. ರಫೀಕ್ ಪಟೇಲ್)

ಮಲ್ಲಮ್ಮ ನುಡಿ ವಾರ್ತೆ

> ಗ್ರಾಮೀಣ ಗ್ರಭಾಗದ ಹಿರಿಯ ಕಲಾವಿದರು ಅಮೂಲ್ಯ ಕಲೆ ನಶಿಸಿ ಹೋಗದಂತೆ ಮುಂದಿನ ಜನಾಂಗಕ್ಕೆ ತರಬೇತಿ ನೀಡುವ ಮೂಲಕ ಜೀವಂತವಾಗಿ ಇಡಬೇಕು.
>
> **– ಶ್ರೀ ಶಾಂತ ಮಲ್ಲಿಕಾರ್ಜುನ ಪಂಡಿತಾರಾಧ್ಯ ಸ್ವಾಮಿಗಳು.**

ಯಾದಗಿರಿ: ಭಾರತೀಯ ಪರಂಪರೆ, ಸಂಸ್ಕೃತಿ ಮತ್ತು ನೈತಿಕ ಮೌಲ್ಯಗಳನ್ನು ಪೌರಾಣಿಕ ಕಥೆಗಳ ಮೂಲಕ ಪ್ರಚಾರಗೊಳಿಸುವ ಉತ್ತರ ಕರ್ನಾಟಕದ ಗಂಡು ಕಲೆಯಾದ ಬಯಲಾಟ ಉಳಿಯಬೇಕು. ಮುಂದಕ್ಕೂ ಬೆಳೆಯಬೇಕು' ಎಂದು ಶ್ರೀ ಶಾಂತ ಮಲ್ಲಿಕಾರ್ಜುನ ಪಂಡಿತಾರಾಧ್ಯ ಸ್ವಾಮಿಗಳು ನುಡಿದರು.

ತಾಲೂಕಿನ ಹೆಡಗಿಮದ್ರಾ ಗ್ರಾಮದಲ್ಲಿ ಸೋಮವಾರ ರಾತ್ರಿ ಆಯೋಜಿಸಿದ್ದ ಪೌರಾಣಿಕ ಬಯಲಾಟ ಪ್ರದರ್ಶನಕ್ಕೆ ಚಾಲನೆ ನೀಡಿ ಆಶೀರ್ವಚನ ನೀಡಿದ ಅವರು, ಹಿಂದಿನ ಕಾಲದಲ್ಲಿ ಜಾನಪದ ಬಯಲಾಟಗಳು, ಜಾತ್ರೆ, ಉತ್ಸವ ಸಂದರ್ಭಗಳಲ್ಲಿ ಪ್ರತಿ ಗ್ರಾಮಗಳಲ್ಲಿ ವರ್ಷದಲ್ಲಿ ಎರಡು ಮೂರು ಬಾರಿ ನಡೆದು ಗ್ರಾಮೀಣ ಭಾಗದ ಕಲಾವಿದರಿಗೆ ಪ್ರೋತ್ಸಾಹ, ಮನರಂಜನೆ ದೊರೆಯುತ್ತಿತ್ತು. ಆದರೆ, ಇತ್ತೀಚೆಗೆ ಸಿನಿಮಾ ಮತ್ತು ಟಿ.ವಿ ಹಾವಳಿಯಿಂದ ಜೀವಂತ ಕಲೆಯಾದ ನಾಟಕ ಮತ್ತು ಬಯಲಾಟಗಳು ಅಪರೂಪವಾಗುತ್ತಿವೆ. ಉತ್ತರ ಕರ್ನಾಟಕದ ಜಾನಪದದ ಸೊಗಡನ್ನು ಬಿಂಬಿಸುವ ಬಯಲಾಟ ಕಲೆ ಕೇವಲ ಗ್ರಾಮೀಣ ಭಾಗಕ್ಕೆ ಸೀಮಿತವಾಗದೇ ನಗರಗಳಲ್ಲಿಯೂ ಪ್ರದರ್ಶನಗೊಳ್ಳಬೇಕು. ಇದರಿಂದ ನಮ್ಮ ಮುಂದಿನ ಪೀಳಿಗೆಗೆ ಈ ನೆಲದ ಮಣ್ಣಿನ ಪರಿಚಯವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಬಯಲಾಟಗಳಷ್ಟೆ ಅಲ್ಲಾ ನಮ್ಮ ಇಡೀ ಜನಪದ ಕಲಾಪ್ರಕಾರಗಳು ನಮ್ಮ ಸಂಸ್ಕೃತಿಯ ವಾಹಕಗಳಾಗಿವೆ. ಇಂಥ ಕಲೆಗಳು ಮನುಷ್ಯತ್ವವನ್ನು ಮತ್ತು ಸತ್ಯವನ್ನು ಸೋಲಿಸುವುದಿಲ್ಲ. ದೇಶಿಯ ಜೀವನ ಪದ್ಧತಿ ಆಹಾರ– ವಿಹಾರ, ಉಡುಗೆ ತೊಡುಗೆ, ಮುಂತಾದವುಗಳು ವಿದೇಶಿಕರಣಗೊಳ್ಳುತ್ತಿರುವ ಈ ಸಂದರ್ಭದಲ್ಲಿ ಗ್ರಾಮೀಣ ಭಾಗದಲ್ಲಿ ಇಂಥ ಪ್ರಯೋಗಗಳು ಇನ್ನೂ ನಡೆಸುತ್ತಿರುವುದು ಉತ್ತಮ ಬೆಳವಣಿಗೆ ಎಂದು ಶ್ಲಾಘಿಸಿದರು. ಈ ಸಂದರ್ಭದಲ್ಲಿ ದೇವಿ ಪಾತ್ರದ ಶಿವಪ್ಪ ಸಣ್ಣೆಪನೋರ, ಬಯಲಾಟದ ನಿರ್ದೇಶಕ ಮರೆಪ್ಪ ಮಡ್ನಾಳ, ಡೊಲು ಸಾಬಯ್ಯ ಹೋರುಂಚಿ, ಸಿದ್ದಪ್ಪದಾಸರ, ಪಿಟಿಲು ವೆಂಕಟೇಶ್ ನಾಯ್ಕಲ್, ಕಥ ಸಂಚಾಲಕ ಮಂಜುರ್ ಕೋರಬಾ, ಹಿನ್ನೆಲೆ ಗಾಯನ ಚಂದ್ರಶೇಖರ, ಮಲ್ಲಣ್ಣ ವಿಶ್ವಕರ್ಮ, ರಾಮಯ್ಯ ಖಾನಾಳಿ, ಶೇಕಪ್ಪ ಹೋರುಂಚಿ, ಚಂದಪ್ಪ, ಶರಣಪ್ಪ, ಸಾಬಯ್ಯ, ಭಾಗಪ್ಪ, ಚಂದ್ರಪ್ಪ ಸೇರಿದಂತೆ ಗ್ರಾಮದ ಪ್ರಮುಖ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರು ಸಾವಿರಾರು ಜನ ಸೇರಿದ್ದರು..

# ಮಾಜಿ ಪ್ರಧಾನಿ ವಾಜಪೇಯಿ ಜನ್ಮ ಶತಮಾನೋತ್ಸವ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಭಾರತದ ಮಾಜಿ ಪ್ರಧಾನಿ, ಮುತ್ಸದ್ದಿ ರಾಜಕಾರಣಿ ಧೀಮಂತ ನಾಯಕ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವ ದಿನವನ್ನು ಬಿಜೆಪಿ ನಗರ ಘಟಕದ ವತಿಯಿಂದ ಆಚರಿಸಲಾಯಿತು. ಅಟಲ್ ಜಿ ಜನ್ಮ ಶತಮಾನೋತ್ಸವ ದಿನದ ಅಂಗವಾಗಿ ಬುಧವಾರ ನಗರ ಘಟಕದ ಪದಾಧಿಕಾರಿಗಳು ಪಟ್ಟಣದ ವಾರ್ಡ್ ಸಂಖ್ಯೆ 22ರಲ್ಲಿರುವ ಕಾರ್ಯಕರ್ತ ಗುರುರಾಜ್ ಮಾನೆ ಇವರ ಮನೆಯ ಒಂದನೇ ಅಂತಸ್ತಿನಲ್ಲಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಪಕ್ಷದ ಧ್ವಜ ಹಾರಿಸಿ ಜನ್ಮ ಶತಮಾನೋತ್ಸವವನ್ನು ಆಚರಿಸಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಎಸ್ಸಿ ಮೋರ್ಚಾ ಅಧ್ಯಕ್ಷ ರವೀಂದ್ರ ಕಟ್ಟಿಮನಿ ಮಾತನಾಡಿ ಅಟಲ್ ಜಿ ಅವರು ದೇಶ ಕಂಡ ಧೀಮಂತ ನಾಯಕ, ಶ್ರೇಷ್ಠ ಕವಿ ರಾಜಕಾರಣದಲ್ಲಿ ಸದಾ ರಾಜ ಧರ್ಮ ಪಾಲಿಸಿದ ರಾಜಕಾರಣಿ, ಬಿಜೆಪಿ ಪಕ್ಷಕ್ಕೆ ಅವರ ಕೊಡುಗೆ ಮೂಲಭೂತವಾದದ್ದು, ಅವರು ಆರಂಭಿಕ ವರ್ಷಗಳಲ್ಲಿ ಪಕ್ಷವನ್ನು ಬೆಳೆಸಿದರು ಸವಾಲುಗಳು ಹಿನ್ನಡೆಗಳು ಮತ್ತು ಗೆಲುವುಗಳ ಮೂಲಕ ಅದನ್ನು ಮುನ್ನಡೆಸಿದರು. ಸಿದ್ಧಾಂತ ಮತ್ತು ಅಧಿಕಾರದ ನಡುವೆ ಆಯ್ಕೆ ಇದ್ದಾಗೆಲ್ಲಾ ಅವರು ಸಿದ್ಧಾಂತವನ್ನೇ ಆರಿಸಿಕೊಂಡರು. ವಾಜಪೇಯಿ ಅವರ 100ನೇ ಜನ್ಮ ವಾರ್ಷಿಕೋತ್ಸವ ದಿನವಾದ ಇಂದು ಅವರ ಬದುಕಿನ ಆದರ್ಶಗಳನ್ನು ಸಾಕಾರ ಗೊಳಿಸಲು ಮತ್ತು ಭಾರತಕ್ಕಾಗಿ ಅವರ ಕನಸು ನನಸಾಗಿಸಲು ನಮ್ಮನ್ನು ಅರ್ಪಿಸುವ ಪ್ರತಿಜ್ಞೆ ಮಾಡೋಣ ಎಂದರು. ಕಾರ್ಯಕ್ರಮದಲ್ಲಿ ಬಿಜೆಪಿ ನಗರ ಘಟಕ ಅಧ್ಯಕ್ಷ ರಾಘವೇಂದ್ರ ಚವಾಣ್, ಜಿಲ್ಲಾ ಕಾರ್ಯದರ್ಶಿ ಮಂಜುನಾಥ ಶೆಟ್ಟಿ, ಜಿಲ್ಲಾ ಮಹಿಳಾ ಘಟಕದ ಉಪಾಧ್ಯಕ್ಷೆ ಸುವರ್ಣಾ ಬಿರಾದಾರ, ಪುರಸಭೆ ಸದಸ್ಯ ಅಣ್ಣಾರಾವ್ ಜಗತಾಪ, ಮುದುಕಪ್ಪ ಬಡಿಗೇರ, ರಾಮು ಜಗತಾಪ, ಯುವ ಮೋರ್ಚಾ ಸದಸ್ಯ ರಾಘು ಮಾನೆ, ಈಶ್ವರ ಹೂಗಾರ, ಗುರುರಾಜ ಮಾನೆ, ಸಂತೋಷ ಡಿಸಲೆ, ವಿಠಲ ಮೋಹಿತೆ, ಪಾಂಡು ಕದಂ, ಲಂಕೇಶ ಪಾಟೀಲ, ನಾಗರಾಜ ಪತ್ತಾರ, ಆದಪ್ಪ ಕೋರಿ, ಕುಲಭೂಷಣ ಹುಬ್ಬಳ್ಳಿ, ನವೀನ ಡಿಸಲೆ, ಸಂಗು ಪಾಟೀಲ ಮತ್ತಿತರರು ಇದ್ದರು.

# ಶ್ರೀ ದೇಗುಲ ಮಠದ ಮುಮ್ಮಡಿ ನಿರ್ವಾಣ ಶ್ರೀ ಆಶೀರ್ವಾದ ಪಡೆದ ವಿ ಸೋಮಣ್ಣನವರು




ಮಲ್ಲಮ್ಮ ನುಡಿ ವಾರ್ತೆ

ಕನಕಪುರ: ಶ್ರೀಕ್ಷೇತ್ರ ದೇಗುಲಮಠಕ್ಕೆ ಶ್ರೀಮಠದ ಹಳೆ ವಿದ್ಯಾರ್ಥಿ ಹಾಗೂ ಕೇಂದ್ರ ಸರ್ಕಾರದ ರೈಲ್ವೆ ಖಾತೆ ಮತ್ತು ಜಲ ಶಕ್ತಿ ರಾಜ್ಯ ಸಚಿವರಾದ ಸನ್ಮಾನ್ಯ ವಿ ಸೋಮಣ್ಣನವರು ಕುಟುಂಬ ಸಮೇತರಾಗಿ ಆಗಮಿಸಿ ಹಿರಿಯ ಪರಮಪೂಜ್ಯ ಡಾ. ಶ್ರೀ ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳವರು ಹಾಗೂ ಕಿರಿಯ ಪರಮಪೂಜ್ಯ ಶ್ರೀ ಶ್ರೀ ಚನ್ನಬಸವ ಮಹಾಸ್ವಾಮಿಗಳವರ ದಿವ್ಯ ದರ್ಶನ ಆಶೀರ್ವಾದ ಪಡೆದರು ಮತ್ತು ಗದ್ದುಗೆ ಅಭಿಷೇಕ ಪೂಜೆಗಳನ್ನು ಸಲ್ಲಿಸಿ ಗುರು ಶ್ರೀರಕ್ಷೆಯನ್ನು ಪಡೆದರು ಈ ಸಂದರ್ಭದಲ್ಲಿ ಧರ್ಮಪತ್ನಿ ಶೈಲಜಾ ಸೋಮಣ್ಣನವರು ಮತ್ತು ಸಿಟಿಒ ರಾಜೇಂದ್ರ ಕುಮಾರ್ ರವರು ಹಾಗೂ ವಿ ಸೋಮಣ್ಣ ಪ್ರತಿಷ್ಠಾನದ ಕಾರ್ಯದರ್ಶಿ ಪಾಲನೇತ್ರರವರು ಉಪಸ್ಥಿತರಿದ್ದರು.

# ಲೋಕ ಮುದ್ರಾ ಸಹಕಾರಿ ಮಾದರಿ ಸಹಕಾರಿಯಾಗಲಿ:ಶಾಸಕ ಪಾಟೀಲ್



(ರಾಜಕುಮಾರ ಆರ್.ಹಡಪದ)
ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಗ್ರಾಹಕರೊಂದಿಗೆ ಉತ್ತಮ ಭಾಂದವ್ಯವನ್ನು ಹೊಂದಿರುವ ಸಂಸ್ಥೆ ಉತ್ತುಂಗಕ್ಕೇರುತ್ತದೆ.ಗ್ರಾಹಕರ ವಿಶ್ವಾಸವನ್ನು ಕಾಯ್ದುಕೊಂಡು ರಾಜ್ಯದಲ್ಲಿ ಮಾದರಿ ಆರ್ಥಿಕ ಸಂಸ್ಥೆಯಾಗಿ ಲೋಕಮುದ್ರಾ ಸೌಹಾರ್ದ ಕ್ರೆಡಿಟ್ ಕೋ-ಅಪರೇಟಿವ್ ಮೂಡಿಬರಲಿ ಎಂದು ಶಾಸಕ ಡಾ. ಸಿದ್ದು ಪಾಟೀಲ್ ಹೇಳಿದರು. ಬುಧವಾರ ಪಟ್ಟಣದ ಡಿಸಿಸಿ ಬ್ಯಾಂಕ ಎದುರುಗಡೆ ಲೋಕಮುದ್ರಾ ಸೌಹಾರ್ದ ಕ್ರೆಡಿಟ್ ಕೋ- ಅಪರೇಟಿವ್ ಶಾಖೆ ಉದ್ಘಾಟಿಸಿ ಮಾತನಾಡಿದ ಅವರು, ಮನುಷ್ಯಕ್ಕಿಂತಲ್ಲೂ ಮೀರಿದ್ದು ಯಾವುದು ಇಲ್ಲ, ಮನುಷ್ಯ ಮನಸ್ಸು ಮಾಡಿದರೆ ಯಾವುದೇ ಕಾರ್ಯ ಮಾಡಲು ಸಾಧ್ಯವಾಗುತ್ತದೆ. ಬ್ಯಾಂಕ್ ತೆರೆಯುವುದು ಮುಖ್ಯವಲ್ಲ, ಬ್ಯಾಂಕ್ ಬಹಳಷ್ಟು ತೆಗೆಯುತ್ತಾರೆ ಅದರೆ ಸಮಾಜದಲ್ಲಿ ನಿರುದ್ಯೋಗಿ ಯುವಕರಿದ್ದಾರೆ, ಅವರಿಗೆ ಉದ್ಯೋಗ ಕೊಡುವ ಕೆಲಸ ಲೋಕಮುದ್ರಾ ಸೌಹಾರ್ದ ಸೂಸೈಟಿ ಸಂಸ್ಥಾಪಕ ಅಧ್ಯಕ್ಷ ಸುಭಾಷ ಶೆಡೋಳೆ ರವರು ನಡೆಸಿಕೊಂಡು ಮುಂದೆ ಬರುವ ಕೆಲಸ ಮಾಡುತ್ತಿದ್ದಾರೆ. ನನ್ನ ಪರವಾಗಿ ಅಭಿನಂದನೆ ಸಲ್ಲಿಸುತ್ತೇನೆ ಎಂದರು. ಚಿಟಗುಪ್ಪಾ ತಾಲ್ಲೂಕಾ ಕೇಂದ್ರವಾಗಿ ಸುಮಾರು ವರ್ಷ ಕಳೆದರೂ ಕೂಡ ಇನ್ನೂ ತಾಲ್ಲೂಕಿಗೆ ಬೇಕಾಗಿರುವ ಸರಕಾರಿ ಕಛೇರಿಗಳು ಮಿನಿವಿಧಾನ ಸೌಧ ಕ್ರೀಡಾಂಗಣಾ ಸೇರಿದಂತೆ ಇನ್ನಿತರ ಮೂಲಭೂತ ಸೌಕರ್ಯ ಒದಗಿಸುವಂತೆ ಕಳೆದ ಚಳಿಗಾಲದ ಅಧಿವೇಶನದಲ್ಲಿ ನಾನು ಧ್ವನಿ ಎತ್ತಿ ಸರ್ಕಾರದ ಗಮನಕ್ಕೆ ತಂದಿದ್ದೇನೆ. ಸರ್ಕಾರ ಈ ಬಗ್ಗೆ ಕಾಳಜಿ ವಹಿಸದಿದ್ದರೆ ನಾನು ಕೆ.ಕೆ.ಆರ್.ಡಿ.ಬಿ ಅನುದಾನದಲ್ಲಿ ಮಿನಿವಿಧಾನ ಸೌಧ, ಕ್ರೀಂಡಾಗಣ ನಿರ್ಮಿಸುವುದಾಗಿ ಭರವಸೆ ನೀಡಿದರು. ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ ಶ್ರೀ ಶರಣ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರು ಮಾತನಾಡಿ, ಬ್ಯಾಂಕ್‌ಗಳು ಹಂತ-ಹಂತವಾಗಿ ಬೆಳವಣಿಗೆ ಹೊಂದಬೇಕಾದರೆ ಗ್ರಾಹಕರೊಂದಿಗೆ ಉತ್ತಮ ಬಾಂಧವ್ಯವನ್ನು ಬ್ಯಾಂಕಿನ ಆಡಳಿತ ಮಂಡಳಿ ಹಾಗೂ ಸಿಬ್ಬಂದಿಗಳು ಹೊಂದಿದ್ದರೆ ಆ ಬ್ಯಾಂಕ್‌ಗಳು ಉತ್ತಮ ರೀತಿಯಿಂದ ಬೆಳೆಯಲು ಸಾಧ್ಯವಾಗುತ್ತದೆ ಎಂದು ನುಡಿದರು. ದೇಶದಲ್ಲಿಯೇ ನಮ್ಮ ಬೀದರ ಜಿಲ್ಲೆಯ ಜನರು ಬೇಗನೆ ನಂಬಿಕೆ ಇಡುತ್ತಾರೆ, ಆ ನಂಬಿಕೆಯನ್ನು ದ್ರೋಹ ಆಗದಂತೆ ನೋಡಿಕೊಳ್ಳುತ್ತಾರೆ. ನೀವು ಕೂಡಾ ನಂಬಿಕೆಯಿಂದ ನೋಡಿಕೊಂಡು ಸಾಲ ಸೌಲಭ್ಯ ಒದಗಿಸಬೇಕು, ಆ ಸಾಲ ಪಡೆದು ನಂಬಿಕೆಯಿಂದ ಮರು ಪಾವತಿ ಮಾಡಬೇಕು. ಬೀದರ ಜಿಲ್ಲೆಯಲ್ಲಿ ಸುಮಾರು 20 ಶಾಖೆಗಳು ಸ್ಥಾಪನೆಯಾಗಿವೆ. ಇನ್ನು ಜಿಲ್ಲೆ ಅಲ್ಲದೇ ರಾಜ್ಯ ಹಾಗೂ ದೇಶದಲ್ಲಿ ಹೆಚ್ಚು ಬ್ಯಾಂಕ್‌ಗಳು ಸ್ಥಾಪನೆಯಾಗಲಿ ಎಂದು ಶುಭ ಹಾರೈಸಿದರು. ಲೋಕಮುಂದ್ರಾ ಸೌಹಾರ್ದ ಸಹಕಾರಿಯ ಅಧ್ಯಕ್ಷ ಸುಭಾಷ ಶೆಡೋಳೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಿರೋದ್ಯೋಗಿಗಳಿಗೆ ಉದ್ಯೋಗ ನೀಡುವುದೇ ನಮ್ಮ ಮೂಲ ಉದ್ದೇಶವಾಗಿದೆ, ನಿರೋದ್ಯೋಗಿಗಳ ಸಮಸ್ಯೆಯ ನಿವಾರಣೆಯನ್ನು ಪ್ರತಿಯೊಬ್ಬ ವ್ಯಾಪಾರಿ ಮಾಡಬಹುದು ಎಂದರು. ಈಗಾಗಲೇ ನಮ್ಮ ಸಂಸ್ಥೆಯಿಂದ 300 ಜನರ ಕೈಗೆ ಕೆಲಸವನ್ನು ನೀಡಿದ್ದೇವೆ ಹಾಗೂ ಜನರ ವಿಶ್ವಾಸ ಗಳಿಸಿದ್ದೇವೆ, ಈಗಾಗಲೇ ನಮ್ಮ ಸಹಕಾರಿಯಲ್ಲಿ 125 ಕೋಟಿ, ರೂಪಾಯಿ ಠೇವಣಿ ಜಮಾ ಆಗಿದೆ ಎಂದು ತಿಳಿಸಿದರು. ಹಾಗೂ ರೈತರಿಗಾಗಿ ಹೆಚ್ಚಿನ ಸಾಲ ನೀಡಲು ಆಗದೆ ಇದ್ದರು ಅವರಿಗೆ ಉತ್ತಮ ಕಂಪನಿಗಳಿಂದ ಆಗ್ರೋಗಳ ಮೂಲಕ ಸಾಮಗ್ರಿಗಳು ಸರಬರಾಜು ಮಾಡುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ರಾಯ ಬಸವಂತ ರಾಯ ದೇಶಮುಖ, ಪಿಎಸ್‌ಐ, ಬಾಷುಮಿಯಾ ಕೊಂಚೂರ್, ಆರೋಗ್ಯಾಧಿಕಾರಿ ಡಾ. ವಿಜಯ ಹಿರಸ್ಕರ್, ಉದಯಕುಮಾರ್ ಐನಾಪುರ್, ಆಕಾಶ ಗುತ್ತೆದಾರ್, ವಿಜಯಕುಮಾರ್ ಬೊಮಣಿ, ರೇವಣ್ಣಪ್ಪ ಹೂಗರ್, ರವಿಷಚಂದ್ರ ಶಿವಪೂಜಿ, ಬಸವರಾಜ ಪಾಟೀಲ್, ಉತ್ತಮಕುಮಾರ ಧೂಮಳೆ, ಪ್ರಕಾಶ ಗೌಳಿ, ಶಾಮರಾವ ಭುತ್ತಾಳೆ, ವಿಠಲರಾವ ಪಟ್ಟಣ್ಣಕ್ಕರ್, ಮಧುಕರ್ ಬಿರಾದಾರ್, ಬಸಪ್ಪ ರೆಡ್ಡಿ, ಮಲ್ಲಿಕಾರ್ಜುನ ಪಾಟೀಲ್, ಸೂರ್ಯಕಾಂತ ಮಠಪತಿ, ಅರುಣಕುಮಾರ್ ಬಾವಗಿ, ಅಮೀತ ತೋಗಲೂರ್, ರಾಜಗೋಪಾಲ್ ಐನಾಪುರ್, ನರಸಪ್ಪ ನರನಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಕ್ಕಳ ಮೂಲಭೂತ ಹಕ್ಕುಗಳ ಸಾಕಾರಕ್ಕೆ ಸರ್ವರ ಪ್ರಯತ್ನ ಅಗತ್ಯ



(ಮಲ್ಲಪ್ಪಾಟಿಹಾಸಗೊಂಡ)

ಭಾಲ್ಕಿ: ಮಕ್ಕಳ ಮೂಲಭೂತ ಹಕ್ಕುಗಳು ಸಾಕಾರವಾಗಬೇಕಾದರೆ ಪ್ರತಿಯೊಬ್ಬರೂ ಮಕ್ಕಳ ಹಕ್ಕುಗಳು ನಮ್ಮ ಕರ್ತವ್ಯವೆಂದು ಭಾವಿಸಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ವತಿಯಿಂದ ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ರಚನೆಯಾಗಿರುವ ವಿವಿಧ ಕಾನೂನುಗಳ ಕುರಿತು ಹಮ್ಮಿಕೊಂಡಿದ್ದ ಒಂದು ದಿನದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಹತ್ತಾರು ಕಾಯ್ದೆ ಕಾನೂನುಗಳಿವೆ. ಅವುಗಳ ಪರಿಕಲ್ಪನೆಯ ಬಗ್ಗೆ ಸಮಾಜದ ಎಲ್ಲರಿಗೂ ತಿಳಿ ಹೇಳಬೇಕಾಗಿರುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ತಿಳಿಸಿದರು.

ಮಕ್ಕಳು ನಮ್ಮ ದೇಶದ ಆಸ್ತಿಯಾಗಿದ್ದು, ಅವರನ್ನು ಜೋಪಾನವಾಗಿ ಕಾಪಾಡುವುದು ಮತ್ತು ಸಂರಕ್ಷಿಸುವುದು ಎಲ್ಲರ ಜವಾಬ್ದಾರಿಯಾಗಿದೆ. ಪ್ರತಿಯೊಬ್ಬರೂ ತಮ್ಮ ಕರ್ತವ್ಯ ವ್ಯಾಪ್ತಿಯಲ್ಲಿ ಶ್ರೇಷ್ಠತೆ ಸಾಧಿಸಬೇಕಾದರೆ ಮೂಲಭೂತ ಕರ್ತವ್ಯ ಪರಿಪಾಲನೆ ಅತ್ಯವಶ್ಯಕ. ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಸರ್ವರೂ ಶ್ರಮಿಸಬೇಕು ಎಂದು ನುಡಿದರು.

ಹಿರೇಮಠದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಮಕ್ಕಳು ರಾಷ್ಟ್ರದ ಬಹುದೊಡ್ಡ ಸಂಪತ್ತು. ಮಕ್ಕಳ ಸೇವೆ ದೇವರ ಸೇವೆ. ಇದು ಭಗವಂತನಿಗೆ ತೃಪ್ತಿಯಾಗುವ ಕಾರ್ಯ. ಶಿಕ್ಷಕರು, ಪಾಲಕರು ಮಕ್ಕಳಲ್ಲಿ ನೈತಿಕತೆ, ಸಾಮಾಜಿಕ ಮೌಲ್ಯ ಸೇರಿದಂತೆ ಸದ್ಗುಣಗಳನ್ನು ಬೆಳೆಸಲು ಸದಾ ಪ್ರಯತ್ನಿಸಬೇಕು ಎಂದು ಹೇಳಿದರು.

ಮಕ್ಕಳ ಹಕ್ಕುಗಳ ರಕ್ಷಣೆ, ಸಂರಕ್ಷಣೆ, ಬಾಲ್ಯವಿವಾಹ, ಗರ್ಭಪಾತ, ಶಿಶು ಮರಣ, ಬಾಣಂತಿಯರ ಸಾವು ತಡೆಯುವುದು ಸೇರಿ ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಅವಿರತವಾಗಿ ಶ್ರಮಿಸುತ್ತಿರುವ ಶಶಿಧರ ಕೋಸಂಬೆ ಅವರ ಕಾರ್ಯ ಮಾದರಿ ಎಂದು ಶ್ಲಾಘಿಸಿದರು.

ಕೊಪ್ಪಳ ಜಿಲ್ಲಾಧಿಕಾರಿಯ ಕಚೇರಿ ಯುನಿಸೆಫ್ ಮಕ್ಕಳ ಜಿಲ್ಲಾ ಸಂರಕ್ಷಣಾ ಯೋಜನೆಯ ಪ್ರಾದೇಶಿಕ ಸಂಯೋಜಕ ಡಾ.ಕೆ. ರಾಘವೇಂದ್ರ ಭಟ್ ವಿಶೇಷ ಉಪನ್ಯಾಸ ನೀಡಿದರು.

ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು, ಮಹಾಲಿಂಗ ಸ್ವಾಮೀಜಿ,ಪ್ರಾಚಾರ್ಯ ಬಸವರಾಜ ಮೊಳಕೀರೆ ಇದ್ದರು.

ಆಡಳಿತಾಧಿಕಾರಿ ಮೋಹನರೆಡ್ಡಿ ಸ್ವಾಗತಿಸಿದರು. ಲಕ್ಷ್ಮಣ ಮೇತ್ರೆ ನಿರೂಪಿಸಿದರು. ಹಿರೇಮಠ ಸಂಸ್ಥಾನ ವಿದ್ಯಾಪೀಠದ ಸಂಯೋಜಕ ಬಾಲಾಜಿ ವಲ್ಲೂರೆ ವಂದಿಸಿದರು.

# ಪಿಡಿಒ ವಿರುದ್ಧ ಕ್ರಿಮಿನಲ್ ಕೇಸ್

ಮಲ್ಲಮ್ಮ ನುಡಿ ವಾರ್ತೆ
(ರಾಜಕುಮಾರ ಆರ್.ಹಡಪದ)



ಚಿಟಗುಪ್ಪ:-ತಾಲೂಕಿನ ನಿರ್ಣಾ ಗ್ರಾಪಂನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪಿಡಿಒ ಅಶ್ವಿನಿ ಮೇಲೆ ಗ್ರಾಪಂನ ಲಕ್ಷಾಂತರ ರೂಪಾಯಿ ಹಣ ದುರುಪಯೋಗ ಕುರಿತು ಕ್ರಿಮಿನಲ್ ಪ್ರಕರಣ ದಾಖಲಾಗಿದೆ.2023/24ನೇ ಸಾಲಿನ ನಿರ್ಣಾ ಗ್ರಾಪಂನಲ್ಲಿ 15ನೇ ಹಣಕಾಸು ಯೋಜನೆಯಡಿ ಕ್ರಿಯಾ ಯೋಜನೆಯನ್ನು ತಯಾರಿಸದೇ ಹಾಗು ಗ್ರಾಮ ಸಭೆಯಲ್ಲಿ ಅನುಮೋದನೆ ಪಡೆಯದೇ ಸರ್ಕಾರದ ಮಾರ್ಗ ಸೂಚಿಗಳನ್ನು ಗಾಳಿಗೆ ತೂರಿ ಹಣ ಖರ್ಚು ಮಾಡಿದ್ದ ಆರೋಪ ಮತ್ತು ಗ್ರಾ. ಪಂ ವ್ಯಾಪ್ತಿಯಲ್ಲಿ ವಸೂಲಿಯಾದ ತೆರಿಗೆ ಮೊತ್ತವನ್ನು ಗ್ರಾ.ಪಂನ ಸಿಬ್ಬಂದಿಗಳ ಹೆಸರಿನಲ್ಲಿ ಚೆಕ್ ನೀಡಿ ನಿಯಮ ಬಾಹಿರವಾಗಿ ಖರ್ಚು ಮಾಡಿ ಹಣ ದುರ್ಬಳಕೆ ಮಾಡಿಕೊಂಡಿರುವ ಆರೋಪದ ಬಗ್ಗೆ ಜಂಟಿ ವರದಿಯ ಹಿನ್ನೆಲೆಯಲ್ಲಿ ಚಿಟಗುಪ್ಪ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಮದರಗಾಂವ ಮನ್ನಾಎಖೇಳಿ ಪೋಲಿಸ್ ಠಾಣೆಯಲ್ಲಿ ಪಿಡಿಒ ಅಶ್ವಿನಿ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿದ್ದಾರೆ.

## ಡಿ.28 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆಗಳ ಆಯೋಜನೆ: ಹೆಸರು ನೋಂದಣಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಡಿಸೆಂಬರ್.25 (ಕರ್ನಾಟಕ ವಾರ್ತೆ):-2024-25 ನೇ ಸಾಲಿನ ರಾಜ್ಯ ಮಟ್ಟದ ಯುವಜನೋತ್ಸವವನ್ನು 15 ರಿಂದ 29 ವರ್ಷದೊಳಗಿನ ಯುವಕ ಯುವತಿಯರಿಗಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಬೀದರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ಎನ್.ಎಸ್.ಎಸ್. ಹಾಗೂ ಕರ್ನಾಟಕ ಕಲಾ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಹಾಗೂ ಯುವ ಒಕ್ಕೂಟಗಳ ಸಂಯುಕ್ತಶ್ರಯದಲ್ಲಿ ಕರ್ನಾಟಕ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಬೀದರದಲ್ಲಿ ಡಿಸೆಂಬರ್.28 ರಂದು ಬೆಳಿಗ್ಗೆ 10 ಗಂಟೆಯಿಂದ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಕಾರಣ ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆಗಳಲ್ಲಿ ಭಾಗವಹಿಸುವ ಸ್ಪರ್ಧಾಳುಗಳು ಡಿಸೆಂಬರ್.28 ರಂದು ಬೆಳಿಗ್ಗೆ 9 ಗಂಟೆಗೆ ಕರ್ನಾಟಕ ಕಾಲೇಜಿನಲ್ಲಿ ತಮ್ಮ ಬ್ಯಾಂಕ್ ಪಾಕ್‌ಬುಕ್, ಆಧಾರ ಕಾರ್ಡ್‌ನೊಂದಿಗೆ ಹಾಜರಾಗಿ ನೋಂದಣಿ ಮಾಡಿಕೊಳ್ಳುವಂತೆ ಬೀದರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸ್ಪರ್ಧೆಗಳ ವಿವರ: ಡಿಸೆಂಬರ್.28 ರಂದು ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ನಾವೀನ್ಯತೆ ಸ್ಪರ್ಧೆ ಹಾಗೂ ಕಥೆ ಬರೆಯುವುದು (ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿ), ಕವಿತೆ ಬರೆಯುವುದು (ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿ), ಚಿತ್ರಕಲೆ (ಅಳತೆ 11.7",16.5"), ಮೊಬೈಲ್ ಫೋಟೋಗ್ರಾಫಿ, ಭಾಷಣ ಸ್ಪರ್ಧೆ ಹಿಂದಿ ಮತ್ತು ಆಂಗ್ಲ ಭಾಷೆಯಲ್ಲಿ ಇರಬೇಕು (ರಾಷ್ಟಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲು) ಕನ್ನಡ ಭಾಷೆಯನ್ನು ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮದವರೆಗೆ ಮಾತ್ರ ಸೀಮಿತಗೊಳಿಸಿದೆ. (ಕನ್ನಡ, ಆಂಗ್ಲ,ಹಿಂದಿ ಭಾಷೆಯಲ್ಲಿ) ಸ್ಪರ್ಧಾಳುಗಳು ಸಿದ್ಧಪಡಿಸಿಕೊಂಡಿರುವ ಆಯ್ದ ವಿಷಯಗಳ ಬಗ್ಗೆ 3 ನಿಮಿಷಗಳು, ಸಾಂಸ್ಕೃತಿಕ ಕಾರ್ಯಕ್ರಮ ಜನಪದ ನೃತ್ಯ (ತಂಡ), ಜನಪದ ಗೀತೆ (ತಂಡ).

ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಬೀದರ್‌ನ ಯುವ ಸಮಾಲೋಚಕರು (9886731405/8951003010), ಯುವ ಪರಿವರ್ತಕರು ಭಾಲ್ಕಿ (9164455516), ಯುವಪರಿವರ್ತಕರು ಔರಾದ(ಬಿ) (7411916288), ಪರಿವರ್ತಕರು ಹುಮನಾಬಾದ (9535230350), ಪರಿವರ್ತಕರು ಬಸವಕಲ್ಯಾಣ (9164455516) ಸಂಪರ್ಕಿಸಬಹುದಾಗಿದೆ ಹಾಗೂ ಪ್ರಯಾಣ ಭತ್ತೆ ಮತ್ತು ನಗದು ಬಹುಮಾನವನ್ನು ಜಿಲ್ಲಾ ಮಟ್ಟದಲ್ಲಿ ತಾಲೂಕುಗಳಿಂದ ಆಗಮಿಸಿ ಭಾಗವಹಿಸುವ ಸ್ಪರ್ಧಾಳುಗಳು ನೋಂದಣಿ ಸಮಯದಲ್ಲಿ ನೀಡು ಬ್ಯಾಂಕ್ ಖಾತೆಗೆ ನೇರವಾಗಿ ಕೆ2 ಮೂಲಕ ಪಾವತಿಸಲಾಗುವುದು ಎಂದು ತಿಳಿಸಿದ್ದಾರೆ.

## ಡಿ.28 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಡಿಸೆಂಬರ್.25-ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ಎನ್.ಎಸ್.ಎಸ್. ಹಾಗೂ ಕರ್ನಾಟಕ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಡಿಸೆಂಬರ್.28 ರಂದು ಬೀದರ ಕರ್ನಾಟಕ ಕಾಲೇಜು ಆಡಿಟೋರಿಯಂದಲ್ಲಿ 2024-25ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ (ಆಯ್ಕೆ ಕಾರ್ಯಕ್ರಮ) ಹಮ್ಮಿಕೊಳ್ಳಲಾಗಿದೆ.

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಮ್ ಖಾನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ಔರಾದ(ಬಿ) ಶಾಸಕ ಪ್ರಭು ಬಿ.ಚವ್ಹಾಣ್, ಬಸವಕಲ್ಯಾಣ ಶಾಸಕ ಶರಣು ಸಲಗಾರ, ಹುಮನಾಬಾದ ಶಾಸಕ ಡಾ.ಸಿದ್ಧಲಿಂಗಪ್ಪ ಎನ್.ಪಾಟೀಲ್, ವಿಧಾನ ಪರಿಷತ್ ಸದಸ್ಯರುಗಳಾದ ಡಾ.ಚಮದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಎಂ.ಜಿ.ಮುಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಬಿದರ ನಗರಸಭೆ ಅಧ್ಯಕ್ಷರಾದ ಮಹಮ್ಮದ ಗೌಸ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಭಾಗವಹಿಸಲಿದ್ದಾರೆ. ಗೌರವಾನ್ವಿತ ಆಮಂತ್ರಿಕರಾಗಿ ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಬೀದರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ್ ಬದೋಲೆ, ಬೀದರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಬೀದರ ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಸತೀಷ ಪಾಟೀಲ ಭಾಗವಹಿಸಲಿದ್ದಾರೆ.

# ಪ್ರಚಾರ ಸಭೆಯಲ್ಲಿ ಮಾತೆ ಡಾ. ಗಂಗಾದೇವಿ ಮನವಿ ಶರಣ ಮೇಳದಲ್ಲಿ ಪಾಲ್ಗೊಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 25 :- ಕೂಡಲಸಂಗಮದಲ್ಲಿ ಜ.12 ರಿಂದ 14 ರವರೆಗೆ ನಡೆಯಲಿರುವ ಶರಣ ಮೇಳದಲ್ಲಿ ಬೀದರ್ ಜಿಲ್ಲೆಯ ಬಸವಾನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಬಸವ ಧರ್ಮ ಪೀಠಾಧ್ಯಕ್ಷೆ ಮಾತೆ ಡಾ. ಗಂಗಾದೇವಿ ಮನವಿ ಮಾಡಿದರು.

ನಗರದ ಕೆ.ಕೆ. ಗಂದಿಗುಡಿ ಕಲ್ಯಾಣ ಮಂಟಪದಲ್ಲಿ ನಡೆದ ಶರಣ ಮೇಳ ಪ್ರಚಾರ ಸಭೆಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಶರಣ ಮೇಳಕ್ಕೆ ಸಕಲ ಸಿದ್ಧತೆಗಳು ಭರದಿಂದ ನಡೆದಿವೆ. ಎಲ್ಲೆಡೆ ಮೇಳದ ಪ್ರಚಾರ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಬಸವ ದಳದ ಬೀದರ್ ನಗರ ಘಟಕದ ನೂತನ ಅಧ್ಯಕ್ಷ ವಿವೇಕಾನಂದ ಕಾಶೆಪ್ಪ ಧನ್ನೂರ ಅವರನ್ನು ಅಭಿನಂದಿಸಲಾಯಿತು. ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ನೂತನ ಅಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ, ಗಾಂಧಿಗಂಜ್ ಸಹಕಾರ ಬ್ಯಾಂಕ್ ನಿರ್ದೇಶಕ ವಿಶ್ವನಾಥ ಕಾಜಿ, ಶಿವಶರಣಪ್ಪ ಹುಗ್ಗಿ ಪಾಟೀಲ ಹಾಗೂ ರಾಜಕುಮಾರ ಬೇಲೂರೆ ಅವರನ್ನು ಸನ್ಮಾನಿಸಲಾಯಿತು.

ಜಾಗತಿಕ ಲಿಂಗಾಯತ ಮಹಾಸಭಾದ ಕೇಂದ್ರ ಸಮಿತಿಯ ಉಪಾಧ್ಯಕ್ಷ ಬಸವರಾಜ ಬುಳ್ಳಾ ಷಟ್‌ಸ್ಥಲ ಧ್ವಜಾರೋಹಣ ಮಾಡಿದರು. ಶೀಲಾ ಸೋಮಶೇಖರ ಪಾಟೀಲ ಗಾದಗಿ ಅಧ್ಯಕ್ಷತೆ, ಜಿಲ್ಲಾ ಲಿಂಗಾಯತ ಸಮಾಜದ ಅಧ್ಯಕ್ಷ ಕುಶಾಲರಾವ್ ಪಾಟೀಲ ಖಾಜಾಪುರ ನೇತೃತ್ವ ವಹಿಸಿದ್ದರು.

ಪ್ರಮುಖರಾದ ಚಂದ್ರಶೇಖರ ಹೆಬ್ಬಾಳೆ, ರಾಜೇಂದ್ರಕುಮಾರ ಗಂದಗೆ, ಶಂಕರೆಪ್ಪ ಪಾಟೀಲ, ಜಹೀರಾಬಾದ್, ಡಾ. ಶರಣಪ್ಪ ಬಾಲೋದೆ, ಸಂಜೀವಕುಮಾರ ಪಾಟೀಲ, ಶಿವಶರಣಪ್ಪ ವಲ್ಲೇಪುರೆ, ನಾಗಯ್ಯ ಸ್ವಾಮಿ ಮುಧೋಳ, ಶಿವಕುಮಾರ ಪಾಟೀಲ ನಾವದಗೇರಿ, ಅಶೋಕ ಶೀಲವಂತ ಮತ್ತಿತರರು ಇದ್ದರು.

ಕಸ್ತೂರಬಾಯಿ ಕಂಟೆಪ್ಪ ಗಂದಿಗುಡಿ ದಂಪತಿ ಗುರು ಬಸವ ಪೂಜೆ ನೆರವೇರಿಸಿದರು. ಸುಲೋಚನಾ ವಿವೇಕ ಪಟ್ನೆ ಪ್ರಾರ್ಥನೆ ನಡೆಸಿಕೊಟ್ಟರು.

ರಾಜೇಂದ್ರ ಜೊನ್ನಿಕೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿದ್ಧರಾಮ ಶೆಟಕಾರ್ ಸ್ವಾಗತಿಸಿದರು. ಸುರೇಶಕುಮಾರ ಸ್ವಾಮಿ ನಿರೂಪಿಸಿದರು. ಗಣೇಶ ಬಿರಾದಾರ ವಂದಿಸಿದರು.

# ರಾಷ್ಟ್ರೀಯ ರೈತ ದಿನ ಆಚರಣೆ

(ಮಲ್ಲಪ್ಪಾಟಿ ಹಾಸಗೊಂಡ)
ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ತಾಲೂಕಿನ ಸಿಕಿಂದ್ರಾಬಾದ್ ವಾಡಿ ಗ್ರಾಮದಲ್ಲಿ ಎನ್‌ಎಲ್‌ಆರ್‌ಎಂ ಹಾಗೂ ಡಿಜಿಟಲ್ ಸಖಿ ಯೋಜನೆ ವತಿಯಿಂದ ಸೋಮವಾರ ರಾಷ್ಟ್ರೀಯ ರೈತ ದಿನ ಆಚರಿಸಲಾಯಿತು.

ಮುಖಂಡ ರೇವಣಸಿದ್ಧ ಜಾಡರ್ ಮಾತನಾಡಿ,' ಮಾಜಿ ಪ್ರಧಾನಿ ಚರಣ್ ಸಿಂಗ್ ಅವರ ಸಮರ್ಪಣೆ ಮತ್ತು ಸೇವಾ ಮನೋಭಾವ ಎಲ್ಲರಿಗೂ ಸ್ಫೂರ್ತಿಯಾಗಿದೆ. ರೈತರ ಕಲ್ಯಾಣಕ್ಕಾಗಿ ಅವರ ಕೊಡುಗೆ ಅಪಾರ. ಹೀಗಾಗಿ ಪ್ರತಿವರ್ಷ ಅವರ ಜಯಂತಿಯನ್ನು ರಾಷ್ಟ್ರೀಯ ರೈತ ದಿನಾಚರಣೆಯನ್ನಾಗಿ ಆಚರಣೆ ಮಾಡಲಾಗುತ್ತದೆ' ಎಂದು ತಿಳಿಸಿದರು.

'ರೈತರು ಕೃಷಿ ಚಟುವಟಿಕೆಗಳಲ್ಲಿ ವೈಜ್ಞಾನಿಕವಾಗಿ ಹಾಗೂ ತಂತ್ರಜ್ಞಾನ ಬಳಸಿ ಸರ್ವಾಂಗೀಣವಾಗಿ ಅಭಿವೃದ್ಧಿ ಹೊಂದಬೇಕು' ಎಂದರು. ಮುಖಂಡರಾದ ಸಿದ್ದಪ್ಪ ಚಾಮರಡ್ಡಿ, ಪ್ರಗತಿಪರ ರೈತರಾದ ರಾಮರೆಡ್ಡಿ ಹಿರಾಣೆ, ಭೀಮಶಾ, ನಾರಾಯಣ, ತುಳಜಪ್ಪ ಎಲ್ ಸಿ ಆರ್ ಪಿ ಪಂಚಶೀಲಾ, ಸಂಗೀತಾ, ಪ್ರಭಿತಾ, ಸವಿತಾ ಸೇರಿದಂತೆ ರೈತರು, ರೈತ ಮಹಿಳೆಯರು ಭಾಗವಹಿಸಿದ್ದರು.

# ಪ್ರತಿಯೊಬ್ಬರಿಗೂ ಗ್ರಾಹಕರ ರಕ್ಷಣೆ ಕಾಯ್ದೆಯ ಅರಿವು ಅಗತ್ಯ



ಬಳ್ಳಾರಿ,ಡಿ.25: ಹಣ ನೀಡಿ ಸೇವೆ ಸ್ವೀಕರಿಸುವ ಪ್ರತಿಯೊಬ್ಬರೂ ಗ್ರಾಹಕರಾಗಿದ್ದು, ಸೇವೆಯಲ್ಲಿ ಲೋಪವಾದಾಗ ಗ್ರಾಹಕರ ರಕ್ಷಣೆ ಕಾಯ್ದೆ-1986ರ ಕುರಿತು ಅರಿವು ಹೊಂದುವುದು ಅಗತ್ಯವಾಗಿದೆ ಎಂದು ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಒಂದನೇ ಹೆಚ್ಚುವರಿ ನ್ಯಾಯಧೀಶರಾದ ವಿದ್ಯಾಧರ ಶಿರಹಟ್ಟಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆಹಾರ ಸುರಕ್ಷತಾ ಇಲಾಖೆ ಹಾಗೂ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ನಗರದ ಅಲ್ಲಿಪುರ ರಸ್ತೆಯ ವಿವಿಯ ಡಾ.ಬಿ.ಆರ್. ಅಂಬೇಡ್ಕರ್ ಸಭಾ ಭವನದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಜೀವಿಸುವ ಪ್ರತಿಯೊಬ್ಬರೂ ಒಂದಲ್ಲ ಒಂದು ರೀತಿ ವ್ಯಾಪಾರ ವಹಿವಾಟಿನಲ್ಲಿ ಭಾಗಿದಾರರಾಗುತ್ತಾರೆ. ವಸ್ತು-ಆಹಾರ ವಿಷಯ ಸೇರಿದಂತೆ ಗ್ರಾಹಕರು ಖರೀದಿಸುವ ಇನ್ನಿತರೆ ಸಾಮಾಗ್ರಿಗಳಲ್ಲಿ ರಾಜಿ ಸಲ್ಲ. ಗಾಳಿ, ಬೆಳಕು, ನೀರು ಶುದ್ಧವಾಗಿರುವಂತೆ ಹೇಗೆ ಬಯಸುತ್ತೇವೋ ಅದೇ ರೀತಿ ಗ್ರಾಹಕರು ಖರೀದಿಸುವ ಪ್ರತಿಯೊಂದು ವಸ್ತುವಿನಲ್ಲಿ ಶುಭ್ರತೆ, ಗುಣಮಟ್ಟ ಅಪೇಕ್ಷೆ ಪಡುವುದು ಗ್ರಾಹಕರ ಕರ್ತವ್ಯವಾಗಿದೆ ಎಂದರು.

ಗ್ರಾಹಕರು ವಸ್ತು-ಸಾಮಾಗ್ರಿ ಖರೀದಿಸುವ ಸಂಧರ್ಭದಲ್ಲಿ ಉತ್ಕೃಷ್ಟ ಹಾಗೂ ಉತ್ತಮ ಗುಣಮಟ್ಟಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಸೇವಾ ವಲಯ ಮತ್ತು ವಾಣಿಜ್ಯ ವಲಯ ಸೇರಿದಂತೆ ಇತರೆ ವಲಯಗಳಲ್ಲಿ ಗ್ರಾಹಕರು ನ್ಯೂನತೆ ಎದುರಿಸಿದಲ್ಲಿ ಕಾನೂನಾತ್ಮಕ ರಕ್ಷಣೆಗೆ ಮುಂದಾಗಬೇಕು ಎಂದು ತಿಳಿಸಿದರು.

ಪ್ರಸ್ತುತ ಡಿಜಿಟಲ್ ಮಾಧ್ಯಮದ ಯುಗವಾಗಿದೆ. ಗ್ರಾಹಕರು ತಮ್ಮ ಅಂಗೈಯಲ್ಲಿನ ಮೊಬೈಲ್ ಬಳಕೆಯಿಂದ ಅಗತ್ಯ ವಸ್ತುಗಳ ಖರೀದಿಗೆ ಮುಂದಾಗುತ್ತಾರೆ. ಆನ್‌ಲೈನ್ ವಹಿವಾಟಿನಲ್ಲಿ ಮೋಸ ಹೋಗುವ ಸಂಭವವಿದ್ದು, ಕಾನೂನು ತಿಳುವಳಿಕೆ ಇರಬೇಕು ಎಂದು ವಿದ್ಯಾರ್ಥಿ-ಗ್ರಾಹಕರಿಗೆ ಸಲಹೆ ನೀಡಿದರು.

ವಿವಿಯ ಕುಲಪತಿಗಳಾದ ಪ್ರೊ. ಎಂ.ಮುನಿರಾಜು ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ವಿದ್ಯಾವಂತ ಗ್ರಾಹಕರೇ ಹೆಚ್ಚು ವಂಚಿತರಾಗುತ್ತಿದ್ದು, ಅವರು ಎಚ್ಚೆತ್ತುಕೊಳ್ಳಬೇಕಿದೆ. ಅವಿದ್ಯಾವಂತರಿಗೆ ಮತ್ತು ತಮ್ಮ ನೆರೆ-ಹೊರೆಯರಿಗೆ ಗ್ರಾಹಕರ ರಕ್ಷಣೆಯ ಕಾನೂನು-ಕಾಯ್ದೆ ಕುರಿತು ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ತಿಪ್ಪೇಸ್ವಾಮಿ.ಎನ್ ಮಾತನಾಡಿ, ಹಣ ನೀಡಿ ಸೇವೆ ಪಡೆಯುವ ಎಲ್ಲರೂ ಗ್ರಾಹಕರೆ. ಗ್ರಾಹಕರು ಖರೀದಿಸುವ ವಸ್ತು ಅಥವಾ ಸಾಮಾಗ್ರಿಗಳಲ್ಲಿ ಲೋಪವಾದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಭೇಟಿ ನೀಡಿ ಅರ್ಜಿ ಸಲ್ಲಿಸಿದರೇ, ಗ್ರಾಹಕರ ಸಮಸ್ಯೆಗಳನ್ನು ಗಣನೆಗೆ ತೆಗೆದುಕೊಂಡು ಪರಿಹಾರ ಒದಗಿಸಿ ಕೊಡಲಾಗುತ್ತದೆ ಎಂದು ಹೇಳಿದರು.

ಗ್ರಾಹಕರು ಕಾನೂನಿನಾತ್ಮಕ ಹಕ್ಕುಗಳಾದ ಗ್ರಾಹಕರ ರಕ್ಷಣಾ ಹಕ್ಕು, ಮಾಹಿತಿ ಪಡೆಯುವ ಹಕ್ಕು, ಆಯ್ಕೆಯ ಹಕ್ಕು, ಅದಾಲತ್ ಹಕ್ಕು, ಪರಿಹಾರ ಪಡೆಯುವ ಹಕ್ಕು, ಆರೋಗ್ಯ ಪೂರ್ಣ ಪರಿಸರ ಹಕ್ಕುಗಳ ಕುರಿತು ಜ್ಞಾನ ಹೊಂದಬೇಕು. ಯಾವುದೇ ವಸ್ತು-ಸಾಮಾಗ್ರಿ ಖರೀದಿಸಿದಾಗ ರಸೀದಿ ಪಡೆಯಬೇಕು ಎಂದು ತಿಳಿಸಿದರು.

ಹಿರಿಯ ವಕೀಲರಾದ ಎನ್.ಪ್ರಕಾಶ್ ಅವರು ಕಾರ್ಯಕ್ರಮ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಈ ಸಂಧರ್ಭದಲ್ಲಿ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಸಚಿವರಾದ ರುದ್ರೇಶ್, ಹಿರಿಯ ಸಿವಿಲ್ ನ್ಯಾಯಾಧೀಶರಾದ ಇಬ್ರಾಹಿಂ ಮುಜಾವರ್, ಕಾನೂನು ಮಾಪನ ಶಾಸ್ತ್ರದ ಸಹಾಯಕ ನಿಯಂತ್ರಕರಾದ ಅಮೃತಾ ಪಿ.ಚವ್ಹಾಣ, ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಬಿಜೆಪಿ ಪಕ್ಷದ ಕಾರ್ಯಾಲಯದಲ್ಲಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನ ಆಚರಣೆ



(ವೀರಯ್ಯ ವಿ ಹಿರೇಮಠ)
ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ಮಾಜಿ ಪ್ರಧಾನಿ ಭಾರತ ರತ್ನ ದಿ. ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನದ ಸ್ಮರಣಾರ್ಥ ಆಚರಿಸುವ ದಿನದ ನಿಮಿತ್ತ ಇಂದು ಮಾಜಿ ಸಚಿವರಾದ ಹಾಲಪ್ಪ ಆಚಾರ ರವರು ಮಸಬಹಂಚಿನಾಳದ ಬಿಜೆಪಿ ಪಕ್ಷದ ಕಾರ್ಯಾಲಯದಲ್ಲಿ ಧ್ವಜಾರೋಹಣ ಮಾಡಿ ಅಟಲ್ ಬಿಹಾರಿ ವಾಜಪೇಯಿ ಅವರ ಭಾವಚಿತ್ರಕ್ಕೆಪುಷ್ಪನಮನಸಲ್ಲಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಮಂಡಲ ಅಧ್ಯಕ್ಷರಾದ ಮಾರುತಿ ಗಾವರಾಳ, ಶಿವಕುಮಾರ್ ನಾಗಲಾಪುರಮಠ, ಬಸನಗೌಡ ತೊಂಡಿಹಾಳ, ಮಂಜುನಾಥ ನಾಡಗೌಡ, ಶಂಬಣ್ಣ ಜೋಳದ, ಬಸವರಾಜ ಹಾಳಕೇರಿ ಹಾಗೂ ಪಟ್ಟಣ ಪಂಚಾಯತ ಸದಸ್ಯರು, ಪಕ್ಷದ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಬಸವೇಶ್ವರ ಸಹಕಾರಿ ಬ್ಯಾಂಕಿಗೆ ಅವಿರೋಧ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.25–ನಗರದ ಬಸವೇಶ್ವರ ಸಹಕಾರಿ ಬ್ಯಾಂಕಿನ ನೂತನ ನಿರ್ದೇಶಕ ಮಂಡಳಿಗೆ ಅವಿರೋಧ ಆಯ್ಕೆ ನಡೆದಿದೆ.

ಬ್ಯಾಂಕಿನ ಒಟ್ಟು 17 ಸ್ಥಾನಗಳಿಗೆ 21 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದರು.ನಾಮಪತ್ರಹಿಂಪಡೆಯಲು ಕೊನೆಯ ದಿನವಾಗಿದ್ದ ಡಿ.23 ರಂದು 4 ಜನ ತಮ್ಮ ನಾಮಪತ್ರ ವಾಪಸ್ಸುಪಡೆದುಕೊಂಡಿದ್ದರಿಂದ ಎಲ್ಲ 17 ಸ್ಥಾನಗಳಿಗೆ ಅವಿರೋಧ ಆಯ್ಕೆ ನಡೆಯಿತು ಎಂದು ಚುನಾವಣಾಧಿಕಾರಿ ದಾನಯ್ಯ ಹಿರೇಮಠ ಹಾಗೂ ಸಹಾಯಕ ಚುನಾವಣಾಧಿಕಾರಿ ಆರ್.ಎನ್. ಗಡ್ಡಿ ತಿಳಿಸಿದ್ದಾರೆ.

ಸಾಮಾನ್ಯ ಕ್ಷೇತ್ರದಿಂದ ಚಂದ್ರಶೇಖರಗೌಡ ತಮ್ಮನಗೌಡ ಪಾಟೀಲ, ಪ್ರಕಾಶ ಈಶ್ವರಪ್ಪ ತಪಶೆಟ್ಟಿ, ಮೋಹನ ಗುರುಲಿಂಗಪ್ಪ ವಾಲಿ, ರವಿಕುಮಾರ ಯೋಗಪ್ಪ ಪಟ್ಟಣದ, ವೀರಪ್ಪವಿರುಪಾಕ್ಷಪ್ಪಶಿರಗಣ್ಣವರ, ಶಂಕರ ಸಂಗಪ್ಪ ಅರಿಶಿನಗೋಡಿ, ಶಶಿಧರ ಶಿವಯೋಗಪ್ಪ ಜಿಗಳೂರ, ಶ್ರೀನಿವಾಸ ತಿಮ್ಮಯ್ಯ ಬಳ್ಳಾರಿ, ಶ್ರೀ ಶೈಲ ಚನ್ನಬಸಪ್ಪ ಆರಬ್ಬಿ, ಸಿದ್ದಪ್ಪ ಚಿನ್ನಪ್ಪ ಆಡಿನ, ಸುನೀಲ ಬಾಳಾಸಾಹೇಬ ಕಲಬುರ್ಗಿ ಆಯ್ಕೆಯಾಗಿದ್ದಾರೆ.

ಪರಿಶಿಷ್ಟ ಜಾತಿ ಕ್ಷೇತ್ರದಿಂದ ಹೂವಪ್ಪ ಸೀತಪ್ಪ ರಾಠೋಡ, ಪರಿಶಿಷ್ಟ ಪಂಗಡ ಕ್ಷೇತ್ರದಿಂದ ದುರ್ಗಪ್ಪ ತಿಮ್ಮಣ್ಣ ನಾಯಕ, ಹಿಂದುಳಿದ 'ಅ' ವರ್ಗದಿಂದ ಶರಣಪ್ಪ ಸಂಗಪ್ಪ ಹೆರಕಲ್ಲ, ಹಿಂದುಳಿದ 'ಬ' ವರ್ಗದಿಂದ ಶಂಕರಲಿಂಗ ಮೋನಪ್ಪ ತಪಶೆಟ್ಟಿ ಹಾಗೂ ಮಹಿಳಾ ಕ್ಷೇತ್ರದಿಂದ ಗೀತಾ ಸುಭಾಸಚಂದ್ರ ನಾರಾ ಮತ್ತುಶೈಲಜಾ ಮಹಾಬಳೇಶ್ವರಯ್ಯ ಗುಡಗುಂಟಿ ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

## ಬಾಗಲಕೋಟೆ ಜಿಲ್ಲೆಯಲ್ಲಿ ಸಂಭ್ರಮದ ಕ್ರಿಸ್‌ಮಸ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.25–ಮನುಕುಲಕ್ಕೆ ಪ್ರೀತಿ, ಶಾಂತಿಯ ಸಂದೇಶ ಸಾರಿದ ಏಸುಕ್ರಿಸ್ತರ ಜನ್ಮದಿನದ ಅಂಗವಾಗಿ ಬುಧವಾರ ಬಾಗಲಕೋಟೆ ನಗರ ಸೇರಿದಂತೆ ಜಿಲ್ಲೆಯ ವಿವಿಧ ಕಡೆಗಳಲ್ಲಿ ಕ್ರೈಸ್ತ ಧರ್ಮಿಯರು ಕ್ರಿಸ್‌ಮಸ್ ಹಬ್ಬವನ್ನುಸಂಭ್ರಮದಿಂದ ಆಚರಿಸಿದರು.

ಕ್ರೈಸ್ತ ಸಮುದಾಯದವರು ಕುಂಟುಬದಸದಸ್ಯರು,ಮಕ್ಕಳೊಂದಿಗೆ ಮಂಗಳವಾರ ರಾತ್ರಿಯಿಂದಲೇ ಚರ್ಚಗಳಿಗೆ ತೆರಳಿ ಮೋಂಬತ್ತಿ ಬೆಳಗಿ, ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಸಮುದಾಯದ ಜನರಲ್ಲಿ ಬುಧವಾರ ಹಬ್ಬದ ವಾತಾವರಣ ಸೃಷ್ಠಿಯಾಗಿದ್ದು, ಮಕ್ಕಳಾದಿಯಾಗಿ ಎಲ್ಲರೂ ಹೊಸ ಬಟ್ಟೆ ತೊಟ್ಟು, ಪರಸ್ಪರ ಶುಭಾಶಯ ಕೋರುತ್ತ, ಕೇಕ್ ಕತ್ತರಿಸಿ ಸಿಹಿ ಹಂಚಿ ಹಬ್ಬವನ್ನುಸಡಗರದಿಂದ ಆಚರಿಸಿ ಸಂಭ್ರಮಿಸಿದರು.

ಬಾಗಲಕೋಟೆ ನವನಗರ, ಹಳೇ ಬಾಗಲಕೋಟೆ, ಮುಧೋಳ, ಜಮಖಂಡಿ, ಬಾದಾಮಿ ಸೇರಿದಂತೆ ಜಿಲ್ಲೆಯ ವಿವಿಧೆಡೆ ಕ್ರೈಸ್ತ ಧರ್ಮಿಯರು ಮಂಗಳವಾರ ರಾತ್ರಿಯಿಂದ ಚರ್ಚಗಳಲ್ಲಿ ಪ್ರಾರ್ಥನೆ ಸಲ್ಲಿಸಿದರಲ್ಲದೇ, ಕೆಲವೆಡೆ ಪಾದ್ರಿಗಳು ಕ್ರಿಸ್‌ಮಸ್ ಹಬ್ಬದ ಮಹತ್ವಸಾರುವ ಪ್ರವಚನ ನೀಡಿದರು.

ಚರ್ಚಗಳು ವಿಶೇಷಅಲಂಕಾರದಿಂದ ಕಂಗೊಳಿಸಿದವಲ್ಲದೇ, ವಿದ್ಯುತ್ ದೀಪಗಳಿಂದ ಜಗಮಗಿಸಿದವು. ಅಲ್ಲಲ್ಲಿ ಏಸುವಿನ ಬಾಲ್ಯ, ಬದುಕಿನ ಚರಿತ್ರೆ ಹೇಳುವ ಚಿತ್ರಪಟ, ಗೊಂಬೆಗಳ ಪ್ರದರ್ಶನ ಮಾಡಲಾಗಿದ್ದು ಮಕ್ಕಳು, ಮಹಿಳೆಯರು ವೀಕ್ಷಿಸಿದರು.

ನವನಗರ, ಹಳೇ ಬಾಗಲಕೋಟೆ, ಗುಳೇದಗುಡ್ಡ,ಮುಧೋಳ,ಜಮಖಂಡಿ, ಬಾದಾಮಿ ತಾಲೂಕಿನ ಮುಷ್ಠಿಗೇರಿ, ಆಡಗಲ್, ಆಸಂಗಿ ಸೇರಿದಂತೆ ಕ್ರೈಸ್ತ ಸಮುದಾಯದವರು ನೆಲೆಸಿರುವ ಊರುಗಳಲ್ಲಿ ಕ್ರಿಸ್‌ಮಸ್‌ನ್ನು ಸಂಭ್ರಮ, ಸಡಗರದಿಂದ ಆಚರಿಸಲಾಯಿತು.

## ಸಂಯಮ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಡಿಸೆಂಬರ್ 25–ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ 2024–25ನೇ ಸಾಲಿನ "ಸಂಯಮ ಪ್ರಶಸ್ತಿ"ಗೆ ಅರ್ಜಿ ಆಹ್ವಾನಿಸಿದೆ. ವ್ಯಸನ ಮುಕ್ತ ಸಮಾಜ ನಿರ್ಮಾಣ. ಮದ್ಯ ಮತ್ತು ಮಾದಕ ವಸ್ತುಗಳಿಂದ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಹಾಗೂ ಮದ್ಯ ವ್ಯಸನಗಳನ್ನು ಗುರುತಿಸಿ ಅವರಗಳ ಜೀವನ ಪರಿವರ್ತನೆಗಾಗಿ ಮತ್ತು ಪುನಃ ವಸತಿಗಳಿಗಾಗಿ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿರುವ ಆಸಕ್ತಿಯುಳ್ಳ ವ್ಯಕ್ತಿ ಹಾಗೂ ಸಂಘ ಸಂಸ್ಥೆಗಳಿಗೆ 2025ರ ಜನವರಿ 15 ರೊಳಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ.

## ವಾಜಪೇಯಿ ದೇಶಭಕ್ತಿ ಯುವ ಶಕ್ತಿಗೆ ಪ್ರೇರಣೆ–ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,25–ಭಾರತದ ಅಣುಶಕ್ತಿಯನ್ನು ವಿಶ್ವಕ್ಕೆ ತೋರಿದ ಅಟಲ್ ಬಿಹಾರಿ ವಾಜಪೇಯಿ ಅವರ ದೇಶಭಕ್ತಿ ಯುವ ಶಕ್ತಿಗೆ ಪ್ರೇರಣೆಯಾಗಿದೆ ಎಂದು ಮಾಜಿ ಶಾಸಕ ವೀರಣ್ಣ ಚರಂತಿಮಠ ಹೇಳಿದರು.

ನಗರದ ಶಿವಾನಂದ ಜೀನ್ ದಲ್ಲಿರುವ ಬಿಜೆಪಿ ಕಾರ್ಯಾಲಯದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ 100 ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ಸಲ್ಲಿಸಿ ಮಾತನಾಡಿದರು.

ವಿಶ್ವದ ಬೆದರಿಕೆಗೆ ಅಂಜದೆ ಭಾರತದ ಅಣು ಶಕ್ತಿಯನ್ನು ತೊರಿಸಿದವರು ಅಟಲ್ ಬಿಹಾರಿ ವಾಜಪೇಯಿಯರವರು ಎಂದು ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಹೇಳಿದರು.

1998ರ ಮೇ 11ರಂದು ನಡೆದ ಪೋಖ್ರಾನ್ ಪರೀಕ್ಷೆಗಳು ವೈಜ್ಞಾನಿಕ ಪರಾಕ್ರಮವನ್ನು ತೋರಿಸಿದರೆ,13 ಪೋಖ್ರಾನ್ ಪರೀಕ್ಷೆಗಳ ಮೂಲಕ ಭಾರತದ ಸಾರ್ವಭೌಮತ್ವರಕ್ಷಿಸುವ ಅಟಲ್ ಜೀ ಅವರ ನಾಯಕತ್ವ ವಿಶ್ವಕ್ಕೆ ಪರಿಚಯವಾಯಿತು ಎಂದ ಚರಂತಿಮಠ, ಅಟಲ್ ಜೀ ಅವರ ಪ್ರಾಮಾಣಿಕ ದೇಶ ಸೇವೆ, ದೇಶಭಕ್ತಿ ಯುವಶಕ್ತಿಗೆ ಪ್ರೇರಣೆಯಾಗಿದೆ. ಅಂತೆಯೇ ಡಿ.25 ನ್ನು ಸುಶಾಸನ ದಿನವನ್ನಾಗಿ ಆಚರಿಸಲಾಗುತ್ತಿದೆ ಎಂದು ಹೇಳಿದರು.

ರಾಜ್ಯಸಭಾ ಸದಸ್ಯನಾರಾಯಣಸಾ ಭಾಂಡಗೆ ಮಾತನಾಡಿ, ಕಾರ್ಯಕರ್ತರ ಮಾರ್ಗದರ್ಶಕರು, ಅಜಾತ ಶತ್ರು, ವಾಜಪೇಯಿಯವರ ಆಡಳಿತ ಇಡೀ ದೇಶಕ್ಕೆ ಮಾದರಿಯಾಗಿ ಉಳಿದಿದೆ ಎಂದರು.

ಕಾರ್ಯಕ್ರಮದಲ್ಲಿ ಬಿಟಿಡಿಎ ಮಾಜಿ ಅಧ್ಯಕ್ಷ ಜಿ.ಎನ್.ಪಾಟೀಲ, ಬಸವರಾಜ ಯಂಕಂಚಿ, ಲಕ್ಷ್ಮೀನಾರಾಯಣ ಕಾಸಟ, ರಾಜು ನಾಯ್ಕರ, ನಗರ ಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾರಾವ, ಜೋತಿ ಭಜಂತ್ರಿ, ಸರಸ್ವತಿ ಕುರಬರ, ಶಿವಾನಂದ ಟವಳಿ, ಮುತ್ತಣ್ಣ ಬೆಣ್ಣೂರ, ಕೇಶವ ಭಜಂತ್ರಿ

ನಗರ ಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ಉಮೇಶ ಹಂಚಿನಾಳ.ಶ್ರೀಧರ ನಾಗರಬೆಟ್ಟ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಬಿಜೆಪಿ ಪಕ್ಷದ ಧ್ವಜಕ್ಕೆ ಪುಷ್ಪಾರ್ಚಣೆ ಮಾಡಿ ಅಟಲ್ ಜಿ ಅವರ ಗೀತ ಗಾಯನ ಮಾಡಲಾಯಿತು. ನಂತರ ಬೂತ್ ಅಧ್ಯಕ್ಷರ ಮನೆಗಳ ಮೇಲೆ ಬಿಜೆಪಿ ಪಕ್ಷದ ಧ್ವಜಾರೋಹಣ ಮಾಡಿ ಗೌರವ ಸಲ್ಲಿಸಲಾಯಿತು.

## ಸಂಘಟನೆಗಳಿಂದ ಸಮಾಜದ ಶ್ರೇಯೋಭಿವೃದ್ಧಿ: ಭಾಸ್ಕರ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.25–ಸಂಘ ಸಂಸ್ಥೆಗಳ ಸಾಮಾಜಿಕ ಕಾರ್ಯಗಳಿಂದ ಸಮುದಾಯದ ಶ್ರೇಯೋಭಿವೃದ್ಧಿ ಸಾಧ್ಯ ಎಂದು ಗದ್ದನಗಿರಿ ಮಳೆರಾಜೇಂದ್ರಸ್ವಾಮಿ ಮಠದ ಪೂಜ್ಯರಾದ ಭಾಸ್ಕರ ಮಹಾಸ್ವಾಮಿಗಳು ಹೇಳಿದರು.

ವಿದ್ಯಾಗಿರಿಯ ಕಾಳಿಕಾಂಬಾದೇವಿಯ ದೇವಸ್ಥಾನದ ಸಭಾಭವನದಲ್ಲಿ ಬುಧವಾರ ನಡೆದ ಬಾಗಲಕೋಟೆ ತಾಲ್ಲೂಕು ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ 2025ರ ದಿನದರ್ಶಿಕೆ ಬಿಡುಗಡೆ, ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಸಂಘಟನೆಯವರು ಸಮಾಜದ ಪ್ರತಿಭೆಗಳನ್ನು ಸಾಧಕರನ್ನು ಗುರುತಿಸಿ ಸನ್ಮಾನಿಸಿ ಪ್ರೋತ್ಸಾಹಿಸುವುದರ ಜೊತೆಗೆ ಸಮುದಾಯದ ಧಾರ್ಮಿಕ ಪರಂಪರೆಯನ್ನು ಮುಂದುವರೆಸುವ ಕಾರ್ಯಗಳನ್ನು ಮಾಡುತ್ತಿರುವುದು ಶ್ಲಾಘನೀಯ ಎಂದರು.

ಸಂಘದಿಂದ ಮುಂದಿನ ವರ್ಷದ ಎಪ್ರೀಲ್ ನಲ್ಲಿ ಉಚಿತ ಸಾಮೂಹಿಕ ಉಪನಯನ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸುತ್ತ್ಯಾರ್ಹವಾಗಿದ್ದು ಅದು ಯಶಸ್ವಿಯಾಗಲಿ ಎಂದು ಶ್ರೀಗಳು ಹಾರೈಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ, ಸಮುದಾಯ ಸಂಘಟಿತವಾಗಿ ಸರ್ಕಾರದ ಸೌಲಭ್ಯ ಪಡೆಯುಬೇಕು ಎಂದರು.

ಸಾನಿಧ್ಯ ವಹಿಸಿದ್ದ ನಾಲತವಾಡದ ಬ್ರಹ್ಮಾಂಡಬೇರಿ ಮಠದ ಪೂಜ್ಯ ಸುಧೀಂದ್ರ ಶ್ರೀಗಳು ಮಾತನಾಡಿ, ವಿಶ್ವಕರ್ಮ ಸಮಾಜ ಅತ್ಯಂತ ಪ್ರತಿಭಾವಂತ ಸಮಾಜವಾಗಿದ್ದು ಪ್ರತಿಭೆಗಳಿಗೆ ಕೊರತೆಯಿಲ್ಲ. ಇಂದು ಎಲ್ಲ ಕ್ಷೇತ್ರದಲ್ಲಿ ವಿಶ್ವಕರ್ಮ ಸಮಾಜದ ಸಾಧಕರು ಇದ್ದಾರೆ, ಅವರೆಲ್ಲ ಯುವಶಕ್ತಿಗೆ ಪ್ರೇರಣೆ ಎಂದರು.

ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ದೇವೇಂದ್ರ ಅಗಳತಕಟ್ಟಿ ಅಧ್ಯಕ್ಷತೆ ವಹಿಸಿದ್ದು, ಮುಂದಿನ ವರ್ಷ ಎಪ್ರೀಲ್ ತಿಂಗಳಲ್ಲಿ ಉಚಿತ ಉಪನಯನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಲ್ಲರೂ ಅದರ ಸದುಪಯೋಗ ತೆಗೆದುಕೊಳ್ಳಬೇಕು ಎಂದರು.

ನಾಗರಾಜ ಕಮ್ಮಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಭಾರತೀಯ ಸ್ಟೇಟ್ ಬ್ಯಾಂಕಿನ ಬಾಗಲಕೋಟ ಶಾಖೆಯ ಮುಖ್ಯ ವ್ಯವಸ್ಥಾಪಕರಾದ ಮಹಾಲಕ್ಷ್ಮೀ ತೋಟಗಂಟಿ, ವಿದ್ಯಾಗಿರಿ ವಿಶ್ವಕರ್ಮ ಸಮಾಜ ಅಭಿವೃದ್ಧಿ ಸಂಘದ ಅಧ್ಯಕ್ಷ ವಸಂತರಾವ ಕಮ್ಮಾರ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಸೇವಾ ನಿವೃತ್ತಿ ಹೊಂದಿದ ವೀರೇಂದ್ರ ಪತ್ತಾರ, ಚಿದಾನಂದ ಪತ್ತಾರ, ಉಳಿಯಪ್ಪ ಬಡಿಗೇರ, ಯಂಕಣ್ಣ ಬಡಿಗೇರ ಹಾಗೂ ರಾಘವೇಂದ್ರ ಕಮ್ಮಾರ, ಮಹೇಶ ಪತ್ತಾರ, ವಿನೋದಕುಮಾರ ಸೋನಾರ, ಅಶ್ವಿನಿ ಬಡಿಗೇರ, ನಾಗರಾಜ ಕಮ್ಮಾರ, ನಿರ್ಮಲಾ ಪತ್ತಾರ, ಶಾಂತಾ ಪತ್ತಾರ, ಭಾಸ್ಕರ ಕಮ್ಮಾರ, ಜಯಂತ ಬರಗಿ, ಮಂಜುಳಾ ಪತ್ತಾರ, ಲೀಲಾವತಿ ಬಡಿಗೇರ, ಪ್ರೀಯಾ ಪತ್ತಾರ ಅವರನ್ನು ಸನ್ಮಾನಿಸಲಾಯಿತಲ್ಲದೇ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಲಾಯಿತು.

### ಸಫಾಯಿ ಕರ್ಮಚಾರಿಗಳ ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಸಭೆ

## ಪೌರಕಾರ್ಮಿಕರಿಗೆ ಸೌಲಭ್ಯಗಳು ಸಮರ್ಪಕವಾಗಿ ತಲುಪಿಸಿ: ಡಿಸಿ ನಲಿನ್ ಅತುಲ್



(ವೀರಯ್ಯ ವಿ ಹಿರೇಮಠ)
ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಎಲ್ಲಾ ಪೌರಕಾರ್ಮಿಕರಿಗೆ ಸರ್ಕಾರದ ಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಿಸಿ ಎಂದು ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ನಗರಾಭಿವೃದ್ಧಿಕೋಶ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಸಫಾಯಿ ಕರ್ಮಚಾರಿಗಳ ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯತ್‌ಗಳಲ್ಲಿಕಾರ್ಯನಿರ್ವಹಿಸುವ ಪೌರಕಾರ್ಮಿಕರಿಗೆ ಪ್ರತಿ ತಿಂಗಳೂ ಸರಿಯಾಗಿ ವೇತನ ನೀಡುವುದರ ಜೊತೆಗೆ ಇಎಸ್‌ಐ ಮತ್ತು ಪಿಎಫ್ ವಂತಿಕೆಯನ್ನು ಸಕಾಲದಲ್ಲಿ ಪಾವತಿಸಬೇಕು. ಮಾಸಿಕ ವೇತನ ಹಾಗೂ ಇಎಸ್‌ಐ ಮತ್ತು ಪಿಎಫ್ ವಂತಿಕೆ ಪಾವತಿ ಯಾವುದಾದರೂ ಬಾಕಿ ಇದ್ದಲ್ಲಿ, ಅದನ್ನು ತ್ವರಿತವಾಗಿ ಪಾವತಿಸಲು ಕ್ರಮ ಕೈಗೊಳ್ಳಬೇಕು. ಪೌರಕಾರ್ಮಿಕರಿಗೆ ವರ್ಷದಲ್ಲಿ ಎರಡು ಜೊತೆ ಸಮವಸ್ತ್ರಗಳನ್ನು ಕಡ್ಡಾಯವಾಗಿ ವಿತರಿಸಿ, ಅವಶ್ಯಕತೆಗಳಿಗೆ ಅನುಗುಣವಾಗಿ ಸುರಕ್ಷಾ ಪರಿಕರಗಳಾದ ಮಾಸ್ಕ್, ಶೂಸ್, ಹ್ಯಾಂಡ್ ಗ್ಲೌಸ್, ರೇನಕೋಟ್ ಮತ್ತು ಹೆಲ್ಮೆಟ್‌ಗಳನ್ನು ಸರಿಯಾದ ಸಮಯದಲ್ಲಿ ವಿತರಣೆ ಮಾಡಬೇಕು. ಪ್ರತಿದಿನ ಉತ್ತಮ ಟಿಫಿನ್ ವ್ಯವಸ್ಥೆ ಮಾಡಬೇಕು ಎಂದರು.

ಪೌರಕಾರ್ಮಿಕರ ಆರೋಗ್ಯ ತಪಾಸಣೆಯನ್ನು ನಿಯಮಾನುಸಾರ ಕೈಗೊಳ್ಳಬೇಕು. ಅಲ್ಲದೇ ವಿವಿಧ ಯೋಜನೆಗಳಡಿ ಸಫಾಯಿ ಕರ್ಮಚಾರಿಗಳಿಗೆ ಇರುವ ಸೌಲಭ್ಯಗಳನ್ನೂ ಸಹ ನಿಗದಿತ ಅವಧಿಯಲ್ಲಿ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ ರಾಮ್ ಎಲ್ ಅರಸಿದ್ದಿ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಜಿ.ಪಂ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಿಲ್ಲಾ ನಗರಾಭಿವೃದ್ಧಿಕೋಶದ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೊಗಲದ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ತಹಶಿಲ್ದಾರರು, ಇ.ಓ.ಗಳು, ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು, ಸಫಾಯಿ ಕರ್ಮಚಾರಿಗಳ ಜಿಲ್ಲಾ ಮಟ್ಟದ ವಿಜಿಲೆನ್ಸ್ ಸಮಿತಿ ಸದಸ್ಯರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಸಿಟಿ ರವಿ ಅವರದ್ದು ಕೊಳಕು ಮನಸ್ಸಿನ ವ್ಯಕ್ತಿತ್ವ: ಮತ್ತೆ ಕಿಡಿಕಾರಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್



ಮಲ್ಲಮ್ಮ ನುಡಿ ವಾರ್ತೆ

ಬೆಳಗಾವಿ : ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿಟಿ ರವಿ ಅವರು ಮನಸ್ಸಿನಲ್ಲೇ ಕೊಳೆ ಇಟ್ಟುಕೊಂಡಿದ್ದಾರೆ. ಅದನ್ನು ಎಷ್ಟು ಬಾರಿ ತೊಳೆದರೂ ಹೋಗೋದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ವಾಗ್ದಾಳಿ ನಡೆಸಿದ್ದಾರೆ.

ಡಿಸೆಂಬರ್ 25ರಂದು ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಸಿಟಿ ರವಿ ಅವರೇ ನಿಮ್ಮ ನಾಲಿಗೆಯನ್ನು ಫಿನಾಯಿಲ್ ಹಾಕಿ ತೊಳೆಯಿರಿ. ಮೈಗೆ ಹಚ್ಚಿರೊ ಕೊಳಕನ್ನು ತೊಳೆಯಬಹುದು. ಮನಸ್ಸಿಗೆ ಹಚ್ಚಿರೋ ಕೊಳಕನ್ನು ತೊಳೆಯಲು ಸಾಧ್ಯವಿಲ್ಲ ಎಂದು ನನಗೂ ಹಿರಿಯರೊಬ್ಬರು ಹೇಳಿದ್ದಾರೆ," ಎಂದು ತಿರುಗೇಟು ನೀಡಿದರು.

"ಸಿಟಿ ರವಿ ಅವರ ಮನಸ್ಸಿನಲ್ಲೇ ಕೊಳಕಿದೆ. ಅಂತಹ ಕೊಳಕನ್ನು ತೊಳೆಯಲು ಸಾಧ್ಯವಿಲ್ಲ. ಅವರ ಆರೋಪದಿಂದ ಎರಡು ದಿನಗಳ ಕಾಲ ನಾನು ಸರಿಯಾಗಿ ನಿದ್ದೆ ಮಾಡಲಿಲ್ಲ," ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಅಂದು ವಿಧಾನ ಪರಿಷತ್ ಕಲಾಪದಲ್ಲಿ ಘಟನೆ ಆದ ಬಳಿಕ ನಾನು ಅಲ್ಲೆ ಕುಳಿತಿದ್ದೆ. ಅವರು ಊಸರವಳ್ಳಿ ಥರ ಓಡಿ ಹೋದರು. ತಕ್ಷಣವೇ ನಾನು ಎಂಎಲ್‌ಸಿ ಬಿಕೆ ಹರಿಪ್ರಸಾದ್, ಸಚಿವ ಎನ್‌ಎಸ್ ಬೋಸರಾಜು ಅವರಿಗೆ ಸಿಟಿ ರವಿ ಅವರು ಬಳಸಿದ ಭಾಷೆ ಬಗ್ಗೆ ವಿವರಿಸಿದೆ. ಎಂಎಲ್‌ಸಿಗಳಾದ ಡಾ. ಯತೀಂದ್ರ ಸಿದ್ದರಾಮಯ್ಯ, ಉಮಾಶ್ರೀ, ನಾಗರಾಜ್ ಯಾದವ್, ಬಿಲ್ಕಿಸ್ ಬಾನೋ, ಎಲ್ಲರೂ ನನ್ನ ಹತ್ತಿರ ಬಂದು, ಸಿಟಿ ರವಿ ಬಳಸಿದ ಅಶ್ಲೀಲ ಪದದ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದರು. ಬಳಿಕ ಎಲ್ಲಾ ನಾಯಕರು ಜೊತೆಗೂಡಿ ಸಭಾಪತಿ ಬಸವರಾಜ ಹೊರಟ್ಟಿ ಅವರ ಬಳಿ ಹೋದೆವು ಎಂದು ಸಚಿವರು ವಿವರಿಸಿದರು.

ನಮ್ಮ ಮಾತನ್ನು ಆಲಿಸಿದ ಸಭಾಪತಿ ಬಸವರಾಜ ಹೊರಟ್ಟಿ ಅವರೂ ಕಣ್ಣೀರು ಹಾಕಿದರು. ಬಳಿಕ ಅಲ್ಲಿದ್ದ ನಾಯಕರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಫೋನ್ ಮಾಡಿ ಘಟನೆಯನ್ನು ವಿವರಿಸಿದರು. ಯಾವುದೇ ಕಾರಣ–ಕ್ಕೂ ಧೈರ್ಯಗೇಡಬೇಡಿ, ನಾವೆಲ್ಲಾ ನಿಮ್ಮೊಂದಿಗಿದ್ದೇವೆ ಎಂದು ಆ ಸಮಯದಲ್ಲಿ ಎಲ್ಲರೂ ನನಗೆ ಧೈರ್ಯ ತುಂಬಿದರು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅಂದು ನಡೆದ ಘಟನೆಯನ್ನು ನೆನಪಿಸಿಕೊಂಡರು.

ಬೆಳಗಾವಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಎಂಎಲ್‌ಸಿ ಸಿಟಿ ರವಿ ಅವರಿಂದ ಆಕ್ಷೇಪಾರ್ಹ ಪದ ಬಳಕೆ ಆರೋಪ ಹಾಗೂ ಹೆಬ್ಬಾಳ್ಕರ್ ಬೆಂಬಲಿಗರಿಂದ ಸಿ.ಟಿ. ರವಿ ಅವರ ಮೇಲೆ ಹಲ್ಲೆಗೆ ಯತ್ನ, ನಿಂದನೆ ಪ್ರಕರಣಗಳ ತನಿಖೆಯನ್ನು ರಾಜ್ಯ ಸರಕಾರ ಸಿಐಡಿಗೆ ವಹಿಸಿದೆ.

ಚಳಿಗಾಲದ ಅಧಿವೇಶನದ ಕೊನೆಯ ದಿನವಾದ ಡಿಸೆಂಬರ್ 19ರಂದು ಪರಿಷತ್ತಿನಲ್ಲಿ ತಮ್ಮನ್ನು ಸಿಟಿ ರವಿ ಆಕ್ಷೇಪಾರ್ಹ ಶಬ್ದದಲ್ಲಿ ನಿಂದಿಸಿದ್ದಾರೆ ಎಂದು ಆರೋಪಿಸಿ ಲಕ್ಷ್ಮೀ ಹೆಬ್ಬಾಳ್ಕರ್ ದೂರು ದಾಖಲಿಸಿದ್ದರು. ಅಲ್ಲದೆ, ಸಿಟಿ ರವಿ ಅವರ ಮೇಲೆ ಹೆಬ್ಬಾಳ್ಕರ್ ಅವರ ಸುಮಾರು 10 ಜನ ಬೆಂಬಲಿಗರು ಹಲ್ಲೆಗೆ ಯತ್ನಿಸಿ, ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಲ್ಲದೆ, ಜೀವ ಬೆದರಿಕೆ ಒಡ್ಡಿರುವುದಾಗಿ ಬಿಜೆಪಿ ಸದಸ್ಯರು ಪರಿಷತ್ ಕಾರ್ಯದರ್ಶಿಗೆ ದೂರು ಸಲ್ಲಿಸಿದ್ದರು. ಕಾರ್ಯದರ್ಶಿಗಳು ಪೆಣಟಜಜಜಿಟಜಜಲೀಸ್ ಆಯುಕ್ತರಿಗೆ ದೂರು ಅರ್ಜಿ ವರ್ಗಾಯಿಸಿದ್ದರು. ಬಳಿಕ ಹಿರೇಬಾಗೇವಾಡಿ ಠಾಣೆ ಪೊಲೀಸರು ಸ್ವ ಪ್ರೇರಿತರಾಗಿ ಪ್ರಕರಣ ದಾಖಲಿಸಿಕೊಂಡಿದ್ದರು.

ಇದೀಗ ಎರಡೂ ಪ್ರಕರಣಗಳನ್ನು ಸಿಐಡಿ ತನಿಖೆಗೆ ವಹಿಸಲಾಗಿದೆ. ಇದೇ ವೇಳೆ ಖಾನಾಪುರ ಪೆಣಟಿಜಜಜಿಟಿಜಜಲೀಸ್ ಠಾಣೆಯಲ್ಲಿ ಸಿಟಿ ರವಿ ಅವರು ಪ್ರತಿಪಕ್ಷದ ನಾಯಕ ಹಾಗೂ ಉಪನಾಯಕರ ಸಮ್ಮುಖದಲ್ಲಿ ದಾಖಲಿಸಿದ್ದ ದೂರು ಅರ್ಜಿ ಇನ್ನೂ ಪರಿಶೀಲನೆ ಹಂತದಲ್ಲಿದೆ ಎಂದು ಪೆಣಟಿಜಜಜಿಟಿಜಜಲೀಸರು ತಿಳಿಸಿದ್ದಾರೆ.

## ಡಿಸೆಂಬರ್ 27ರವರೆಗೆ ಮ್ಯಾನುವೇಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ

(ಪವನ ಕೊಡಹೊನ್ನ)
ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ, ಡಿಸೆಂಬರ್, 24 (ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ, ಭಾರತ ಸರ್ಕಾರದ ಅಧೀನ ಸಂಸ್ಥೆಯಾದ ರಾಷ್ಟ್ರೀಯ ಸಫಾಯಿ ಕರ್ಮಚಾರಿಗಳ ಆರ್ಥಿಕ ಮತ್ತು ಅಭಿವೃದ್ಧಿ ಕಾರ್ಪೋರೇಷನ್ ವತಿಯಿಂದ ಡಿಸೆಂಬರ್ 23ರಿಂದ ಡಿಸೆಂಬರ್ 27ರವರೆಗೆ ಮ್ಯಾನುವೇಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕಾಧಿಕಾರಿ ರಿಷಿ ಆನಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. 2013 ಅಥವಾ ತದನಂತರ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಕೆಲಸದಲ್ಲಿ ತೊಡಗಿಸಿಕೊಂಡವರು, ಒಣ ಮಲದ ಗುಂಡಿಗಳ ಶೌಚಾಲಯಗಳನ್ನು ಸ್ವಚ್ಛಗೊಳಿಸುವುದು, ತೆರೆದ ಮತ್ತು ಸ್ವಚ್ಚತೆ ಇಲ್ಲದ ಗುಂಡಿಯಲ್ಲಿ ಸಂಗ್ರಹವಾಗಿರುವ ಅನಾರೋಗ್ಯಕರ ಶೌಚಾಲಯಗಳ ಮಾನವರು ಮಲವನ್ನು ಶುಚಿಗೊಳಿಸುವುದು. ಒಂದು ಗುಂಡಿಯ ಶೌಚಾಲಯವನ್ನು ದೈಹಿಕ ಶ್ರಮದಿಂದ ಸ್ವಚ್ಛಗೊಳಿಸುವುದು, ಶೌಚಾಲಯದಿಂದ ಮಲ ಸೇರುವ ಚರಂಡಿಗಳನ್ನು ಸ್ವಚ್ಛಗೊಳಿಸುವ ಯಾವುದೇ ವ್ಯಕ್ತಿಗಳು ಇದ್ದಲ್ಲಿ, ವಿಜಯಪುರ ಜಿಲ್ಲೆಯ ಕೆಳಕಂಡ ಸ್ಥಳದಲ್ಲಿ ಆಯೋಜಿಸಿರುವ ಸಮೀಕ್ಷೆ ಮತ್ತು ಗುರುತಿಸುವಿಕೆಯ ಶಿಬಿರದಲ್ಲಿ ಭಾಗವಹಿಸಿ ಹೆಸರನ್ನು ನೋಂದಾಯಿಸಿಕೊಳ್ಳುವುದು.

ವಿಜಯಪುರ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 23ರಂದು ಬೆಳಿಗ್ಗೆ 10 ಗಂಟೆಗೆ (ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 9945413205, 8123376770), ತಿಕೋಟಾ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 23ರಂದು ಬೆಳಿಗ್ಗೆ 10 ಗಂಟೆಗೆ (ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 7760710639, 6362578937), ಬಬಲೇಶ್ವರ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 23ರಂದು ಬೆಳಿಗ್ಗೆ 10 ಗಂಟೆಗೆ (ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 9591509136, 9535486949), ಇಂಡಿ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 24ರಂದು ಬೆಳಿಗ್ಗೆ 10ಗಂಟೆಗೆ (ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 9008540566, 903663750), ಚಡಚಣ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 24ರಂದು ಬೆಳಿಗ್ಗೆ 10 ಗಂಟೆಗೆ (ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 7338320712, 9741654563), ಆಲಮೇಲ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 24ರಂದು ಬೆಳಿಗ್ಗೆ 10 ಗಂಟೆಗೆ (ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 7619298678, 9880205465), ಸಿಂದಗಿ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 26ರಂದು ಬೆಳಿಗ್ಗೆ 10ಗಂಟೆಗೆ (ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 7899588187, 9880142325), ದೇವರ ಹಿಪ್ಪರಗಿ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 26ರಂದು ಬೆಳಿಗ್ಗೆ 10 ಗಂಟೆಗೆ (ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 8618163448, 7760402018), ಬಸವನ ಬಾಗೇವಾಡಿ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 26ರಂದು ಬೆಳಿಗ್ಗೆ 10 ಗಂಟೆಗೆ (ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 9663318242, 7899950120), ಕೋಲಾರ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 26ರಂದು ಬೆಳಿಗ್ಗೆ 10 ಗಂಟೆಗೆ(ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 9448337393, 9482058019), ಮುದ್ದೇಬಿಹಾಳ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 27ರಂದು ಬೆಳಿಗ್ಗೆ 10 ಗಂಟೆಗೆ (ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 9019795554, 9686315591), ತಾಳಿಕೋಟೆ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 27ರಂದು ಬೆಳಿಗ್ಗೆ 10 ಗಂಟೆಗೆ (ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 9019795554, 9880756960), ನಿಡಗುಂದಿ ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಡಿಸೆಂಬರ್ 27ರಂದು ಬೆಳಿಗ್ಗೆ 10 ಗಂಟೆಗೆ (ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 8722424848, 9148633482) ಇಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳುವುದು.

ಹೆಸರು ನೋಂದಾವಣೆಗೆ ಆಗಮಿಸುವ ವ್ಯಕ್ತಿಯು ಪಾಸ್ ಪೋರ್ಟ್ ಅಳತೆಯ ಒಂದು ಭಾವಚಿತ್ರ, ಬ್ಯಾಂಕ್ ಖಾತೆಯ ಪಾಸ್ ಬುಕ್ ಪ್ರತಿ, ಆಧಾರ್ ಪ್ರತಿ, ಪಡಿತರ ಚೀಟಿ, ಚುನಾವಣಾ ಗುರುತಿನ ಚೀಟಿ, ಬಿಪಿಎಲ್ ಕಾರ್ಡ್, ಮ್ಯಾನ್ಯುಯಲ್ ಸ್ಕ್ಯಾವೆಂಜರ್ ವೃತ್ತಿಯಲ್ಲಿ ತೊಡಗಿಸಿಕೊಂಡಿರುವ ವೈಯಕ್ತಿಕ ವಿವರಗಳನ್ನು ಸಾಬೀತು ಪಡಿಸುವ ದಾಖಲಾತಿಗಳು, ಮ್ಯಾನ್ಯುಯಲ್ ಸ್ಕ್ಯಾವೆಂಜರ್ನಲ್ಲಿ ತೊಡಗಿಸಿಕೊಂಡಿರುವ ಕುರಿತಂತೆ ಯಾವುದೇ ದಾಖಲಾತಿಗಳನ್ನು ಸಲ್ಲಿಸಬೇಕು. ಸದರಿ ದಾಖಲೆಗಳೊಂದಿಗೆ ಹಾಜರಾದ ಸಫಾಯಿ ಕರ್ಮಚಾರಿಗಳ ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಿ, ಸದರಿ ವೃತ್ತಿಯಿಂದ ಮುಕ್ತಿಗೊಳಿಸಿ. ಸ್ವಾವಲಂಬಿಗಳಾಗಿ ಬದುಕನ್ನು ಸಾಗಿಸಲು ಸರ್ಕಾರವು ವಿವಿಧ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಅದ್ದರಿಂದ ಈ ವೃತ್ತಿಯಲ್ಲಿ ತೊಡಗಿರುವ ಸಾರ್ವಜನಿಕರು ಈ ಸದಾವಕಾಶವನ್ನು ಬಳಸಿಕೊಳ್ಳಲು ತಮ್ಮ ಹೆಸರನ್ನು ತಪ್ಪದೇ ನೊಂದಾಯಿಸಿಕೊಳ್ಳಲು ಈ ಮೂಲಕ ಕೋರಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕಾಧಿಕಾರಿ ರಿಷಿ ಆನಂದ ತಿಳಿಸಿದ್ದಾರೆ.

